ಮೈಸೂರು ಮಿತ್ರ


ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಅಕ್ಟೋಬರ್ 21 ಸೋಮವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 185 | ಪುಟಗಳು: 10
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಮುಡಾ ಕಚೇರಿ ಮೇಲೆ 41 ಗಂಟೆಗಳ ಸುದೀರ್ಘ

ಇಡಿ ದಾಳಿ ಅಂತ್ಯ

ನಿವೇಶನ ಹಂಚಿಕೆ ಸಂಬಂಧ ಪ್ರಮುಖ ದಾಖಲೆಗಳ ಹಾರ್ಡ್‌ಡ್ರೈವ್‌ಗಳೊಂದಿಗೆ ಮುಂಜಾನೆ 2.30ರ ವೇಳೆಗೆ ಬೆಂಗಳೂರಿಗೆ ತನಿಖಾಧಿಕಾರಿಗಳು ವಾಪಸ್

ಮೈಸೂರು, ಅ.20(ಆರ್‌ಕೆ)– ಶೇ. 50:50ರ ಅನುಪಾತದಡಿ ನಿವೇಶನ ಹಂಚಿಕೆ ಪ್ರಕರಣದ ಹಿನ್ನೆಲೆಯಲ್ಲಿ ಮುಡಾ ಕಚೇರಿ ಮೇಲೆ ನಡೆದ ಇಡಿ (ಜಾರಿ ನಿರ್ದೇಶನಾಲಯ) ಅಧಿಕಾರಿಗಳ ದಾಳಿ ಅಂತ್ಯಗೊಂಡಿದೆ.

41 ಗಂಟೆಗಳ ನಿರಂತರ ದಾಳಿಯಲ್ಲಿ ತನಿಖೆ ವೇಳೆ ದೊರೆತ ಪ್ರಮುಖ ದಾಖಲೆಗಳು ಹಾಗೂ ಹಾರ್ಡ್‌ಡ್ರೈವ್‌ಗಳನ್ನು ವಶಕ್ಕೆ ಪಡೆದು ಇಂದು ಮುಂಜಾನೆ 2.30ರ ವೇಳೆಗೆ ಅಧಿಕಾರಿಗಳು ಬೆಂಗಳೂರಿಗೆ ಹಿಂದಿರುಗಿದರು. ಅ.18 ರಂದು ಬೆಳಗ್ಗೆ 10.45 ಗಂಟೆಗೆ ಸಿಆರ್‌ಪಿಎಫ್ ಸಿಬ್ಬಂದಿಗಳೊಂದಿಗೆ ಮುಡಾ ಕಚೇರಿ ಮೇಲೆ ದಿಢೀರ್ ದಾಳಿ ನಡೆಸಿದ ಇಡಿ ಅಧಿಕಾರಿಗಳು 41 ಗಂಟೆಗಳ ಕಾಲ ದಾಖಲಾತಿಗಳ ಶೋಧ ನಡೆಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಪತ್ನಿ ಬಿ.ಎಂ. ಪಾರ್ವತಿ ಮತ್ತು ಇತರರ ವಿರುದ್ಧ ಮನಿ ಲಾಂಡರಿಂಗ್ ಕಾಯ್ದೆ (ಪಿಎಂಎಲ್‌ಎ) ಯಡಿ ಇಸಿಐಆರ್ (Enforcement case information report) ಪ್ರಕರಣ ದಾಖಲಾದ ಹಿನ್ನೆಲೆಯಲ್ಲಿ ಇಡಿ ಅಧಿಕಾರಿಗಳು ಕೆಸರೆ ಗ್ರಾಮದ ಸರ್ವೆ ನಂ.464ರಲ್ಲಿ 3.16 ಎಕರೆ ಭೂಮಿಗೆ ಪರ್ಯಾಯವಾಗಿ ಪಾರ್ವತಿ ಹೆಸರಿಗೆ ವಿಜಯನಗರ 1, 3 ಮತ್ತು 4ನೇ ಹಂತದ ಬಡಾವಣೆಗಳಲ್ಲಿ ಅಭಿವೃದ್ಧಿಪಡಿಸಿದ 14 ನಿವೇಶನಗಳ ಹಂಚಿಕೆ ಮಾಡಿರುವ ಸಂಬಂಧ ಮುಡಾ ಕಚೇರಿಯನ್ನು ತಮ್ಮ ತೆಕ್ಕೆಗೆ ತೆಗೆದುಕೊಂಡು ಪರಿಶೀಲನೆ ಮಾಡಿದ್ದಾರೆ.



ಇಡಿ ಅಧಿಕಾರಿಗಳು ಶನಿವಾರ ಮುಡಾ ಕಚೇರಿಗೆ ಆಗಮಿಸುತ್ತಿರುವುದು.

20 ಮಂದಿ ಶಸ್ತ್ರಸಜ್ಜಿತ ಸಿಆರ್‌ಪಿಎಫ್ ಯೋಧರು, ಸ್ಥಳೀಯ ಸಿವಿಲ್ ಪೊಲೀಸರ ರಕ್ಷಣೆಯಲ್ಲಿ ಮುಡಾ ಕಚೇರಿಯನ್ನು ತಮ್ಮ ಹಿಡಿತಕ್ಕೆ ತೆಗೆದುಕೊಂಡಿದ್ದ ಇಡಿ ಅಧಿಕಾರಿಗಳು ಸಭಾಂಗಣದಲ್ಲಿ ಆಯುಕ್ತ ಎ.ಎನ್.ರಘುನಂದನ್, ಕಾರ್ಯದರ್ಶಿ ಪ್ರಸನ್ನಕುಮಾರ್ ಹಾಗೂ ಅಧೀನ ಅಧಿಕಾರಿಗಳನ್ನು ವಿಚಾರಣೆಗೊಳಪಡಿಸಿ ಸಿಎಂ ಪತ್ನಿ ಪಾರ್ವತಿ ಹೆಸರಿಗೆ ಮಂಜೂರಾಗಿದ್ದ 14 ನಿವೇಶನಗಳ ಸಂಬಂಧ ಅಗತ್ಯ ಮಾಹಿತಿ ಮತ್ತು ದಾಖಲೆಗಳನ್ನು ಪಡೆದುಕೊಂಡರು.

ತಾವು ವಶಕ್ಕೆ ಪಡೆದ ದಾಖಲೆಗಳನ್ನು ಡಿಜಿಟಲೈಸ್ ಮಾಡಿ ಹಾರ್ಡ್‌ಡ್ರೈವ್‌ಗಳಿಗೆ ಸ್ಟೋರ್ ಮಾಡಿಕೊಂಡಿದ್ದು, ಈ ಹಿಂದೆ ಮುಡಾಗೆ ನೋಟಿಸ್ ನೀಡುವಾಗ ಕೇಳಿದ 41 ಬಗೆಯ ಪ್ರಶ್ನೆಗಳಿಗೆ ಉತ್ತರ ಪಡೆದುಕೊಂಡಿದ್ದಾರೆ. ಶನಿವಾರ ತಡರಾತ್ರಿ ವರೆಗೂ ಶೋಧ ನಡೆಸಿದ ಇಡಿ ಅಧಿಕಾರಿಗಳು, ತಮಗೆ ದೊರೆತ ಪ್ರಮುಖ ದಾಖಲೆಗಳನ್ನು ಸಾಫ್ಟ್‌ವೇರ್‌ಗಳಿಗೆ ಹಾಕಿಕೊಂಡು ಮುಂಜಾನೆ ಕಾರ್ಯಾಚರಣೆ ಅಂತ್ಯಗೊಳಿಸಿ

8ನೇ ಪುಟಕ್ಕೆ

ಇಡಿ ಅಧಿಕಾರಿಗಳ ತನಿಖೆಗೆ ನಾವು ಸಂಪೂರ್ಣ ಸಹಕಾರ ನೀಡಿದ್ದೇವೆ. ಅವರು ಕೇಳಿದ ಮಾಹಿತಿ, ದಾಖಲಾತಿಗಳನ್ನು ಒದಗಿಸಿದೆವು. ಇಂದು ಮುಂಜಾನೆ ಬೆಂಗಳೂರಿಗೆ ಹಿಂದಿರುಗುವವರೆಗೂ ನಾವು ಮತ್ತು ಸಿಬ್ಬಂದಿ ತನಿಖಾ ತಂಡದೊಂದಿಗಿದ್ದೆವು. ಆ ವೇಳೆ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಸ್ವಲ್ಪ ತೊಂದರೆಯಾಗಿರಬಹುದು. ನಾಳೆ (ಅ.21)ಯಿಂದ ಕಚೇರಿಯಲ್ಲಿ ಎಂದಿನಂತೆ ಕೆಲಸ ನಡೆಯಲಿದೆ. ಆದರೆ ಲೋಕಾಯುಕ್ತ, ಇಡಿ ಅಧಿಕಾರಿಗಳ ದಾಳಿ, ತನಿಖೆಯು ಸಾರ್ವಜನಿಕರ ಸೇವೆಗೆಂದು ರಾಜ ಮಹಾರಾಜರ ಮಹತ್ವಾಕಾಂಕ್ಷೆಯಿಂದ ಸ್ಥಾಪಿತವಾದ ಮುಡಾ ಸಂಸ್ಥೆಗೆ ಕಪ್ಪುಚುಕ್ಕೆಯಾಗಿರುವುದು ಬೇಸರದ ಸಂಗತಿ.



-ಎ.ಎನ್.ರಘುನಂದನ್, ಮುಡಾ ಆಯುಕ್ತರು.

ಸಿಎಂ ಪತ್ನಿಗೆ ಶೇ. 50:50ರಡಿ ನಿವೇಶನ ಹಂಚಿಕೆ ಪ್ರಕರಣ

41 ಪ್ರಶ್ನೆಗಳಿಗೆ ಮುಡಾದಿಂದ ದಾಖಲಾತಿ ಪಡೆದ ಇಡಿ ಅಧಿಕಾರಿಗಳು

ಮೈಸೂರು, ಅ. 20(ಆರ್‌ಕೆ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಕಚೇರಿ ಮೇಲೆ ದಾಳಿ ನಡೆಸಿ ದಾಖಲೆಗಳ ಪರಿಶೀಲಿಸಿದ ಇಡಿ ಅಧಿಕಾರಿಗಳು, ಸಿಎಂ ಸಿದ್ದರಾಮಯ್ಯರ ಪತ್ನಿ ಬಿ.ಎಂ. ಪಾರ್ವತಿ ಅವರಿಗೆ ಮುಡಾದಿಂದ 14 ನಿವೇಶನ ಮಂಜೂರು ಮಾಡಿದ್ದ ಪ್ರಕರಣ ಕುರಿತಂತೆ 41 ಪ್ರಶ್ನೆಗಳಿಗೆ ಮಾಹಿತಿ ಮತ್ತು ದಾಖಲೆಗಳನ್ನು ಪಡೆದುಕೊಂಡರು.

ಕೆಲ ದಿನಗಳ ಹಿಂದೆಯೇ ಮುಡಾಗೆ ನೀಡಿದ್ದ ನೋಟಿಸ್‌ನೊಂದಿಗೆ 41 ಪ್ರಶ್ನೆಗಳನ್ನು ರವಾನಿಸಿ ಉತ್ತರಿಸಲು ಕೇಳಿದ್ದರು. ಇದೀಗ ಶುಕ್ರವಾರ ಮತ್ತು ಶನಿವಾರ ಮುಡಾ ಕಚೇರಿ ಮೇಲೆ ದಾಳಿ ನಡೆಸಿ ತನಿಖೆ ಮಾಡಿದಾಗ ಆ ಪ್ರಶ್ನೆಗಳಿಗೆ ಮುಡಾ ಅಧಿಕಾರಿಗಳಿಂದ ಉತ್ತರ ಪಡೆದುಕೊಳ್ಳಲಾಗಿದೆ.

2024ರ ಅಕ್ಟೋಬರ್ 5ರಂದು 4 ಪುಟಗಳ ಪ್ರಶ್ನೆಗಳನ್ನು ತಯಾರಿಸಿದ್ದ ಇಡಿ ಅಧಿಕಾರಿಗಳು, ಆ ಪ್ರತಿಯನ್ನೇ ದಾಳಿ ವೇಳೆ ತಂದು, ನಿವೇಶನ ಕೋರಿ ಸಿಎಂ ಪತ್ನಿ ಪಾರ್ವತಿ ಅವರು ಮುಡಾ ಆಯುಕ್ತರಿಗೆ ಸಲ್ಲಿಸಿದ್ದ ಮನವಿ ಪತ್ರ ಸೇರಿದಂತೆ 14 ನಿವೇಶನ ಮಂಜೂರಾತಿ ಆದೇಶ ಕುರಿತು 41 ಪ್ರಶ್ನೆಗಳಿಗೆ ಮಾಹಿತಿ ಪಡೆದುಕೊಳ್ಳಲಾಗಿದೆ.

ಕೆಸರೆ ಗ್ರಾಮದ ಸರ್ವೆ ನಂಬರ್ 464ರ ಭೂಮಿಯನ್ನು ದೇವನೂರು ವಸತಿ ಬಡಾವಣೆಗಾಗಿ ಭೂಸ್ವಾಧೀನಪಡಿಸಲು 1992ರ ಸೆಪ್ಟೆಂಬರ್ 18ರಂದು ಹೊರಡಿಸಿದ್ದ ಪ್ರಾಥಮಿಕ ಅಧಿಸೂಚನೆ, 1997ರ ಆಗಸ್ಟ್ 20ರಂದು ಮಾಡಿದ್ದ ಅಂತಿಮ ನೋಟಿಫಿಕೇಷನ್, ಆ ಪ್ರಕ್ರಿಯೆ ನಡೆಸಲು ಕಾನೂನಾತ್ಮಕ ಅವಕಾಶದ ಬಗ್ಗೆ ಇಡಿ ಪ್ರಶ್ನೆ ಕೇಳಿತ್ತು.

ದೇವನೂರು ಬಡಾವಣೆ ನಕ್ಷೆ: ದೇವನೂರು ವಸತಿ ಬಡಾವಣೆ ರಚಿಸಲು ತಯಾರಿಸಿದ್ದ ನಕ್ಷೆ, ಸರ್ವೆ ನಂಬರ್ 462 ಮತ್ತು 464ರ ಜಾಯಿಂಟ್ ಮೆಸರ್‌ಮೆಂಟ್ ಸರ್ವೆ (ಜೆಎಂಸಿ), ಪರಿಹಾರದ ಮೊತ್ತ ಪಾವತಿ, ದರ ನಿಗದಿ ಬಗ್ಗೆಯೂ ಇಡಿ ಮಾಹಿತಿ ಕೇಳಿತ್ತು.

1997ರ ಅಕ್ಟೋಬರ್ 31ರಿಂದ ಜನರಲ್ ಅವಾರ್ಡ್ ಮಾಡಿದ್ದರ ಪ್ರತಿಗಳು, ಜಿಲ್ಲಾಧಿಕಾರಿಗಳ ಅನುಮೋದನೆ, 1998ರ ಮಾರ್ಚ್ 30ರಿಂದ ಅವಾರ್ಡ್ ನೋಟಿಸ್, ಕೆಸರೆ ಸರ್ವೆ ನಂಬರ್ 462 ಮತ್ತು 464ರ ಭೂಮಿಗೆ ಪರಿಹಾರದ ಹಣ ಡೆಪಾಸಿಟ್ ಮಾಡಿರುವುದು ಹಾಗೂ ಭೂ ಮಾಲೀಕರಿಂದ ಜನರಲ್ ಅವಾರ್ಡ್ ಕ್ಲೇಮುಗಳೇನಾದರೂ ಮಾಡಿದ್ದರೇ ಎಂಬ ಪ್ರಶ್ನೆಯನ್ನೂ ಕೇಳಲಾಗಿತ್ತು.

ಇತರ ಹಂಚಿಕೆದಾರರ ಮಾಹಿತಿ: ಕೆಸರೆ ಸ.ನಂ. 462 ಮತ್ತು 464ರ ಭೂಮಿಯಲ್ಲಿ ರಚಿಸಿದ್ದ ನಿವೇಶನಗಳು, ನಕ್ಷೆ ನಡಾವಳಿಗಳು, ಅಲ್ಲಿ 19 ಮಂದಿಗೆ ನಿವೇಶನ ಹಂಚಿಕೆ ಮಾಡಿರುವ ಮಾಹಿತಿ, ಅವರಿಂದ

8ನೇ ಪುಟಕ್ಕೆ

ಮುಡಾ ಹಗರಣದಲ್ಲಿ ಒಂದೊಂದೇ ವಿಕೆಟ್ ಉರುಳುತ್ತಿದೆ

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಾರ್ಮಿಕ ನುಡಿ

ಮಂಡ್ಯ, ಅ.20– ಸಿಎಂ ಸಿದ್ದರಾಮಯ್ಯ ನನಗೆ ಮಣ್ಣಿನ ಮೇಲೆ ಆಸೆಯೇ ಇಲ್ಲ ಎಂದು ಪದೇ ಪದೆ ಹೇಳುತ್ತಾರೆ. ಒಂದು ಕಡೆ ಅವರು ಹಾಗೆ ಹೇಳುತ್ತಿದ್ದರೆ ಇನ್ನೊಂದು ಕಡೆ ಒಂದೊಂದೇ ವಿಕೆಟ್ ಉದುರುತ್ತಿದೆ. ಕಾಂಗ್ರೆಸ್ ಪಕ್ಷದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಏನು ಬೇಕಾದರೂ ಆಗಬಹುದು ಎನ್ನುವಂತೆ ಇವೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಾರ್ಮಿಕವಾಗಿ ನುಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನಗೆ ಐದು ವರ್ಷದ ಪೂರ್ಣ ಬಹುಮತದ ಸರ್ಕಾರ ಜನರು ನೀಡಬಹುದು ಎಂಬ ವಿಶ್ವಾಸ ಹೊಂದಿದ್ದೇನೆ. ನಾನು ವಿಶ್ವಾಸ ಇಟ್ಟುಕೊಳ್ಳಲು ಅವರ ಪರ್ಮಿಷನ್ ತಗೋ ಬೇಕಾ? 5 ವರ್ಷದ ಸರ್ಕಾರ ಬಂದರೆ

8ನೇ ಪುಟಕ್ಕೆ

ಯೋಗೇಶ್ವರ್‌ಗೆ ಕಾಂಗ್ರೆಸ್ ಸಂಪರ್ಕ, ಡಿಕೆಶಿ ಭೇಟಿ

- ಬಿಜೆಪಿಯ ಕೆಲವರು ಮೈತ್ರಿಗೆ ಹುಳಿ ಹಿಂಡುತ್ತಿದ್ದಾರೆ
- ಕೇಂದ್ರ ಸಚಿವ ಕುಮಾರಸ್ವಾಮಿ ಸ್ಫೋಟಕ ಹೇಳಿಕೆ

ಬೆಂಗಳೂರು, ಅ.20– ಸಿಪಿ ಯೋಗೇಶ್ವರ್ ಅವರು ಕಾಂಗ್ರೆಸ್ ನಾಯಕರ ಜತೆಯೂ ಸಂಪರ್ಕದಲ್ಲಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿದ್ದಾರೆ. ಬಿಜೆಪಿಯ ಕೆಲವರು ಕಾಂಗ್ರೆಸ್ ಜೊತೆ ಸೇರಿಕೊಂಡು ಮೈತ್ರಿಗೆ ಹುಳಿ ಹಿಂಡಲು ಪ್ರಯತ್ನಿಸುತ್ತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಭಾನುವಾರ ಸಂಜೆ ಮಂಡ್ಯ ಜಿಲ್ಲೆಯಿಂದ ಮರಳಿದ ನಂತರ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ನಿವಾಸದ ಬಳಿ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಚನ್ನಪಟ್ಟಣ ಉಪ ಚುನಾವಣೆ ಅಭ್ಯರ್ಥಿಯಾಗಿ ಯೋಗೇಶ್ವರ್ ಅವರಿಗೆ ಜೆಡಿಎಸ್ ಚಿಹ್ನೆ ಅಡಿ ನಿಲ್ಲಿಸಲಾಗುತ್ತದೆಯೇ ಎನ್ನುವ ಪ್ರಶ್ನೆಗೆ, ಸಿ.ಪಿ.ಯೋಗೇಶ್ವರ್ ಅವರು ಮೇಲಿದ್ದಾರೆ, ದೊಡ್ಡವರು. ಅವರ ಬಗ್ಗೆ ನಾನೇನು ಚರ್ಚೆ ಮಾಡಲಿ. ಅವರು ಏನು ಮಾಡುತ್ತಾರೆ ಎನ್ನುವುದು ನನಗೆ ಗೊತ್ತಿಲ್ಲ. ಅವರು ಕಾಂಗ್ರೆಸ್ ನಾಯಕರ ಸಂಪರ್ಕದಲ್ಲಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿದ್ದಾರೆ. ಪಕ್ಷದ ಮದ್ದೂರು ಕ್ಷೇತ್ರದ ಶಾಸಕರ ಜೊತೆ ಸಂಪರ್ಕದಲ್ಲಿದ್ದಾರೆ ಎಂದು ಚರ್ಚೆ ನಡೆಯುತ್ತಿದೆ. ಎಲ್ಲವನ್ನೂ ಬಿಜೆಪಿ ವರಿಷ್ಠ ನಾಯಕರು ಗಮನಿಸುತ್ತಿದ್ದಾರೆ ಎಂದರು.



ಏನಾದರೂ ಮಾಡಿ ಕುಮಾರಸ್ವಾಮಿ ವರ್ಚಸ್ಸು ಕುಗ್ಗಿಸಬೇಕು ಅನ್ನುವುದು ಕೆಲ ಕಾಂಗ್ರೆಸ್ ನಾಯಕರ ಉದ್ದೇಶ. ನಾನು ಎಲ್ಲಾ ಬಿಜೆಪಿ ನಾಯಕರ ಬಗ್ಗೆ ಹೀಗೆ ಹೇಳುತ್ತಿಲ್ಲ. ಕೆಲವರಿಗೆ ಈ ಮೈತ್ರಿಯನ್ನು ಜೀರ್ಣಿಸಿಕೊಳ್ಳುವುದು ಕಷ್ಟವಾಗುತ್ತಿದೆ. ಯೋಗೇಶ್ವರ್ ಅವರು ಉಪ ಮುಖ್ಯಮಂತ್ರಿಯನ್ನು ಈಗಾಗಲೇ ಎರಡು ಬಾರಿ ಭೇಟಿ ಮಾಡಿದ್ದಾರೆ ಅಂತ ಹೇಳಲಾಗುತ್ತಿದೆ. ಅವರು ಏತಕ್ಕೆ ಭೇಟಿ ಮಾಡಿದ್ದರು ಎಂಬುದು ನನಗೆ ಬೇಕಿಲ್ಲ ಎಂದು ಹೇಳಿದರು.

ಬಿಜೆಪಿಯ ಕೆಲವೇ ಕೆಲವರು ಕುಮಾರಸ್ವಾಮಿಗೆ ದೆಹಲಿ ಮಟ್ಟದಲ್ಲಿ ಉತ್ತಮ ಬಾಂಧವ್ಯ ಇದೆ. ಹೀಗಾಗಿ ಅವರಿಗೆ ಏನಾದರೂ ಸಮಸ್ಯೆ ಉದ್ಭವ ಮಾಡಬೇಕು ಎಂಬ ಕಾರಣಕ್ಕೆ ಇಂತಹ ಪ್ರಕರಣಗಳನ್ನು ದುರ್ಬಳಕೆ ಮಾಡಿಕೊಳ್ಳಲು ಪ್ರಯತ್ನ ಮಾಡುತ್ತಿದ್ದಾರೆ ಅಂತ ಕೆಲವರು ಮಾತಾಡಿ ಕೊಳ್ಳುತ್ತಿದ್ದಾರೆ. ಅದು ನನ್ನ ಕಿವಿಗೂ ಬಿದ್ದಿದೆ ಬಿಜೆಪಿ – ಜೆಡಿಎಸ್ ಮೈತ್ರಿಗೆ ಹುಳಿ ಹಿಂಡುವವರು ಬಹಳಷ್ಟು ಜನ ಇದ್ದಾರೆ. ಒಟ್ಟಾರೆ ಕುಮಾರಸ್ವಾಮಿಯನ್ನು ಹಾಳು

8ನೇ ಪುಟಕ್ಕೆ

ಚನ್ನಪಟ್ಟಣದಲ್ಲಿ ಜೆಡಿಎಸ್‌ನವರು ಯಾರು ಬೇಕೋ ಅವರ ಹೆಸರು ಘೋಷಣೆ ಮಾಡುತ್ತಾರೆ



ಬೆಂಗಳೂರು, ಅ.20– ಚನ್ನಪಟ್ಟಣ ಜೆಡಿಎಸ್ ಕ್ಷೇತ್ರ. ಅವರಿಗೆ ಯಾರು ಬೇಕೋ ಅವರ ಹೆಸರು ಘೋಷಣೆ ಮಾಡುತ್ತಾರೆ ಎಂದು ಮಾಜಿ ಸಿಎಂ ಹಾಗೂ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ತಿಳಿಸಿದರು. ಧವಳಗಿರಿ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಅಮಿತ್ ಶಾ ಅವರೂ ಚನ್ನಪಟ್ಟಣದಲ್ಲಿ ಜೆಡಿಎಸ್‌ನವರು ಅಭ್ಯರ್ಥಿ ಘೋಷಣೆ ಮಾಡುತ್ತಾರೆ ಅಂದಿದ್ದಾರೆ. ಬಿಜೆಪಿಯಿಂದ ಎರಡು ಕ್ಷೇತ್ರಗಳಿಗೆ ಅಭ್ಯರ್ಥಿ ಘೋಷಿಸಲಾಗಿದೆ. ಎರಡು ಪಕ್ಷಗಳೂ ಸೇರಿ ಮೂರೂ ಕ್ಷೇತ್ರ ಗೆಲ್ಲಲು ನಿರ್ಧಾರ ಆಗಿದೆ ಎಂದು ಸ್ಪಷ್ಟಪಡಿಸಿದರು.

ಬಿ.ಎಸ್. ಯಡಿಯೂರಪ್ಪ ಪತ್ನಿ ಸಾವಿನಲ್ಲಿ ಶೋಭಾ ಕರಂದ್ಲಾಜೆ ಪಾತ್ರದ ಬಗ್ಗೆ ಅನುಮಾನ

ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ವಿವಾದಾತ್ಮಕ ಹೇಳಿಕೆ



ಬೆಂಗಳೂರು, ಅ.20– ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಪತ್ನಿ ಮೈತ್ರಾದೇವಿ ಯಡಿಯೂರಪ್ಪ ಅವರ ಸಾವಿನಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ಪಾತ್ರವಿದೆ ಎಂಬ ಅನುಮಾನವಿದೆ ಅವರ ಸಾವಿನ ಬಗ್ಗೆಯೂ ತನಿಖೆ ಆಗಬೇಕು ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಭಾನುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಒಳ್ಳೆಯವರು. ಅವರ ಮಕ್ಕಳು ಕೂಡ ಒಳ್ಳೆಯವರು. ಹಾಗಾದರೆ, ಯಡಿಯೂರಪ್ಪನವರ ಪತ್ನಿ ಮೈತ್ರಾದೇವಿ ಅವರ ಸಾವು ಹೇಗಾಯ್ತು. ಆ ಸಾವಿನಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪಾತ್ರ ಇರುವ ಬಗ್ಗೆ ನನಗೆ ಅನುಮಾನ ಇದೆ. ಅವರ ಸಾವಿನ ಬಗ್ಗೆ ತನಿಖೆ ಆಗಬೇಕು. ಸಚಿವೆ ಶೋಭಾ ಕರಂದ್ಲಾಜೆ ಅವರ ಬಂಧನ ಆಗಬೇಕು. ಕೂಡಲೇ ಅವರು ಕೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಈ ಮೂಲಕ ಮೈಸೂರು ನಗರ ಅಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಡೆದ ನಿವೇಶನ ಹಂಚಿಕೆ ಪ್ರಕರಣದಲ್ಲಿ ಸಚಿವ ಭೈರತಿ ಸುರೇಶ್ ಅವರನ್ನು ಬಂಧಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ

8ನೇ ಪುಟಕ್ಕೆ

ವಿಧಾನಸಭೆ ಉಪಚುನಾವಣೆ ಮಹತ್ವದ್ದಾಗಿದೆ

ಮೂರು ಕ್ಷೇತ್ರದಲ್ಲೂ ಅಭ್ಯರ್ಥಿಗಳ ಗೆಲ್ಲಿಸಲೇಬೇಕು

- ಸಂಪುಟ ಸಹೋದ್ಯೋಗಿಗಳಿಗೆ ಸಿಎಂ ಸಿದ್ದರಾಮಯ್ಯ ತಾಕೀತು
- ಚನ್ನಪಟ್ಟಣದಲ್ಲಿ ಮಾಜಿ ಸಂಸದ ಡಿ.ಕೆ. ಸುರೇಶ್ ಸ್ಪರ್ಧೆ ಸಾಧ್ಯತೆ
- ಕಾಂಗ್ರೆಸ್‌ಗೆ ಬಂದರೆ ಸಿ.ಪಿ. ಯೋಗೇಶ್ವರ್ ಹೆಸರು ಪರಿಗಣನೆಗೆ

ಬೆಂಗಳೂರು, ಅ.20– ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆಯಲಿರುವ ಉಪ ಚುನಾವಣೆಯಲ್ಲಿ ಶತಾಯ–ಗತಾಯ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಲೇಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸಂಪುಟದ ಸಚಿವರಿಗೆ ತಾಕೀತು ಮಾಡಿದ್ದಾರೆ.

ವಿಧಾನಸಭೆಯ 3 ಕ್ಷೇತ್ರಗಳ ಉಪ ಚುನಾವಣೆ, ಜಾತಿ ಗಣತಿ ಸೇರಿದಂತೆ ಇತರ ವಿಚಾರಗಳಿಗಾಗಿ ಮುಖ್ಯಮಂತ್ರಿಗಳು ತಮ್ಮ ಅಧಿಕೃತ ನಿವಾಸ ಕಾವೇರಿಯಲ್ಲಿ ಸಚಿವರ ಸಭೆ ನಡೆಸಿದರು.

ಮೂರು ಕ್ಷೇತ್ರಗಳಲ್ಲೂ ನಮ್ಮ ಪಕ್ಷದ ಅಭ್ಯರ್ಥಿಗಳು ಗೆಲ್ಲುವ ಸಾಧ್ಯತೆ ಹೆಚ್ಚಾಗಿದೆ. ಆದ್ದರಿಂದ ಸಂಪೂರ್ಣವಾಗಿ ಶ್ರಮ ವಹಿಸಿ ಚುನಾವಣೆ ಕೆಲಸ ಮಾಡುವ ಮೂಲಕ ಅಭ್ಯರ್ಥಿಗಳನ್ನು ಗೆಲ್ಲಿಸಲೇಬೇಕು ಎಂದು ತಾಕೀತು ಮಾಡಿದರು. ಪ್ರತೀ ಚುನಾವಣೆ ಸಂದರ್ಭದಲ್ಲೂ ಬಿಜೆಪಿಯವರು ಸುಳ್ಳುಗಳನ್ನು ಹೇಳುತ್ತಾ ಮತದಾರರ ದಿಕ್ಕು ತಪ್ಪಿಸಲು ಪ್ರಯತ್ನಿಸುತ್ತಲೇ ಇರುತ್ತಾರೆ. ಹೀಗಾಗಿ ಬಿಜೆಪಿಯವರ ಸುಳ್ಳುಗಳನ್ನು ಜನರೆದುರು ಬಯಲು ಮಾಡಬೇಕು ಎಂದು ಸಚಿವರಿಗೆ ಮುಖ್ಯಮಂತ್ರಿಗಳು ಸೂಚಿಸಿದರು.

ಲೋಕಸಭಾ ಚುನಾವಣೆ ಮುಗಿದ ಮರುದಿನವೇ ಗ್ಯಾರಂಟಿ ಯೋಜನೆಗಳು ಸ್ಥಗಿತಗೊಳ್ಳುತ್ತವೆ ಎಂದು ಪ್ರಧಾನಿ ಮೋದಿಯವರಿಂದ ಹಿಡಿದು ಸಿ.ಟಿ.ರವಿಯವರೆಗೂ ರಾಶಿ–ರಾಶಿ ಸುಳ್ಳುಗಳನ್ನು ಹೇಳಿದ್ದರು. ಈ ಉಪ ಚುನಾವಣೆಯಲ್ಲೂ ಬಿಜೆಪಿಯವರು ಹೊಸ ಹೊಸ ಸುಳ್ಳುಗಳನ್ನು ಹೇಳುವ ಸಾಧ್ಯತೆ ಇದ್ದು, ಅವುಗಳಿಗೆ ಸರಿಯಾಗಿ ಕೌಂಟರ್ ಮಾಡಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಂಗಳೂರಿನ ತಮ್ಮ ಅಧಿಕೃತ ನಿವಾಸ ಕಾವೇರಿಯಲ್ಲಿ ಭಾನುವಾರ ಸಚಿವರ ಸಭೆ ನಡೆಸಿದರು.

ಉಪ ಚುನಾವಣೆ ಮುಗಿಯುವವರೆಗೂ ಕೇಂದ್ರ ಸರ್ಕಾರವು ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುವ ಪ್ರಮಾಣ ಇನ್ನೂ ಹೆಚ್ಚಲಿದೆ ಎಂದ ಮುಖ್ಯಮಂತ್ರಿಗಳು, ಅದರ ಬಗ್ಗೆ ತಲೆಕೆಡಿಸಿಕೊಳ್ಳದೇ ಚುನಾವಣೆ ಕಾರ್ಯವನ್ನು ಅಚ್ಚುಕಟ್ಟಾಗಿ ಮಾಡಬೇಕು ಎಂದರು.

ಜಾತಿ ಸಮೀಕ್ಷೆ, ಒಳ ಮೀಸಲಾತಿ, ಪಂಚಮಸಾಲಿ ಸಮುದಾಯದ ಬೇಡಿಕೆ ಕುರಿತಂತೆ ಬಿಜೆಪಿಯವರು ಅಪಪ್ರಚಾರ ಮಾಡುತ್ತಾರೆ. ಈ ವಿಚಾರಗಳ ಬಗ್ಗೆ ನಮ್ಮ ನಿಲುವು ಸ್ಪಷ್ಟವಾಗಿದ್ದು, ಆಯಾ ಸಮುದಾಯದ ಮುಖಂಡರು ಮತ್ತು ಜನಪ್ರತಿನಿಧಿಗಳ ಸಭೆ ನಡೆಸಿ, ಅವರಿಗೆ ನಮ್ಮ ಬೆಂಬಲ ಇರುವುದನ್ನು ಮನದಟ್ಟು ಮಾಡಿದ್ದೇವೆ. ಆದರೂ ಬಿಜೆಪಿ ಸರಣಿ ಸುಳ್ಳುಗಳ ಮೂಲಕ ಅಪಪ್ರಚಾರ ಮಾಡುತ್ತದೆ. ಸುಳ್ಳುಗಳ ಹೊರತಾಗಿ ಬಿಜೆಪಿಗೆ ಬೇರೆ ಬಂಡವಾಳ ಇಲ್ಲ. ಮೂರೂ ಕ್ಷೇತ್ರಗಳ ಉಪ ಚುನಾವಣೆ ಮಹತ್ವದ್ದಾಗಿದ್ದು, ಮೂರನ್ನೂ ಗೆಲ್ಲಲೇಬೇಕು. ಅದಕ್ಕಾಗಿ ಪ್ರತಿಯೊಬ್ಬರೂ ತಾವು ವಹಿಸಿಕೊಂಡ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿಗಳು ಸಚಿವರಿಗೆ ತಾಕೀತು ಮಾಡಿದರು.


ಈಗಾಗಲೇ ಸಂಡೂರು ಮತ್ತು ಶಿಗ್ಗಾವಿ ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿಗಳನ್ನು ಘೋಷಿಸಿದೆ. ಚನ್ನಪಟ್ಟಣ ಕ್ಷೇತ್ರದ ಬಗ್ಗೆ ಬಿಜೆಪಿ ಮತ್ತು ಜೆಡಿಎಸ್ ನಡುವೆ ಜಟಾಪಟಿ ನಡೆಯುತ್ತಿದೆ ಎಂಬ ವಿಚಾರವೂ ಸಭೆಯಲ್ಲಿ ಪ್ರಸ್ತಾಪವಾಯಿತು ಎಂದು ಹೇಳಲಾಗಿದೆ.

8ನೇ ಪುಟಕ್ಕೆ

ರಾಜ್ಯ ಸರ್ಕಾರಕ್ಕೆ ಜಾತಿ ಗಣತಿ ಮಾಡುವ ಅಧಿಕಾರ ಇಲ್ಲ

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ

ಬೆಂಗಳೂರು, ಅ.20– ರಾಜ್ಯ ಸರ್ಕಾರಕ್ಕೆ ಜಾತಿ ಗಣತಿ ಮಾಡುವ ಅಧಿಕಾರ ಇಲ್ಲ. ಕೇಂದ್ರ ಸರ್ಕಾರಕ್ಕೆ ಮಾತ್ರ ಜಾತಿ ಗಣತಿ ಮಾಡುವ ಅಧಿಕಾರವಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ಜಾತಿ ಜನಗಣತಿ ಕುರಿತು ಅಖಿಲ ಭಾರತ ವೀರಶೈವ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ತಮ್ಮನ್ನು ಭೇಟಿ ಮಾಡಿರುವ ಕುರಿತು ಪ್ರತಿಕ್ರಿಯಿಸಿರುವ ಅವರು, ಜಾತಿ ಗಣತಿ ವಿಚಾರದಲ್ಲಿ ನಮ್ಮ ನಿಲುವು ಸ್ಪಷ್ಟವಾಗಿದೆ. ಇದು ಜಾತಿ ಗಣತಿಯಲ್ಲ. ಸಾಮಾಜಿಕ ಆರ್ಥಿಕ ಸಮೀಕ್ಷೆ, ರಾಜ್ಯ ಸರ್ಕಾರಕ್ಕೆ ಜಾತಿ ಗಣತಿ ಮಾಡುವ ಅಧಿಕಾರ ಇಲ್ಲ. ಕೇಂದ್ರ ಸರ್ಕಾರಕ್ಕೆ ಮಾತ್ರ ಜಾತಿ ಗಣತಿ ಮಾಡುವ ಅಧಿಕಾರವಿದೆ. ಬಿಹಾರ ಸರ್ಕಾರದ ಜಾತಿ ಗಣತಿಗೂ ಸುಪ್ರೀಂ ಕೋರ್ಟ್ ತಡೆ ನೀಡಿದೆ. ಇವರು ಯಾವುದೋ ಸಮೀಕ್ಷೆ ಮಾಡಿ ಅದಕ್ಕೆ ಜಾತಿ ಗಣತಿಯ ಲೇಪನ ಮಾಡುತ್ತಿದ್ದಾರೆ ಎಂದು ಹೇಳಿದರು.

ಇನ್ನು ಈ ವರದಿ ವೈಜ್ಞಾನಿಕವಾಗಿಯೂ ಇಲ್ಲ, ಅಂಕಿ ಅಂಶ ಸಮರ್ಪಕವಾಗಿಲ್ಲ. ಹಲವು ಸಮುದಾಯಗಳಿಂದ ಆಕ್ಷೇಪಣೆ ಬಂದಿದೆ. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದ ಕಾಂತರಾಜ್ ಅವರು ಸಿದ್ಧಪಡಿಸಿದ್ದ ವರದಿ ಸಮರ್ಪಕವಾಗಿಲ್ಲ ಎಂದು ಅಂದಿನ ಆಯೋಗದ ಕಾರ್ಯದರ್ಶಿ ಹಾಗೂ ಸದಸ್ಯರು ಸಹಿ ಹಾಕಿರಲಿಲ್ಲ. ನಂತರ ಬಂದ ಆಯೋಗದ ಅಧ್ಯಕ್ಷರಾದ ಜಯಪ್ರಕಾಶ್ ಹೆಗಡೆ ಅವರು, ಯಾವುದೇ ಸಮೀಕ್ಷೆ ನಡೆಸದೇ ಹಿಂದಿನ ಆಯೋಗದ ಅಧ್ಯಕ್ಷರು ಸಿದ್ಧಪಡಿಸಿದ್ದ ವರದಿಯನ್ನೇ ಪರಿಷ್ಕರಿಸಿ ಸರ್ಕಾರಕ್ಕೆ ಸಲ್ಲಿಸಿದ್ದಾರೆ. ಈ ವರದಿಯನ್ನು ಒಕ್ಕಲಿಗ

8ನೇ ಪುಟಕ್ಕೆ

ಬೆಂಗಳೂರು ಅಗ್ನಿರಕ್ಷಾ ಸಂಸ್ಥೆ ನಿರ್ದೇಶಕಿ ಡಾ.ಪ್ರೇಮಾ ಧನರಾಜ್‌ಗೆ ಡಾ.ಮೃತ್ಯುಂಜಯಪ್ಪ ಆದರ್ಶ ವೈದ್ಯ ಸೇವಾ ಪ್ರಶಸ್ತಿ ಪ್ರದಾನ

● ಸಾಧಕರು ಸದಾ ಎಲೆಮರೆಕಾಯಂತೆ ಇರುತ್ತಾರೆ ● ನಿವೃತ್ತ ಪ್ರಾಧ್ಯಾಪಕ ಪ್ರೊ.ಚಂದ್ರಶೇಖರ್ ಅಭಿಮತ



ಬೆಂಗಳೂರು ಅಗ್ನಿರಕ್ಷಾ ಸಂಸ್ಥೆಯ ನಿರ್ದೇಶಕಿ ಡಾ.ಪ್ರೇಮಾ ಧನರಾಜ್ ಅವರಿಗೆ ಡಾ.ಸಿ.ಎನ್.ಮೃತ್ಯುಂಜಯಪ್ಪ ಆದರ್ಶ ವೈದ್ಯ ಸೇವಾ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಮೈಸೂರು, ಅ.20(ಎಸ್‌ಪಿಎನ್)– ಸಾಧಕರ ಜೀವನಯಾನ ಇಂದಿನ ಮಕ್ಕಳಿಗೆ ಆದರ್ಶವಾಗಬೇಕು. ಆ ಬದುಕು ನಮ್ಮದಾಗಿಸಿಕೊಳ್ಳಲು ಪ್ರಯತ್ನಿಸಬೇಕು ಎಂದು ವಿದ್ಯಾವರ್ಧಕ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಪ್ರೊ.ಜಿ.ಚಂದ್ರಶೇಖರ್ ಕಿವಿಮಾತು ಹೇಳಿದರು.

ಮೈಸೂರು ಜೆಎಸ್‌ಎಸ್ ಆಸ್ಪತ್ರೆ ಆವರಣದ ಶ್ರೀ ರಾಜೇಂದ್ರ ಭವನದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಮೈಸೂರು ನಗರ ಮತ್ತು ಜಿಲ್ಲಾ ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ಸಹಯೋಗದೊಂದಿಗೆ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ರಾಜರಾಜೇಶ್ವರಿ ವೈದ್ಯಕೀಯ ಕಾಲೇಜಿನ ನಿವೃತ್ತ ಪ್ರಾಧ್ಯಾಪಕಿ, ಬೆಂಗಳೂರು ಅಗ್ನಿರಕ್ಷಾ ಸಂಸ್ಥೆಯ ನಿರ್ದೇಶಕಿ ಡಾ.ಪ್ರೇಮಾ ಧನರಾಜ್ ಅವರಿಗೆ ಡಾ.ಸಿ.ಎನ್.ಮೃತ್ಯುಂಜಯಪ್ಪ 'ಆದರ್ಶ ವೈದ್ಯ ಸೇವಾ ಪ್ರಶಸ್ತಿ'ಯನ್ನು ಪ್ರದಾನ ಮಾಡಿ, ಮಾತನಾಡಿದರು.

ಸಾಮಾಜಿಕ ಜೀವನದಲ್ಲಿ ವೃತ್ತಿಯಲ್ಲಿರುವ ಅನೇಕರು ಅವರವರ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಾರೆ. ಆದರೆ, ಅದು ಬೆಳಕಿಗೆ ಬರುವುದಿಲ್ಲ. ಏಕೆಂದರೆ ಸಾಧಕರು ಹೆಚ್ಚು ಯಾರೊಂದಿಗೂ ಮಾತನಾಡುವುದಿಲ್ಲ. ಆದರೆ, ಸಮಾಜದಲ್ಲಿ ಅವರ ಸಾಧನೆ ಮಾತನಾಡುತ್ತದೆ. ನಮ್ಮಲ್ಲಿ ಅನೇಕ ಸಾಧಕರು ಎಲೆಮರೆಕಾಯಿಯಂತೆ ಆಗಿಬಿಡುತ್ತಾರೆ. ಅವರು ಜನಮಾನಸದಲ್ಲಿ ಉಳಿಯಬೇಕಾದರೆ, ಸಾಧಕರ ಸಾಧನೆ ದಾಖಲೀಕರಣವಾಗಬೇಕು ಎಂದರು.

ಪದ್ಮಶ್ರೀ ಪ್ರಶಸ್ತಿಗೆ ಭಾಜನರಾದ ಡಾ.ಪ್ರೇಮಾ ಧನರಾಜ್ ಅವರ ಬದುಕೇ ಒಂದು ರೋಚಕ. ಸುಟ್ಟ ದೇಹದಿಂದ ಚಿಕಿತ್ಸೆ ಪಡೆದು, ನಂತರ ಪೋಷಕರ ಆಸೆಯಂತೆ ವೈದ್ಯಕೀಯ ಶಿಕ್ಷಣ ಪಡೆದು ಪದ್ಮಶ್ರೀ ಪಡೆಯುವವರೆಗಿನ ಹಾದಿ ಸುಲಭವಾಗಿರಲಿಲ್ಲ. 1965ರಲ್ಲಿ ಪ್ರೇಮಾ ಅವರಿಗೆ ಎಂಟು ವರ್ಷ. ಅವರು ಪೋಷಕರೊಂದಿಗೆ ಬೆಂಗಳೂರಿನಲ್ಲಿ ಅವರು ವಾಸಿಸುತ್ತಿದ್ದ ಅಡುಗೆ ಕೋಣೆಯಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡಿತು. ಸ್ಟವ್ ಸಿಡಿದು ಅವರ ಮುಖ, ಕುತ್ತಿಗೆ ಹಾಗೂ ದೇಹದ ಇತರೆ ಭಾಗಗಳು ಸಂಪೂರ್ಣವಾಗಿ ಸುಟ್ಟು ಹೋಗಿತ್ತು. ತಕ್ಷಣವೇ ಪ್ರೇಮಾ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಪಡೆದಿದ್ದ ಪ್ರಸಂಗವನ್ನು ವಿವರಿಸಿದರು.

ಅಂದಾಜು ಒಂದು ತಿಂಗಳ ಚಿಕಿತ್ಸೆಯ ಬಳಿಕ ಪ್ರೇಮಾ ಚೇತರಿಸಿಕೊಂಡರು. ನಂತರ ಅವರ ತಂದೆ ಸಿ.ಎಸ್. ಧನರಾಜ್ ಹಾಗೂ ತಾಯಿ ರೋಸಿ, ತಮಿಳುನಾಡು ವೆಲ್ಲೂರ್‌ನ ಮೆಡಿಕಲ್ ಕಾಲೇಜಿಗೆ ಪ್ರೇಮಾ ಅವರನ್ನು ಹೆಚ್ಚಿನ ಚಿಕಿತ್ಸೆಗೆ ದಾಖಲಿಸಿದ್ದರು. ಆ ಸಂದರ್ಭದಲ್ಲಿ ಅಲ್ಲಿನ ವೈದ್ಯರು, ಬೆಂಕಿ ಅವಘಡದಲ್ಲಿ ಶೇ.30ಕ್ಕಿಂತ ಹೆಚ್ಚು ಸುಟ್ಟಗಾಯಗಳಾದರೆ, ಬದುಕುವುದು ಕಷ್ಟ, ಆದರೆ, ಪವಾಡಸದೃಶ ಎಂಬಂತೆ ಪ್ರೇಮಾ ಅವರು ಚೇತರಿಸಿಕೊಂಡ ಪ್ರಸಂಗವನ್ನು ವಿವರಿಸಿದರು.

ವೈದ್ಯೆ ಆಗಬೇಕೆಂಬುದು ತಾಯಿಯ ಆಸೆ: ಪ್ರಶಸ್ತಿ ಪುರಸ್ಕೃತರಾದ ಡಾ.ಪ್ರೇಮಾ ಧನರಾಜ್ ಮಾತನಾಡಿ, ಜೀವನದಲ್ಲಿ ಬೇರೆಯವರೊಂದಿಗೆ ಹೋಲಿಕೆ ಮಾಡಿ ಬದುಕು ಸಾಗಿಸಬಾರದು. ಇದರಿಂದ ಉತ್ತಮ ಬದುಕು ರೂಢಿಸಿಕೊಳ್ಳುವುದು ಅಸಾಧ್ಯ. ನಮ್ಮಲ್ಲಿರುವ ಪ್ರತಿಭೆಯಿಂದ ಮಾತ್ರ ಯಶಸ್ಸಿನ ಪಯಣದತ್ತ ಸಾಗಬಹುದು. ಪರಿಶ್ರಮ ಮತ್ತು ನಿರಂತರ ಪ್ರಯತ್ನ ಇದ್ದಲ್ಲಿ ಗುರಿ ತಲುಪುಹುದು ಸ್ಪಷ್ಟ ಎಂದು ಹೇಳಿದರು.

ಚಿಕ್ಕ ವಯಸ್ಸಿನಲ್ಲೇ ನನಗೆ ಗಾಯಕಿ ಆಗಬೇಕೆಂಬ ಆಸೆ ಇತ್ತು. ಸಂಗೀತ ತರಬೇತಿಗೂ ಹೋಗುತ್ತಿದ್ದೆ. ಆದರೆ, ದೇವರ ಇಚ್ಛೆಯೇ ಬೇರೆಯಿತ್ತು. ಸಣ್ಣ ವಯಸ್ಸಿನಲ್ಲಿ ಸೀಮೆಎಣ್ಣೆ ಸ್ಟವ್ ಸ್ಫೋಟಗೊಂಡು ಸುಟ್ಟಗಾಯಗಳಿಂದ ಸಾಕಷ್ಟು ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದೆ. ತಾಯಿಯ ಪ್ರೋತ್ಸಾಹದಿಂದ ನೋವು ಮರೆತು, ವೈದ್ಯೆಯಾಗಿ ಅಂದುಕೊಂಡಿದ್ದನ್ನು ಸಾಧಿಸಲು ಸಾಧ್ಯವಾಯಿತು ಎಂದು ಜೀವನ ಏರಿಳಿತಗಳನ್ನು ವಿವರಿಸಿದರು.

ವೇದಿಕೆಯಲ್ಲಿ ಮೈಸೂರು ವಿವಿ ಸಂದರ್ಶಕ ಪ್ರಾಧ್ಯಾಪಕ ಪ್ರೊ.ಸಿ.ನಾಗಣ್ಣ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಶರಣ ಸಾಹಿತ್ಯ ಪರಿಷತ್ತು ನಗರ ಘಟಕ ಅಧ್ಯಕ್ಷ ಮ.ಗು.ಸದಾನಂದಯ್ಯ, ಜಿಲ್ಲಾ ಘಟಕದ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ, ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್ ಸೇರಿದಂತೆ ಇತರಿದ್ದರು.

ಮೈಸೂರು ತಾಲೂಕು ರೈತ ಸಂಘದ ಕಾರ್ಯಕರ್ತರ ಸಭೆ

ರೈತರನ್ನು ಬೌದ್ಧಿಕವಾಗಿ ರೂಪಿಸಿ ಹೋರಾಟಕ್ಕೆ ಸಜ್ಜುಗೊಳಿಸಲು ತೀರ್ಮಾನ



ಮೈಸೂರಿನ ಕೃಷಿ ಅಧ್ಯಯನ ಮಾರುಕಟ್ಟೆ ಸಂಸ್ಥೆಯಲ್ಲಿ ಭಾನುವಾರ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಅಧ್ಯಕ್ಷತೆಯಲ್ಲಿ ರೈತ ಸಂಘದ ಕಾರ್ಯಕರ್ತರ ಸಭೆ ನಡೆಯಿತು.

ಮೈಸೂರು, ಅ.20(ಬಿಎಲ್‌ಯು)– ಪ್ರತಿ ಗ್ರಾಮ ಮತ್ತು ಪ್ರತಿ ಮನೆಯಲ್ಲಿ ರೈತ ಕಾರ್ಯಕರ್ತರನ್ನು ಹುಟ್ಟು ಹಾಕಿ ಹೋರಾಟಕ್ಕೆ ಸಜ್ಜುಗೊಳಿಸಲು ಮೈಸೂರಿನಲ್ಲಿ ಇಂದು ನಡೆದ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಕಾರ್ಯಕರ್ತರ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ನಗರದ ಕೃಷಿ ಅಧ್ಯಯನ ಮಾರುಕಟ್ಟೆ ಸಂಸ್ಥೆಯಲ್ಲಿ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಅಧ್ಯಕ್ಷತೆಯಲ್ಲಿ ಇಂದು ನಡೆದ ಕಾರ್ಯಕರ್ತರ ಸಭೆಯಲ್ಲಿ ರೈತ ಸಂಘದ ಹೋರಾಟದ ಬಗ್ಗೆ ಇಡೀ ದಿನ ಸಮಾಲೋಚನೆ ನಡೆಸಲಾಯಿತು.

ರೈತ ಸಂಘಕ್ಕೆ ಹೆಚ್ಚು ರೈತರನ್ನು ಸದಸ್ಯರಾಗಿ ಮಾಡಿಕೊಳ್ಳುವುದರ ಜೊತೆಗೆ ಅವರನ್ನು ಬೌದ್ಧಿಕವಾಗಿ ರೂಪಿಸುವ ನಿಟ್ಟಿನಲ್ಲಿ ತೀರ್ಮಾನ ಮಾಡಲಾಯಿತು.


ಕೇಂದ್ರ ಹಾಗೂ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ವಿರುದ್ಧ ಹೋರಾಟ ಮಾಡಲು ಪ್ರತಿ ಗ್ರಾಮ ಹಾಗೂ ಪ್ರತಿ ಮನೆಯಲ್ಲಿ ರೈತ ಕಾರ್ಯಕರ್ತರನ್ನು ಹುಟ್ಟು ಹಾಕಬೇಕು. ಈ ಮೂಲಕ ರೈತರ ವಿರುದ್ಧ ಸರ್ಕಾರ ರೂಪಿಸುತ್ತಿರುವ ನೀತಿಗಳನ್ನು ಮೆಟ್ಟಿ ನಿಂತು ಹೋರಾಡಲು ರೈತ ಸಂಘಟನೆಯನ್ನು ಮತ್ತಷ್ಟು ಬಲಗೊಳಿಸುವ ಕಾರ್ಯತಂತ್ರಗಳ ಬಗ್ಗೆ ಚರ್ಚೆ ಮಾಡಲಾಯಿತು.

ಸುಸ್ಥಿರ ಗ್ರಾಮ, ಸ್ವಾವಲಂಬಿ ಹಳ್ಳಿ ಪರಿಕಲ್ಪನೆ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ಯಾವ ರೀತಿಯ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ರೈತರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಭೂಮಿ ಕಳೆದುಕೊಂಡು ಪ್ರತಿಭಟನೆ ನಡೆಸುತ್ತಿರುವ ಕೋಚನಹಳ್ಳಿ ರೈತರ ಹೋರಾಟವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಯಾವ ರೀತಿಯ ಹೋರಾಟ ರೂಪಿಸಬೇಕು. ಈ ನಿಟ್ಟಿನಲ್ಲಿ ರೈತರನ್ನು ಯಾವ ರೀತಿ ಸಜ್ಜುಗೊಳಿಸಬೇಕು ಎಂದು ಸಮಾಲೋಚನೆ ನಡೆಸಿದರು.

ಕೋಲಾರದಲ್ಲಿ ಅ.26ರಂದು ನಡೆಯುವ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಯಾವ ವಿಷಯಗಳನ್ನು ಚರ್ಚೆ ಮಾಡಬೇಕು ಎಂದು ಬಗ್ಗೆ ಕೂಡ ರೈತರ ಸಲಹೆ ನೀಡಿದರು. ರೈತ ಮುಖಂಡರಾದ ಎ.ಎಂ.ಮಹೇಶ್ ಪ್ರಭು, ರವಿ ಕಿರಣ್, ಹೊಸುರು ಕುಮಾರ್, ನಾಗನಹಳ್ಳಿ ವಿಜೇಂದ್ರ, ಮಂಡಕಳ್ಳಿ ಮಹೇಶ್, ಪ್ರೇಮ ರಾಜ್ ಸೇರಿದಂತೆ ಹಲವರು ಇಂದಿನ ಸಭೆಯಲ್ಲಿ ಪಾಲ್ಗೊಂಡಿದ್ದರು.

ದೆಹಲಿಯ ಸಿಆರ್‌ಪಿಎಫ್ ಶಾಲೆ ಆವರಣದಲ್ಲಿ ಸ್ಫೋಟ



ನವದೆಹಲಿ, ಅ.20– ದೀಪಾವಳಿ ಹಬ್ಬದ ತಯಾರಿಗಳು ನಡೆಯುತ್ತಿವೆ. ಇದರ ನಡುವೆ ದೆಹಲಿಯ ರೋಹಿಣಿ ವಲಯದಲ್ಲಿರುವ ಸಿಆರ್‌ಪಿಎಫ್ ಶಾಲಾ ಆವರಣದಲ್ಲಿ ಸ್ಫೋಟ ಸಂಭವಿಸಿದೆ. ಭಾರಿ ಸ್ಫೋಟಕ್ಕೆ ಶಾಲಾ ಆವರಣದ ಕಾಂಪೌಂಡ್ ಕುಸಿದು ಬಿದ್ದಿದೆ. ಹತ್ತಿರದ ಅಂಗಡಿ ಮುಂಗಟ್ಟುಗಳ ಗೋಡೆಗಳು ಬಿರುಕು ಬಿಟ್ಟಿದೆ. ಅದೃಷ್ಟವಶಾತ್ ಭಾನುವಾರದ ಕಾರಣ ಯಾವುದೇ ಅಪಾಯ ಸಂಭವಿಸಿಲ್ಲ. ದೆಹಲಿ ಪೊಲೀಸ್, ಫೋರೆನ್ಸಿಕ್ ತಂಡ ಹಾಗೂ ರಾಷ್ಟ್ರೀಯ ತನಿಖಾ ದಳ(ಎನ್‌ಐಎ) ಸ್ಥಳಕ್ಕೆ ಧಾವಿಸಿ ತನಿಖೆ ಆರಂಭಿಸಿದೆ.


ಭಾರಿ ಶಬ್ದದೊಂದಿಗೆ ಸ್ಫೋಟ ಸಂಭವಿಸಿದೆ. ಸ್ಫೋಟದ ಬಳಿಕ ದಟ್ಟ ಹೊಗೆ ಕಾಣಿಸಿಕೊಂಡಿದೆ. ಶಾಲಾ ಆವರಣ ಪಕ್ಕದಲ್ಲಿನ ಅಂಗಡಿಗಳ ಗಾಜುಗಳ ಪುಡಿ ಪುಡಿಯಾಗಿವೆ. ಪಾರ್ಕ್ ಮಾಡಿದ್ದ ವಾಹನಗಳಿಗೂ ಹಾನಿಯಾಗಿದೆ. ಘಟನೆ ಮಾಹಿತಿ ತಿಳಿಯುತ್ತಿದ್ದಂತೆಯೇ ಘಟನಾ ಸ್ಥಳಕ್ಕೆ ದೆಹಲಿ ವಿಶೇಷ ದಳ ಪೊಲೀಸರು ದೌಡಾಯಿಸಿದ್ದಾರೆ. ಇಡೀ ಆವರಣ ಸುತ್ತುವರಿದು ವಶಕ್ಕೆ ಪಡೆದಿದ್ದಾರೆ. ಇದರ ಬೆನ್ನಲ್ಲೇ ಫೋರೆನ್ಸಿಕ್ ತಂಡ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದೆ. ಶಾಲಾ ಆವರಣದ ಗೋಡೆಗಳಲ್ಲಿ ಸಿಕ್ಕ ಪೌಡರ್ ರೀತಿಯ ವಸ್ತು ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸಿದ್ದಾರೆ.

ಸ್ಫೋಟದ ಮಾಹಿತಿ ತಿಳಿಯುತ್ತಿದ್ದಂತೆ ಎನ್‌ಐಎ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿದ್ದಾರೆ. ಸ್ಫೋಟದ ಹಿಂದೆ ಯಾವುದೇ ಭಯೋತ್ಪಾದಕ ಸಂಘಟನೆ, ಭಯೋತ್ಪಾದಕ ಕೃತ್ಯದ ಕುರಿತು ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ. ಸ್ಥಳಕ್ಕೆ ಎನ್‌ಎಸ್‌ಜಿ ಕಮಾಂಡೋ ಕೂಡ ಆಗಮಿಸಿದೆ. ಘಟನೆ ಸ್ಥಳ ಹಾಗೂ ಸುತ್ತಮುತ್ತ ಭದ್ರತೆ ನಿಯೋಜಿಸಲಾಗಿದೆ.

ಘಟನೆ ಬೆನ್ನಲ್ಲೇ ಎನ್‌ಐಎ ಅಧಿಕಾರಿಗಳ ತಂಡ ಸೋಶಿಯಲ್ ಮೀಡಿಯಾ ಮೇಲೂ ಹದ್ದಿನಕಣ್ಣಿಟ್ಟಿದೆ. ಘಟನೆ ಕುರಿತು ಸುಳಿವು ಪತ್ತೆಗೆ ನಿರಂತರ ಕಾರ್ಯಾಚರಣೆ ಆರಂಭಗೊಂಡಿದೆ. ಸಿಲಿಂಡರ್ ಬ್ಲಾಸ್ಟ್ ಅನ್ನೋ ಮಾತುಗಳು ಕೇಳಿಬಂದಿವೆ. ಆದರೆ ಯಾವುದೇ ಸ್ಪಷ್ಟತೆ ಲಭ್ಯವಾಗಿಲ್ಲ. ಮೇಲ್ನೋಟಕ್ಕೆ ಭಯೋತ್ಪಾದಕ ಕೃತ್ಯದಂತೆ ಕಾಣಿಸುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿದೆ.

ಘಟನೆಗೆ ಕಾರಣ ಕುರಿತು ದೆಹಲಿ ಪೊಲೀಸ್ ಅಥವಾ ಎನ್‌ಐಎ ಅಧಿಕಾರಿಗಳು ಯಾವುದೇ ಮಾಹಿತಿ ನೀಡಿಲ್ಲ. ಘಟನೆಯ ಪ್ರಾಥಮಿಕ ತನಿಖೆ ಪ್ರಗತಿಯಲ್ಲಿದೆ. ಶೀಘ್ರದಲ್ಲೇ ಅಧಿಕಾರಿಗಳ ತಂಡ ಘಟನೆ ಕುರಿತು ಮಾಹಿತಿ ನೀಡಲಿದ್ದಾರೆ. ಆದರೆ ದೀಪಾವಳಿ ಹಬ್ಬದ ಸಡಗರದಲ್ಲಿರುವ ರಾಷ್ಟ್ರ ರಾಜಧಾನಿ ಜನ ಈ ಸ್ಫೋಟದಿಂದ ಬೆಚ್ಚಿ ಬಿದ್ದಿದ್ದಾರೆ. ಎನ್‌ಐಎ, ದೆಹಲಿ ಪೊಲೀಸ್ ಅಧಿಕಾರಿಗಳ ತಂಡ ಸೇರಿದಂತೆ ಹಲವು ಎಜೆನ್ಸಿ ಘಟನೆ ಕುರಿತು ತನಿಖೆ ನಡೆಸುತ್ತಿದೆ.

ಕಾರ್ಪೆಡಿಕಾನ್–2024 ರಾಜ್ಯ ಮಟ್ಟದ ಕಾರ್ಯಾಗಾರ



ಮೈಸೂರಿನ ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ ವತಿಯಿಂದ ಶಿಶು ಮತ್ತು ಚಿಕ್ಕ ಮಕ್ಕಳ ಆಹಾರ ಕುರಿತು ಇಂಡಿಯನ್ ಅಕಾಡೆಮಿ ಆಫ್ ಪಿಡಿಯಾಟ್ರಿಕ್ಸ್, ಕರ್ನಾಟಕ ಚಾಪ್ಟರ್ ವತಿಯಿಂದ ಕಾರ್ಪೆಡಿಕಾನ್–2024 ರಾಜ್ಯ ಮಟ್ಟದ ಕಾರ್ಯಾಗಾರ ಆಯೋಜಿಸಲಾಗಿತ್ತು. ಕಾರ್ಯಾಗಾರವನ್ನು ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಛೇರ್ಮನ್ ಡಾ.ಜಿ.ಆರ್.ಚಂದ್ರಶೇಖರ್ ಉದ್ಘಾಟಿಸಿದರು. ಈ ವೇಳೆ ಮಕ್ಕಳ ತಜ್ಞರಾದ ಡಾ.ಬಾನಪುರ್ ಮಠ, ಡಾ.ಆಶಾ ಬೆನಕಪ್ಪ, ಡಾ.ದಿನಕರ್, ಡಾ.ಅಶ್ವಿನ್, ಡಾ.ಅಜಯ್ ರಾಘವ್ ಜೋಶಿ, ಡಾ.ದಿಶಾ ಗುರುಪ್ರಸಾದ್, ಡಾ.ರಾಜು, ಡಾ.ಪ್ರದೀಪ್, ಡಾ.ಶಾಲಿನಿ, ಡಾ.ಲತಾ, ಡಾ.ದಿನಕರ್, ಡಾ.ಮೃತ್ಯುಂಜಯ, ಡಾ.ಅನುಷಾ ಕುಲಕರ್ಣಿ ಮತ್ತಿತರರು ಉಪಸ್ಥಿತರಿದ್ದರು.

ಅ.23, ಕೆ–ಸೆಟ್, ಯುಜಿಸಿ ನೆಟ್ ಪರೀಕ್ಷೆ ತರಬೇತಿ ಶಿಬಿರದ ಸಮಾರೋಪ

ಮೈಸೂರು,ಅ.20–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವತಿಯಿಂದ ಏರ್ಪಡಿಸಲಾಗಿದ್ದ ಕೆ.ಸೆಟ್ ಮತ್ತು ಯುಜಿಸಿ ನೆಟ್ ಪರೀಕ್ಷೆಯ 50 ದಿನಗಳ ತರಬೇತಿ ಶಿಬಿರದ ಸಮಾರೋಪ ಸಮಾರಂಭವನ್ನು ಅ.23ರಂದು ಬೆಳಗ್ಗೆ 11 ಗಂಟೆಗೆ ಕರಾಮುವಿಯ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಕರ್ನಾಟಕ ಸಂಸ್ಕೃತ ವಿವಿ ಕುಲಪತಿ ಡಾ.ಎಸ್.ಅಹಲ್ಯಾ ತರಬೇತಿ ಶಿಬಿರಾರ್ಥಿಗಳಿಗೆ ಶುಭ ಹಾರೈಸುವರು. ಕರ್ನಾಟಕ ಸರ್ಕಾರದ ಅಲ್ಪಸಂಖ್ಯಾತರ ಇಲಾಖೆ ಕಾರ್ಯದರ್ಶಿ ಹಿರಿಯ ಐಎಎಸ್ ಅಧಿಕಾರಿ ಮನೋಜ್ ಜೈನ್ ಅಧ್ಯಯನ ಪುಸ್ತಕ ಬಿಡುಗಡೆ ಮಾಡಿ ಮುಖ್ಯ ಭಾಷಣ ಮಾಡಲಿದ್ದಾರೆ. ಕರಾಮುವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಲಿದ್ದು, ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ ಉಪಸ್ಥಿತರಿರಲಿದ್ದಾರೆ.

ಸೋಮಿ ಅಗಸ್ಟೀನ್‌ಗೆ ಪಿಹೆಚ್.ಡಿ ಪದವಿ



ಮೈಸೂರು: ಡಾ. ಕೆ.ಯಶೋಧ ನಂಜಪ್ಪ ಅವರ ಮಾರ್ಗದರ್ಶನದಲ್ಲಿ ಸೋಮಿ ಅಗಸ್ಟೀನ್ ಅವರು 'ರಿಕ್ಲೈಮಿಂಗ್ ದಿ ಇಂಡಿಜೀನಿಯಸ್ ವಾಯ್ಸ್: ಎ ಕಂಪ್ಯಾರಿಟೀವ್ ಸ್ಟಡಿ ಆಫ್ ದಿ ಫಿಕ್ಷನ್ ಆಫ್ ರುಬಿ ಸ್ಲಿಪ್ಪರ್ ಜಾಕ್ ಅಂಡ್ ರಿಚರ್ಡ್ ವಾಗ್‌ಮೆಸೆ' ಕುರಿತ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಕೌಶಲ ಇದ್ದರಷ್ಟೇ ವಿದ್ಯಾರ್ಥಿಗಳು ಯಶಸ್ಸು ಗಳಿಸಲು ಸಾಧ್ಯ

ಮೈಸೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ಡಾ.ಎನ್.ನಾಗರಾಜ ಅಭಿಪ್ರಾಯ



ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ರಾಷ್ಟ್ರಮಟ್ಟದ ವಿಚಾರ ಸಂಕಿರಣವನ್ನು ಮೈಸೂರು ವಿವಿ ಪರೀಕ್ಷಾಂಗ ಕುಲಸಚಿವ ಡಾ.ಎನ್.ನಾಗರಾಜ ಉದ್ಘಾಟಿಸಿದರು.

ಮೈಸೂರು, ಅ. 20– ಉಪನ್ಯಾಸಕರು ತರಗತಿಗಳಲ್ಲಿ ಬೋಧಿಸುವ ಪುಸ್ತಕದ ಜ್ಞಾನ ವಿದ್ಯಾರ್ಥಿಗಳಿಗೆ ಉಪಯೋಗಕ್ಕೆ ಬರುವುದಿಲ್ಲ. ಜೊತೆಗೆ ಸ್ಪರ್ಧಾತ್ಮಕ ಜಗತ್ತಿನಲ್ಲಿ ಸ್ಪರ್ಧಿಸಲು ಅವಶ್ಯವಾದ ಜ್ಞಾನ, ಕೌಶಲಗಳು ಇದ್ದರಷ್ಟೇ ವಿದ್ಯಾರ್ಥಿಗಳು ಯಶಸ್ಸನ್ನು ಗಳಿಸಲು ಸಾಧ್ಯ ಎಂದು ಮೈಸೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ಡಾ.ಎನ್.ನಾಗರಾಜ ಅಭಿಪ್ರಾಯಪಟ್ಟರು.

ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಐ.ಕ್ಯೂ.ಎ.ಸಿ ಘಟಕ ಹಾಗೂ ವಾಣಿಜ್ಯ ಮತು ನಿರ್ವಹಣಾ ಶಾಸ್ತ್ರ ವಿಭಾಗಗಳು ಜಂಟಿಯಾಗಿ ಆಯೋಜಿಸಿದ್ದ ಒಂದು ದಿನದ ರಾಷ್ಟ್ರ ಮಟ್ಟದ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ರೂಸಾ(RUSA) ಇರುವುದೇ ವಿದ್ಯಾರ್ಥಿಗಳಿಗೆ ಕೌಶಲ ಶಿಕ್ಷಣದ ತರಬೇತಿಯನ್ನು ನೀಡಿ ಉದ್ಯೋಗವನ್ನು ಪಡೆಯುವುದಕ್ಕಾಗಿ. ವಿಶ್ವವಿದ್ಯಾನಿಲಯಗಳು ನೀಡುವ ಪದವಿಗಳು ಕೇವಲ ಪಾಸ್‌ಪೋರ್ಟ್ ಇದ್ದಂತೆ, ಆದರೆ ಪಾಸ್‌ಪೋರ್ಟ್ ಇದ್ದರಷ್ಟೇ ಸಾಲದು ವಿದೇಶಗಳಿಗೆ ತೆರಳಲು ವೀಸಾ ಸಹ ಬೇಕಾಗುತ್ತದೆ. ಕೌಶಲಗಳು ಅಂತಹ ವೀಸಾಗಳಿದ್ದಂತೆ, ಆದುದರಿಂದ ವಿದ್ಯಾರ್ಥಿಗಳು ತಮ್ಮದೇ ಆದ ಕೌಶಲಗಳನ್ನು ಬೆಳೆಸಿಕೊಳ್ಳುವುದು ಅತ್ಯಂತ ಅವಶ್ಯವಾಗಿದೆ ಎಂದರು.

ಮೈಸೂರು ನಿವೃತ್ತರ ಸ್ವರ್ಗವೆಂದೇ ಪ್ರಸಿದ್ಧವಾಗಿದೆ. ಇಲ್ಲಿ ಅಂತಹ ಉದ್ಯಮಗಳಾಗಲೀ, ಬೃಹತ್ ಕೈಗಾರಿಕೆಗಳಾಗಲೀ, ನವೋದ್ಯಮದ ಹೊಸ ಆಲೋಚನೆಗಳಾಗಲೀ ಬಹುತೇಕ ಇಲ್ಲ. ಬಹುತೇಕರು ಉದ್ಯಮಗಳನ್ನು ಸ್ಥಾಪಿಸಿ ಭವಿಷ್ಯದ ಉನ್ನತವಾದ ಗುರಿಯಿಲ್ಲದೇ ಸ್ಥಗಿತಗೊಳಿಸುತ್ತಾರೆ. ಯಾರೂ ರಾತ್ರೋರಾತ್ರಿ ಅಂಬಾನಿ, ಅದಾನಿಗಳಾಗಲು ಸಾಧ್ಯವಿಲ್ಲ. ಆದುದರಿಂದ ಉದ್ಯಮಪತಿಗಳು ಸಮಯಕ್ಕೆ ಸರಿಯಾಗಿ ವಿಶ್ವಾಸಾರ್ಹವಾದ ಕಾರ್ಯತಂತ್ರವನ್ನು ಅನುಸರಿಸುವುದರ ಜೊತೆಗೆ ಮಾರುಕಟ್ಟೆಯ ಅಧ್ಯಯನ ಮಾಡಿ ಸಮಾಜಕ್ಕೆ ಏನು ಬೇಕು ಎಂಬುದನ್ನು ಅರಿತುಕೊಂಡು ಅದನ್ನು ನಿವಾರಿಸಿದರೆ ಯಶಸ್ವಿ ಉದ್ಯಮಿಗಳಾಗಬಹುದು ಎಂದು ಸಲಹೆ ನೀಡಿದರು.

ಬೆಂಗಳೂರಿನ ಚಾಣಕ್ಯ ವಿಶ್ವವಿದ್ಯಾನಿಲಯದ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಸೈನ್ಸ್‌ನ ಡೀನ್ ದಿನೇಶ್ ಶೆಣೈ ತಮ್ಮ ದಿಕ್ಸೂಚಿ ಭಾಷಣದಲ್ಲಿ ಉದ್ಯಮಪತಿಗಳು ಯಾವಾಗಲು ಸಮಾಜದ ಭಾಗವಾಗಿರುತ್ತಾರೆ. ಆದುದರಿಂದ ಅವರು ಹೊಸ ಆವಿಷ್ಕಾರಗಳು ಮತ್ತು ನೂತನವಾದ ದೃಷ್ಟಿಕೋನದಿಂದ ಹೊಸ ಕಾರ್ಯತಂತ್ರಗಳನ್ನು ಅನುಸರಿಸುವ ಮೂಲಕ ಸಮಸ್ಯೆಗಳನ್ನು ಗುರ್ತಿಸಿ ಅದರ ಆಳಕ್ಕೆ ಇಳಿದು ನಿವಾರಣೆ ಮಾಡುವವನೇ ನಿಜವಾದ ಉದ್ಯಮ ಪತಿ ಎಂದ ಅವರು, ಎದುರಾಳಿಗಳ ತಂತ್ರಗಾರಿಕೆಯನ್ನು ಅರ್ಥಮಾಡಿಕೊಂಡು ಅಲ್ಪಕಾಲೀನ ಮತ್ತು ದೀರ್ಘಕಾಲೀನ ಗುರಿಗಳನ್ನು ಅಳವಡಿಸಿಕೊಂಡು ಉದ್ಯಮವನ್ನು ಯಶಸ್ಸಿನತ್ತ ಕೊಂಡೊಯ್ಯುವವನೇ ನಿಜವಾದ ಉದ್ಯಮಶೀಲನಾಗಿರುತ್ತಾನೆ ಎಂದು ತಿಳಿಸಿದರು.

ಪ್ರಾಂಶುಪಾಲ ಡಾ.ಎಸ್.ಮರೀಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ ಅಧ್ಯಕ್ಷತೆ ವಹಿಸಿದ್ದರು. ಗೌರವ ಕಾರ್ಯದರ್ಶಿ ಪಿ.ವಿಶ್ವನಾಥ್, ಗೌರವ ಕೋಶಾಧ್ಯಕ್ಷ ಶ್ರೀಶೈಲ ರಾಮಣ್ಣವರ್, ಟಿ.ನಾಗರಾಜು, ಡಾ.ಪಿ.ಕೆ.ಗೋವರ್ಧನ್,ಸಂಶೋಧನಾ ವಿದ್ಯಾರ್ಥಿಗಳು, ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳು, ಅಧ್ಯಾಪಕರು, ಅಧ್ಯಾಪಕೇತರರು, ವಿದ್ಯಾರ್ಥಿಗಳು ಹಾಜರಿದ್ದರು.

ಗೃಹಬಳಕೆ ಸಿಲಿಂಡರ್‌ಗಳ ದುರ್ಬಳಕೆ ತಡೆಗೆ ಬಾರ್‌ಕೋಡ್ ಜಾರಿಗೆ ಒತ್ತಾಯ

ಮೈಸೂರು, ಅ.20– ಗೃಹಬಳಕೆಯ ಸಿಲಿಂಡರ್‌ಗಳು ದುರ್ಬಳಕೆಯಾಗುತ್ತಿವೆ. ಅದನ್ನು ತಡೆಗಟ್ಟುವ ನಿಟ್ಟಿನಲ್ಲಿ ರೇಷನ್ ಹಂಚಿಕೆ ಮಾದರಿಯಲ್ಲಿ ಗ್ರಾಹಕರು ಹಾಗೂ ಸಿಲಿಂಡರ್‌ಗೆ ಬಾರ್ ಕೋಡ್ ಅಳವಡಿಸಿ, ಬಯೋಮೆಟ್ರಿಕ್ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ಅಧ್ಯಕ್ಷ ಸಿ.ಎಸ್.ಚಂದ್ರಶೇಖರ್ ಒತ್ತಾಯಿಸಿದರು.


ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೋಟ್ಯಾಂತರ ರೂಪಾಯಿ ನಷ್ಟ ಮತ್ತು ಸ್ಫೋಟದ ಅಪಾಯವನ್ನುಂಟು ಮಾಡುವ ವಾಹನಗಳು ಮತ್ತು ವಾಣಿಜ್ಯ ಸ್ಥಳಗಳಲ್ಲಿ ಗೃಹ ಬಳಕೆಯ ಸಿಲಿಂಡರ್‌ಗಳ ವ್ಯಾಪಕ ಬಳಕೆಯನ್ನೂ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಗ್ರಾಹಕರು ನೋಂದಾಯಿತ ಮೊಬೈಲ್ ಸಂಖ್ಯೆಯಿಂದ ಬುಕ್ ಮಾಡಿದ ನಂತರ ಒಟಿಪಿ ಕಳುಹಿಸಬೇಕು. ಸಿಲಿಂಡರ್ ವಿತರಿಸುವಾಗ ಒಟಿಪಿ ನಮೂದಿಸಿದಾಗ ಬಿಲ್ ರಚಿಸುವ ವ್ಯವಸ್ಥೆ ರಚಿಸಬೇಕು. ಎಲ್‌ಪಿಜಿ ಅಂದರೆ ಡೆಲಿವರಿ ಅಥೆಂಟಿಕೇಶನ್ ಕೋಡ್ ಅಥವಾ ಬಾರ್ಕೋಡ್ ಅನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ವಾಣಿಜ್ಯ ಸಿಲಿಂಡರ್ ಬೆಲೆಗಳು ಶೇ.100ರಷ್ಟು ಹೆಚ್ಚಾಗಿದೆ. ಇದರಿಂದಾಗಿ ವಾಣಿಜ್ಯ ಸಂಸ್ಥೆಗಳು ಗೃಹಬಳಕೆಯ ಸಿಲಿಂಡರ್‌ಗಳನ್ನು ವ್ಯಾಪಕವಾಗಿ ಬಳಸುತ್ತಿವೆ. ಇದರಿಂದಾಗಿ ಸರಕಾರಕ್ಕೆ ಕೋಟ್ಯಂತರ ರೂ. ನಷ್ಟವಾಗುತ್ತಿದೆ. ಸಂಘಟಿತ ದಂಧೆ ನಡೆಸುವವರಿಗೆ ಸರಕಾರಿ ತೈಲ ಕಂಪನಿಗಳು, ಎಲ್‌ಪಿಜಿ ವಿತರಕು ಬೆಂಬಲ ನೀಡಿದ್ದು, ಇದರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಗೃಹ ಬಳಕೆ ಸಿಲಿಂಡರ್‌ಗಳು ಆಟೋ ಮತ್ತಿತರೆ ವಾಹನಗಳಿಗೆ ದುರ್ಬಳಕೆಯಾಗುತ್ತಿವೆ. ಈ ಅಕ್ರಮಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು.

ಇಂದು ಅಪ್ರೆಂಟಿಸ್‌ಶಿಪ್ ಮೇಳ

ಮೈಸೂರು,ಅ.20–ಅ.21ರಂದು ಬೆಳಗ್ಗೆ 9ರಿಂದ ಸಂಜೆ 5ರವರೆಗೆ ಎನ್.ಆರ್. ಮೊಹಲ್ಲಾದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಪ್ರೆಂಟಿಸ್‌ಶಿಪ್ ಮೇಳ ಆಯೋಜಿಸಲಾಗಿದೆ. ಮೇಳದಲ್ಲಿ ವಿವಿಧ ಪ್ರತಿಷ್ಠಿತ ಉದ್ದಿಮೆಗಳು ಪಾಲ್ಗೊಳ್ಳುತ್ತಿದ್ದು, ಐಟಿಐ ಹಾಗೂ 10ನೇ ತರಗತಿ ಉತ್ತೀರ್ಣರಾದ ಅಭ್ಯರ್ಥಿಗಳು ಭಾಗವಹಿಸಬಹುದು. ಮಾಹಿತಿಗೆ ಮೊ.ಸಂ.9945711787, 9945616088 ಅನ್ನು ಸಂಪರ್ಕಿಸಿ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

21.10.2024 ಸೋಮವಾರ, ಮಳೆ ನಕ್ಷತ್ರ: ಚಿತ್ತ, 10.10.2024ರಿಂದ 23.10.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಅಶ್ವಯುಜ ಮಾಸ, ಕೃಷ್ಣ ಪಕ್ಷ, ತಿಥಿ: ಚೌತಿ, ನಕ್ಷತ್ರ: ರೋಹಿಣಿ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಮೂತ್ರಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9ರಿಂದ ಸಂಜೆ 4.30 ರವರೆಗೆ.


■ **ಮೈಸೂರು ಜಿಲ್ಲಾ ರಂಗಭೂಮಿ ವೃತ್ತಿ ಕಲಾವಿದೆಯರ ಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** ಸಂಘದ 35ನೇ ಸಂಭ್ರಮಾಚರಣೆ ಪ್ರಯುಕ್ತ ಎಸ್.ಎಸ್.ಗಾಯಿತ್ರಿ ಅವರ ನೆನಪಿನ ನಾಟಕೋತ್ಸವ, ಶ್ರೀ ಶಿವಕೃಪಾ ಸಾಂಸ್ಕೃತಿಕ ವೇದಿಕೆಯಿಂದ 'ಮೋಹಿನಿ ಭಸ್ಮಾಸುರ' ನಾಟಕ, ಸ್ಥಳ: ಪುರಭವನ, ಮಧ್ಯಾಹ್ನ 1ಕ್ಕೆ.

■ **ಶ್ರೀ ದುರ್ಗಾ ಫೌಂಡೇಷನ್:** ನಾಡಹಬ್ಬ ದಸರಾ ಅಂಗವಾಗಿ ಮನೆ ಮನೆ ಬೊಂಬೆ ಕೂರಿಸುವ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣಾ ಸಮಾರಂಭ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್.ಶ್ರೀವತ್ಸ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಹಿರಿಯ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್‌ಕುಮಾರ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸ್ಥಳ: ನಮೋ ಯೋಗ ಭವನ, ರಾಮಾನುಜ ರಸ್ತೆ, ಸಂಜೆ 4 ಗಂಟೆಗೆ

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಚಿನ್ಮಯ ಮಿಷನ್, ಮೈಸೂರು :** ಗೀತಾಜ್ಞಾನ ಯಜ್ಞ, ಸ್ವಾಮಿ ಆದಿತ್ಯಾನಂದ ಅವರಿಂದ ಭಗವದ್ಗೀತೆಯ 7ನೇ ಅಧ್ಯಾಯ–ಜ್ಞಾನ ವಿಜ್ಞಾನ ಯೋಗ ಇವರಿಂದ ಉಪನ್ಯಾಸ, ವಿಷ್ಣು ಸಹಸ್ರನಾಮ ಪಠಣ, ಸ್ಥಳ: ರಮಣ ಜ್ಞಾನ ಕೇಂದ್ರ, ಕುವೆಂಪುನಗರ, ಸಂಜೆ 6 ಗಂಟೆಯಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ : 6.10–ಚಿಂತನ, ಶಾಂತಕುಮಾರಿ, 6.15–ಗೀತಾರಾಧನ, 6.35–ಮತ್ತು ಸಂಜೆ 6.10: ಅಂಚೆ–ಅಂಕನ–ಆಕಾಶವಾಣಿ ಅಂಕಣ, ಪ್ರಸ್ತುತಿ: ಡಾ.ಅಮ್ಮಸಂದ್ರ ಸುರೇಶ ಹಾಗೂ ಎಂ.ಎನ್. ವಿಜಯ ಲಕ್ಷ್ಮಿ, ಪ್ರಾಯೋಜಕರು: ಭಾರತೀಯ ಅಂಚೆ, ಮೈಸೂರು ವಿಭಾಗ, 6.40–ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಜಯಂತಿ. ವಿ.ಭಟ್, ಎ.ಎಸ್.ನಾಗಲಕ್ಷ್ಮೀ, ವ್ಯಾಖ್ಯಾನ–ಡಾ.ಸಿ.ನಾಗಣ್ಣ, 6.50–ರೈತರಿಗೆ ಸಲಹೆ, 7.15–ಭರವಸೆ ಹೊನಲು–ವೈದ್ಯರ ಕಿವಿಮಾತು ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಟ್ರಸ್ಟ್‌ವೆಲ್ ಆಸ್ಪತ್ರೆ, ಜೆ.ಸಿ.ರಸ್ತೆ, ಬೆಂಗಳೂರು, 8.30–ಹಾಸನಾಂಬೆ ದರ್ಶನ, ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಜಿಲ್ಲಾಡಳಿತ, ಹಾಸನ, 8.45–ಕನ್ನಡ ಚಿತ್ರಗೀತೆಗಳು, 9.00– ನೆನಪಿನಂಗಳ (ಧ್ವನಿ ಭಂಡಾರದಿಂದ) ಹಿರಿಯ ಚಿತ್ರನಟ, ನಿರ್ಮಾಪಕ ದ್ವಾರಕೀಶ್ ಅವರೊಂದಿಗೆ ಎಂ.ಎಸ್. ಅನುಪಮಾ ಹಾಗೂ ಎಂ.ಶಂಕರಪ್ಪ ಅವರು ನಡೆಸಿದ್ದ ಸಂವಾದ, 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ವಿ. ಆರ್.ಕೃಷ್ಣನ್–ಹಾಡುಗಾರಿಕೆ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ –ಗೇಮ್ ಶೋ, ಪ್ರಸ್ತುತಿ : ದಿಗ್ವಿಜಯ್ . ಬಿ, 12.05–ವನಿತಾ ವಿಹಾರ, 12.30–ದೇವರನಾಮ, ವಿಜಯ ನವಿಲೂರು, 12.45– ನಮ್ಮ ಆರೋಗ್ಯ: ವಿಶ್ವ ಅಯೋಡಿನ್ ಕೊರತೆ ಜಾಗೃತಿ ದಿನಾಚರಣೆಯ ಸಂದರ್ಭದಲ್ಲಿ 'ಅಯೋಡಿನ್ ಕೊರತೆಯಿಂದ ಉಂಟಾಗುವ ತೊಂದರೆಗಳು ಮತ್ತು ಪರಿಹಾರ' ಕುರಿತು ಮೈಸೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯ ಜಿಲ್ಲಾ ಸಾಂಕ್ರಾಮಿಕ ರೋಗ ತಜ್ಞರಾದ ಡಾ.ಕವಿತಾ. ಹೆಚ್.ಎಸ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 1.00–ಚಿತ್ರಗೀತೆಗಳು, 1.20–ಹಾಸನಾಂಬೆ ದರ್ಶನ, ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಜಿಲ್ಲಾಡಳಿತ, ಹಾಸನ, 1.25–ಭಾವಗೀತೆಗಳು, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್.ಕೆ.ಪದ್ಮನಾಭ, ವೀಣಾ, 4.00–ಮಹಿಳಾರಂಗ –"ನಾನು ನನ್ನ ಕಂಪನಿ" ವಿವಿಧ ರೀತಿಯ ಬೊಂಬೆ ತಯಾರಿಕ ಘಟಕದ ಉದ್ಯಮಿ ಸೌಮ್ಯ ವಿ.ಗೌಡ ಅವರೊಂದಿಗೆ ಮಾತುಕತೆ. ಪ್ರಸ್ತುತಿ: ಸಹನ, 4.45–ಹಿಂದಿ ಪಾಠ, ಡಾ.ಮಧುಬಾಲಾ ಅಗರ್‌ವಾಲ್, 6.50–ಕೃಷಿರಂಗ: ಭತ್ತದ ರೋಗಗಳ ಸಮಗ್ರ ನಿರ್ವಹಣೆ. ಈ ಕುರಿತು ಮಂಡ್ಯದ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ. ವಿ.ಬಿ. ಸನತ್‌ಕುಮಾರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45–ಕನ್ನಡದಲ್ಲಿ ಭಾಷಣ– ಭಾರತದಲ್ಲಿ ಸಾಂಸ್ಕೃತಿಕ ಏಕತೆ ಕುರಿತು ಮಾತನಾಡುತ್ತಾರೆ ಅಕ್ಬರ್. ಸಿ. ಕಾಳಿಮಿರ್ಚಿ, 8.30–ರೇಡಿಯೋ ಸರಣಿ, "ಸ್ವಚ್ಛ ಆನಂದ", ರಚನೆ–ಎ.ಎಸ್.ಪ್ರಕಾಶ್, ನಿರ್ಮಾಣ –ಉಮೇಶ್. ಎಸ್. ಎಸ್, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ : ಕಾರ್ತಿಕ ವೈದ್ಯನಾಥನ್–ಹಾಡುಗಾರಿಕೆ, 10.00–ನಾಟಕ, 10.30–ಸವಿನೆನಪು

36 ವರ್ಷಗಳ ಬಳಿಕ ಭಾರತದ ವಿರುದ್ಧ ಟೆಸ್ಟ್ ಗೆದ್ದ ನ್ಯೂಜಿಲೆಂಡ್



ಬೆಂಗಳೂರು, ಅ.20– ಪಂದ್ಯದಲ್ಲಿ ಅಧಿಕಾರಯುತ ಪ್ರದರ್ಶನ ನೀಡಿದ ನ್ಯೂಜಿಲೆಂಡ್ ಭಾರತದ ವಿರುದ್ಧ ನಡೆದ ಮೊದಲ ಟೆಸ್ಟ್‌ನಲ್ಲಿ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಆ ಮೂಲಕ 3 ಪಂದ್ಯಗಳ ಟೆಸ್ಟ್ ಸರಣಿಯಲ್ಲಿ 1–0 ಅಂತರದಲ್ಲಿ ಮುನ್ನಡೆ ಸಾಧಿಸಿದೆ. ಇದರೊಂದಿಗೆ ಬರೋಬ್ಬರಿ 36 ವರ್ಷಗಳ ಬಳಿಕ ನ್ಯೂಜಿಲೆಂಡ್ ಭಾರತದ ನೆಲದಲ್ಲಿ ಮೊದಲ ಟೆಸ್ಟ್ ಗೆಲುವಿನ ರುಚಿ ಕಂಡಿದೆ.

ಇಲ್ಲಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಗೆಲ್ಲಲು 107 ರನ್‌ಗಳ ಸಾಧಾರಣ ಗುರಿ ಪಡೆದ ನ್ಯೂಜಿಲೆಂಡ್ ಮೊದಲ ಓವರ್‌ನಲ್ಲೇ ನಾಯಕ ಟಾಮ್ ಲೇಥಮ್ ವಿಕೆಟ್ ಕಳೆದುಕೊಂಡಿತು. ಜಸ್ಪ್ರೀತ್ ಬುಮ್ರಾ, ಮೊದಲ ಓವರ್‌ನ ಕೊನೆ ಎಸೆತದಲ್ಲಿ ಲೇಥಮ್ ಅವರನ್ನು ಎಲ್‌ಬಿ ಬಲೆಗೆ ಕೆಡವಿದರು. ಇನ್ನು ಮತ್ತೋರ್ವ ಆರಂಭಿಕ ಬ್ಯಾಟರ್ ಡೆವೊನ್ ಕಾನ್ವೆ(17)ಯನ್ನು ಬುಮ್ರಾ ಪೆವಿಲಿಯನ್‌ಗೆ ಅಟ್ಟಿದರು. ಆಗ ನ್ಯೂಜಿಲೆಂಡ್ ಸ್ಕೋರ್ 2 ವಿಕೆಟ್ ನಷ್ಟಕ್ಕೆ 35 ರನ್. ಇದಾದ ಬಳಿಕ ಜತೆಯಾದ ರಚಿನ್ ರವೀಂದ್ರ ಹಾಗೂ ವಿಲ್ ಯಂಗ್ 3ನೇ ವಿಕೆಟ್‌ಗೆ ಮುರಿಯದ 72 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡವನ್ನು ಯಾವುದೇ ಅಪಾಯವಿಲ್ಲದೇ ಗೆಲುವಿನ ದಡ ಸೇರಿಸಿದರು. ಮೊದಲ ಇನ್ನಿಂಗ್ಸ್‌ನಲ್ಲಿ ಆಕರ್ಷಕ ಶತಕ ಸಿಡಿಸಿ ಮಿಂಚಿದ್ದ ರಚಿನ್ ರವೀಂದ್ರ ಅಮೂಲ್ಯ 39 ರನ್ ಬಾರಿಸಿದರೆ, ಮತ್ತೊಂದು ತುದಿಯಲ್ಲಿ ವಿಲ್ ಯಂಗ್ 45 ರನ್ ಬಾರಿಸುವ ಮೂಲಕ ತಂಡವನ್ನು ಗೆಲುವಿನ ದಡ ಸೇರಿಸಿದರು.

36 ವರ್ಷಗಳ ಬಳಿಕ ಮೊದಲ ಗೆಲುವು: ನ್ಯೂಜಿಲೆಂಡ್ 1988ರಲ್ಲಿ ಕೊನೆ ಬಾರಿಗೆ ಭಾರತ ನೆಲದಲ್ಲಿ ಟೆಸ್ಟ್ ಪಂದ್ಯ ಜಯಿಸಿತ್ತು. ಮುಂಬೈನ ವಾಂಖೇಡೆ ಮೈದಾನದಲ್ಲಿ ನಡೆದಿದ್ದ ಪಂದ್ಯದಲ್ಲಿ ಕಿವೀಸ್ ಪಡೆ ಭಾರತದ ಎದುರು ಕೊನೆಯ ಬಾರಿಗೆ ಭಾರತದ ನೆಲದಲ್ಲಿ ಟೆಸ್ಟ್ ಗೆಲುವು ಸಾಧಿಸಿತ್ತು.

ಹೊಸ ತಂತ್ರಾಂಶ ತಂದ ಫಜೀತಿ: ಪಡಿತರ ವಿತರಣೆಯಲ್ಲಿ ಭಾರಿ ವ್ಯತ್ಯಯ

ಅನ್ನಭಾಗ್ಯ ಅಕ್ಕಿಗಾಗಿ ಪ್ರತಿನಿತ್ಯ ಬಡವರ ಅಲೆದಾಟ

ಸರ್ವರ್ ಸಮಸ್ಯೆಯಿಂದ ಪಡಿತರ ವಿತರಿಸಲಾಗದೇ ನ್ಯಾಯಬೆಲೆ ಅಂಗಡಿ ಮಾಲೀಕರ ಪರದಾಟ



ಮೈಸೂರು, ಅ.20(ಎಸ್‌ಬಿಡಿ)– ಆಹಾರ ಇಲಾಖೆ ಹೊಸ ತಂತ್ರಾಂಶವನ್ನು ಅಳವಡಿಸಿಕೊಂಡಿದ್ದು, ಆರಂಭಿಕ ತಾಂತ್ರಿಕ ಸಮಸ್ಯೆಯಿಂದ ಪಡಿತರ ವಿತರಣೆಯಲ್ಲಿ ವ್ಯತ್ಯಯವಾಗಿದೆ. ಪರಿಣಾಮ 15 ದಿನಗಳಿಂದ ಫಲಾನುಭವಿಗಳು ಪಡಿತರ ವಿತರಣೆ ಕೇಂದ್ರಕ್ಕೆ ಅಲೆದಾಡುವ ದುಸ್ಥಿತಿ ನಿರ್ಮಾಣವಾಗಿದೆ.

ಈವರೆಗೆ ರಾಷ್ಟ್ರೀಯ ಮಾಹಿತಿ ಕೇಂದ್ರ (ಎನ್‌ಐಸಿ)ದ ತಂತ್ರಾಂಶದ ಮೂಲಕ ಪಡಿತರ ವಿತರಿಸಲಾಗುತ್ತಿತ್ತು. ಆ ಸರ್ವರ್ ಅನ್ನು ಹಲವು ಇಲಾಖೆಗಳು ಅವಲಂಬಿಸಿದ್ದರಿಂದ ಪಡಿತರ ವಿತರಣೆ ವೇಳೆ ಪದೇ ಪದೆ ಸರ್ವರ್ ಸಮಸ್ಯೆ ಎದುರಾಗುತ್ತಿತ್ತು. ಅಲ್ಲದೆ ಹೊಸ ಕಾರ್ಡ್ ಪಡೆಯುವುದು ಹಾಗೂ ತಿದ್ದುಪಡಿ ಪ್ರಕ್ರಿಯೆಗೂ ಸಮಸ್ಯೆಯಾಗುತ್ತಿತ್ತು. ಹಾಗಾಗಿ ಪಡಿತರ ವಿತರಣೆಗೆ ಪ್ರತ್ಯೇಕ ಸರ್ವರ್ ಕೇಂದ್ರ ಸ್ಥಾಪನೆಗೆ ಒತ್ತಾಯವಿದ್ದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರ(ಕೆಎಸ್‌ಡಿಸಿ)ದ ಮೂಲಕ ಹೊಸ ತಂತ್ರಾಂಶ ಅಳವಡಿಸಿಕೊಳ್ಳಲಾಗಿದೆ. ಹೊಸ ಸರ್ವರ್‌ಗೆ ದತ್ತಾಂಶ ವರ್ಗಾವಣೆ ಸಮಯದಲ್ಲಿನ ಈ ತಾತ್ಕಾಲಿಕ ಸಮಸ್ಯೆ 2–3 ದಿನಗಳಲ್ಲಿ ಸರಿಯಾಗಲಿದೆ ಎಂದು ಆಹಾರ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಜನರಿಗೆ ಸಂಕಷ್ಟ: ಪ್ರತಿ ತಿಂಗಳು 5ನೇ ತಾರೀಖಿನಿಂದ ಪಡಿತರ ವಿತರಣೆಯಾಗುತ್ತಿತ್ತು. ಹಾಗಾಗಿ ಪ್ರಸಕ್ತ ತಿಂಗಳ ಮೊದಲ ವಾರದಿಂದಲೂ ಪಡಿತರಕ್ಕಾಗಿ ಫಲಾನುಭವಿಗಳು ನ್ಯಾಯಬೆಲೆ ಅಂಗಡಿಗೆ ಅಲೆದಾಡುತ್ತಿದ್ದಾರೆ. ಕೆಲಸ ಬಿಟ್ಟು ದಿನಗಟ್ಟಲೆ ಸಾಲಿನಲ್ಲಿ ನಿಂತರೂ ಬರಿಗೈಯಲ್ಲಿ ಮನೆಗೆ ವಾಪಸ್ಸಾಗುವಂತಾಗಿದೆ. ಸರ್ವರ್ ಸಮಸ್ಯೆ ಎಂದು ಜನರಿಗೆ ಮನವರಿಕೆ ಮಾಡಿಕೊಡುವಷ್ಟರಲ್ಲಿ ಪಡಿತರ ವಿತರಣಾ ಕೇಂದ್ರದವರೂ ಹೈರಾಣಾಗಿದ್ದಾರೆ. ಆಹಾರಕ್ಕೆ ಸರ್ಕಾರ ನೀಡುವ ಪಡಿತರವನ್ನೇ ಅವಲಂಬಿಸಿರುವ ಬಡವರ ಪಾಡು ಹೇಳತೀರದ್ದಾಗಿದೆ. ಮನೆಯಲ್ಲಿರುವ ಧಾನ್ಯ ಖಾಲಿ ಆಗಿರುವುದರಿಂದ ಊಟಕ್ಕೆ ಪರಿತಪಿಸುವಂತಾಗಿದೆ. ಸರ್ವರ್ ಡೌನ್ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಹೊಸದಾಗಿ ತಂತ್ರಾಂಶ ಅಳವಡಿಸಿಕೊಳ್ಳುವುದರ ಜೊತೆಗೆ ಪಡಿತರದಾರರನ್ನು ಮತ್ತಷ್ಟು ಸಂಕಷ್ಟಕ್ಕೆ ದೂಡಿದಂತಾಗಿದೆ.

ತಿಂಗಳು ಮುಗಿಯುತ್ತಾ ಬರುತ್ತಿದ್ದರೂ, ಅನ್ನಭಾಗ್ಯದ ಅಕ್ಕಿಗಾಗಿ ಪ್ರತೀ ದಿನ ಕೆಲಸ–ಕಾರ್ಯಗಳನ್ನು ಬಿಟ್ಟು ನ್ಯಾಯಬೆಲೆ ಅಂಗಡಿಗೆ ಅಲೆದಾಡುವುದೇ ಬಡ ಜನರ ಕೆಲಸವಾಗಿದ್ದು, ಕೂಲಿ–ನಾಲಿ ಮಾಡಿ ಜೀವನ ಸಾಗಿಸುವ ಜನರು ಸರ್ಕಾರ ಮತ್ತು ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಹಿಡಿಶಾಪ ಹಾಕುತ್ತಿದ್ದಾರೆ. ಬಡವರಿಗೆ ಉಚಿತವಾಗಿ ಅಕ್ಕಿ ಕೊಡುತ್ತಿದ್ದೇವೆ. ಅವರ ಹಸಿವು ನೀಗಿಸುತ್ತಿದ್ದೇವೆ ಎಂದು ಭಾಷಣ ಬಿಗಿಯುವ ಆಡಳಿತ ಪಕ್ಷದ ಸಚಿವರು ಹಾಗೂ ಮುಖಂಡರ ಗಮನಕ್ಕೆ ಈ ಸಮಸ್ಯೆ ಬಂದರೂ ಕೂಡ ಜಾಣ ಕುರುಡು ಪ್ರದರ್ಶಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿವೆ.

ಈ ಹಿಂದೆಯೂ ಪಡಿತರ ಸೋರಿಕೆ ಹಾಗೂ ಬೋಗಸ್ ಕಾರ್ಡ್ ತಡೆಯುವ ಉದ್ದೇಶದಿಂದ ರೇಷನ್ ಕಾರ್ಡ್‌ಗೆ ಆಧಾರ್ ದೃಢೀಕರಣ(ಇ–ಕೆವೈಸಿ) ಮಾಡಿಸುವ ಪ್ರಕ್ರಿಯೆಗೂ ಸರ್ವರ್ ಸಮಸ್ಯೆ ಕಾಡಿತ್ತು. ಆಗಲೂ ಪಡಿತರದಾರರು ರೋಸಿ ಹೋಗಿದ್ದರು. ಜೀವನೋಪಾಯದ ಕೆಲಸವನ್ನೂ ಬಿಟ್ಟು ಇ–ಕೆವೈಸಿಗಾಗಿ ಕಾದು ನಿಲ್ಲುತ್ತಿದ್ದರು. ನಿರಂತರ ಸರ್ವರ್ ಡೌನ್ ಸಮಸ್ಯೆಯಿಂದ ತೀವ್ರ ಸಂಕಷ್ಟ ನಿರ್ಮಾಣವಾಗಿತ್ತು. ಕುಟುಂಬದ ಪ್ರತೀ ಸದಸ್ಯರೂ ನ್ಯಾಯಬೆಲೆ ಅಂಗಡಿಗೆ ತೆರಳಿ ಆಧಾರ್ ದೃಢೀಕರಣಕ್ಕಾಗಿ ಅಲೆದಾಡಿದ್ದರು. ಇದೀಗ ಹೊಸ ತಂತ್ರಾಂಶ ಅಳವಡಿಸಿಕೊಳ್ಳುವಾಗಲೂ ಜನರೇ ತೊಂದರೆ ಅನುಭವಿಸುವಂತಾಗಿದೆ. ಈ ಪ್ರಕ್ರಿಯೆ ಹಾಗೂ ಪಡಿತರ ವಿತರಣೆ ದಿನಾಂಕವನ್ನು ಮುಂಚಿತವಾಗಿಯೇ ತಿಳಿಸಿದ್ದರೆ ಅಲೆದಾಟವಾದರೂ ತಪ್ಪುತ್ತಿತ್ತು ಎಂಬುದು ನೊಂದವರ ನುಡಿ.

ಅ.23, ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ

ಮೈಸೂರು, ಅ.20–ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಅ.23ರಂದು ಬೆಳಗ್ಗೆ 10.30 ಗಂಟೆಗೆ ಕರ್ನಾಟಕ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಕಾರ್ಯಕ್ರಮದ ಉದ್ಘಾಟನೆ ಮಾಡಲಿದ್ದು, ಶಾಸಕ ಕೆ.ಹರೀಶ್ ಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್, ಶಾಸಕ ಅನಿಲ್ ಕುಮಾರ್.ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷರಾದ ಎ.ಬಿ ರಮೇಶ್ ಬಂಡಿಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಗೌರವ ಉಪಸ್ಥಿತರಿರಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಸುನಿಲ್ ಬೋಸ್ ಆಗಮಿಸಲಿದ್ದಾರೆ.

ಶ್ರೀರಂಗಪಟ್ಟಣ-ಜೇವರ್ಗಿ ರಾಷ್ಟ್ರೀಯ ಹೆದ್ದಾರಿಯ

ಬನಘಟ್ಟ-ಕಿರಂಗೂರು ರಸ್ತೆ ಅಭಿವೃದ್ಧಿ ಕಾಮಗಾರಿಗೆ ಹೆಚ್‌ಡಿಕೆ ಭೂಮಿ ಪೂಜೆ

ಶ್ರೀರಂಗಪಟ್ಟಣ/ಪಾಂಡವಪುರ, ಅ.20– ಪಟ್ಟಣ ಮಿನಿ ವಿಧಾನಸೌಧದ ಮುಂಭಾಗ ಶ್ರೀರಂಗಪಟ್ಟಣ–ಜೇವರ್ಗಿ ರಾಷ್ಟ್ರೀಯ ಹೆದ್ದಾರಿಯ ಬನಘಟ್ಟದಿಂದ–ಕಿರಂಗೂರುವರೆಗಿನ ರಸ್ತೆಯನ್ನು 45 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಭೂಮಿ ಪೂಜೆ ಸಲ್ಲಿಸಿದರು.

ಬಳಿಕ ಮಾತನಾಡಿದ ಅವರು, ಸಿ.ಎಸ್. ಪುಟ್ಟರಾಜು ಅವರು ಸಂಸದರಾಗಿ ಕೆಲಸ ಮಾಡುವ ಸಂದರ್ಭದಲ್ಲಿ ಶ್ರೀರಂಗಪಟ್ಟಣ –ಜೇವರ್ಗಿ ರಾಷ್ಟ್ರೀಯ ಹೆದ್ದಾರಿಯನ್ನು ಬನಘಟ್ಟದಿಂದ ಬೆಳ್ಳೂರುವರೆಗೂ ಅಭಿವೃದ್ಧಿಪಡಿಸಿದ್ದರು. ಉಳಿದಂತೆ ಬನಘಟ್ಟದಿಂದ –ಕಿರಂಗೂರುವರೆಗೆ ಮೈಸೂರು ಸಂಪರ್ಕಿಸುವ ರಸ್ತೆಯನ್ನು ಅಂದಾಜು 45 ಕೋಟಿ ವೆಚ್ಚದಲ್ಲಿ 17 ಸೇತುವೆ ಕಾಮಗಾರಿಗಳು ಒಳಗೊಂಡು 11 ಕಿಮೀ ಉದ್ದದವರೆಗೆ ರಸ್ತೆ ಅಭಿವೃದ್ಧಿಗೆ ಚಾಲನೆ ನೀಡಲಾಗಿದೆ. ಜನರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಡಿಪಿಆರ್ ತಯಾರಿಸಿ ಸಣ್ಣಪುಟ್ಟ ಬದಲಾವಣೆಗಳನ್ನು ಮಾಡಿಕೊಂಡು ರಸ್ತೆಯನ್ನು ಗುಣಮಟ್ಟದಿಂದ ಅಭಿವೃದ್ಧಿಪಡಿಸಲಾಗುವುದು ಎಂದರು.

ಕೇಂದ್ರದ ಭೂಸಾರಿಗೆ ಸಚಿವರು ಹೆದ್ದಾರಿಗಳ ಅಭಿವೃದ್ಧಿಗಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಚರ್ಚಿಸಿದ್ದಾರೆ ಕೇಂದ್ರದಿಂದ ರಸ್ತೆಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆಗೊಂಡ ಬಳಿಕ ರಾಜ್ಯದಲ್ಲಿರುವ ಹಲವು ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸಿ ಅಭಿವೃದ್ಧಿಪಡಿಸಲಾಗುವುದು ಎಂದರು.



ರಸ್ತೆ ಅಭಿವೃದ್ಧಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭೂಮಿ ಪೂಜೆ ನೆರವೇರಿಸಿದರು. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಇದ್ದಾರೆ.

ಕಳೆದ ನಾಲ್ಕೈದು ತಿಂಗಳಿಂದ ವಿಶ್ರಾಂತಿ ಇಲ್ಲದೆ ದೇಶದಾದ್ಯಂತ ಕೆಲಸ ಮಾಡುತ್ತಿದ್ದೇನೆ ಯುವಕರಿಗೆ ಉದ್ಯೋಗ ದೊರಕಿಸಿಕೊಡಲು ಸಾಕಷ್ಟು ಶ್ರಮಿಸಿದ್ದೇನೆ. ನಾನು ದೇಶದ ಯಾವುದೇ ಮೂಲೆಯಲ್ಲಿ ಇದ್ದರೂ ನನ್ನ ಮನಸ್ಸು ಮಂಡ್ಯದಲ್ಲಿಯೇ ಇರುತ್ತದೆ. ಜಿಲ್ಲೆಯಲ್ಲಿ ಯಾವುದೇ ಸಣ್ಣಪುಟ್ಟ ಘಟನೆಗಳು ಸಂಭವಿಸಿದರು ತಕ್ಷಣವೇ ಅಧಿಕಾರಿಗಳಿಗೆ ಕರೆ ಮಾಡಿ ಕ್ರಮವಹಿಸಲು ಸೂಚಿಸುತ್ತಿದ್ದೇನೆ ಎಂದು ಹೇಳಿದರು. ಜಿಲ್ಲೆಯಲ್ಲಿ ಶಾಲೆಗಳ ಅಭಿವೃದ್ಧಿಗೆ ಹೊತ್ತು ನೀಡಿ ಕೆಲಸ ಮಾಡಲಾಗುವುದು, ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಾದ ಇ.ಎಸ್.ವೆಂಕಟರಾಮಯ್ಯನವರ ತವರು ಗ್ರಾಮ ಟಿ.ಎಸ್.ಛತ್ರ ಗ್ರಾಮದಲ್ಲಿ ವೆಂಕಟರಾಮಯ್ಯನವರ ಹೆಸರಿನಲ್ಲಿ ನಿರ್ಮಿಸುತ್ತಿರುವ ಸರಕಾರಿ ಶಾಲೆ ಜಿಲ್ಲೆಗೆ ಮಾದರಿಯಾಗಿದೆ. ಆ ಶಾಲೆ ಅರ್ಧಕ್ಕೆ ನಿಂತಿದೆ, ಆ ಶಾಲೆ ಅಭಿವೃದ್ಧಿಗೊಂಡರೆ ಸಾಕಷ್ಟು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅನುಕೂಲವಾಗಲಿದೆ ಹಾಗಾಗಿ ಸಿ.ಎಸ್.ಪುಟ್ಟರಾಜು ಅವರ ನೇತೃತ್ವದಲ್ಲಿ ಶಾಲೆಯ ಅಭಿವೃದ್ಧಿಗೆ ಅನುದಾನ ನೀಡಲಾಗುವುದು. ಜತೆಗೆ ಜಿಲ್ಲೆಯ ಹಲವು ಶಾಲೆಗಳ ಅಭಿವೃದ್ಧಿಗೂ ಕ್ರಮವಹಿಸಲಾಗುವುದು, ಕುಂತಿಬೆಟ್ಟದ ಅಭಿವೃದ್ಧಿಗೂ ಕ್ರಮವಹಿಸಲಾಗುವುದು ಎಂದು ಭರವಸೆ ನೀಡಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ನಾನು ಸಂಸದನಾಗಿದ್ದ ಸಂದರ್ಭದಲ್ಲಿ ಜೇವರ್ಗಿ–ಶ್ರೀರಂಗಪಟ್ಟಣದ ರಾಷ್ಟ್ರೀಯ ಹೆದ್ದಾರಿಯನ್ನು ಬನಘಟ್ಟ–ಬೆಳ್ಳೂರುವರೆಗೂ ಅಭಿವೃದ್ಧಿಪಡಿಸಿದ್ದೆ. ಉಳಿದ ಬನಘಟ್ಟದಿಂದ ಕಿರಂಗೂರುವರೆಗೆ ರಸ್ತೆ ಅಭಿವೃದ್ಧಿಗೆ ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರು 45 ಕೋಟಿ ಅನುದಾನ ಬಿಡುಗಡೆ ಮಾಡಿಸಿ ರಸ್ತೆ ಅಭಿವೃದ್ಧಿಪಡಿಸಿದ್ದಾರೆ. ಮುಂದಿನ ದಿನಗಳಲ್ಲಿ ಪಾಂಡವಪುರ–ತೂಬಿನಕೆರೆ ವರೆಗಿನ ರಸ್ತೆ ಸೇರಿದಂತೆ ತಾಲೂಕಿನ ಹಲವು ರಸ್ತೆಗಳ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡಲಿದ್ದಾರೆ ಎಂದರು.

ಇದೇ ವೇಳೆ ರೈತರು, ಮುಖಂಡರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಗೆ ಮನವಿ ನೀಡಿದರು. ವಿಧಾನಪರಿಷತ್ ಸದಸ್ಯ ವಿವೇಕಾನಂದ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಎನ್.ಎಸ್.ಇಂದ್ರೇಶ್, ಜಿಪಂ ಮಾಜಿ ಸದಸ್ಯರಾದ ಸಿ.ಅಶೋಕ್, ಎಚ್.ಮಂಜುನಾಥ್, ಪುರಸಭೆ ಅಧ್ಯಕ್ಷೆ ಜ್ಯೋತಿಲಕ್ಷ್ಮಿ, ಉಪಾಧ್ಯಕ್ಷ ಅಶೋಕ್, ಜೆಡಿಎಸ್ ಅಧ್ಯಕ್ಷ ಮಲ್ಲೇಶ್ ಇತರರಿದ್ದರು.

ತಾವೇ ನಾಟಿ ಮಾಡಿದ್ದ ಭತ್ತದ ಗದ್ದೆಗೆ ಕುಮಾರಸ್ವಾಮಿ ಭೇಟಿ

ಬೆಳೆ ಕಂಡು ಸಂತಸ, ಸಾಮೂಹಿಕ ಭೋಜನ ಕೂಟದಲ್ಲಿ ಭಾಗಿ

ಪಾಂಡವಪುರ,ಅ.20– ತಾಲೂಕಿನ ಅರಳಕುಪ್ಪೆ–ಸೀತಾಪುರ ಹಳೇ ಗದ್ದೆ ಬಯಲು ಪ್ರದೇಶದಲ್ಲಿ ಕಳೆದ ಎರಡೂವರೆ ತಿಂಗಳ ಹಿಂದೆ ಭತ್ತದ ಗದ್ದೆ ನಾಟಿ ಕಾರ್ಯಕ್ಕೆ ಚಾಲನೆ ನೀಡಿದ್ದ ಸ್ಥಳಕ್ಕೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭಾನುವಾರ ಭೇಟಿ ನೀಡಿ, ಬೆಳೆ ವೀಕ್ಷಣೆ ಮಾಡಿ ಮಹಿಳೆಯರೊಂದಿಗೆ ಕುಳಿತು ಸಾಮೂಹಿಕ ಭೋಜನ ಮಾಡಿದರು.

ಭಾನುವಾರ ಮಧ್ಯಾಹ್ನ 2 ಗಂಟೆಗೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜುರೊಂದಿಗೆ ಭತ್ತದ ಗದ್ದೆಗೆ ಆಗಮಿಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಮಹಿಳೆಯರು ಆರತಿ ಬೆಳಗಿ ಸ್ವಾಗತಿಸಿದರು. ನಂತರ ಎಚ್.ಡಿ.ಕುಮಾರಸ್ವಾಮಿ, ಸಿ.ಎಸ್.ಪುಟ್ಟರಾಜು ಅವರು ಗದ್ದೆಯ ಬಳಿ ಹೋಗಿ ಭತ್ತದ ಬೆಳೆಯನ್ನು ವೀಕ್ಷಣೆ ಮಾಡಿ ಕೈಯಿಂದ ಮುಟ್ಟಿ ಖುಷಿಪಟ್ಟರು. ನಂತರ ಗದ್ದೆಯ ಬಳಿಯೇ ಭತ್ತದ ನಾಟಿ ಮಾಡಿದ್ದ ಮಹಿಳೆಯರು ಹಾಗೂ ರೈತರಿಗಾಗಿ ಆಯೋಜಿಸಿದ್ದ ಸಾಮೂಹಿಕ ಭೋಜನದಲ್ಲಿ ಕುಳಿತು ಊಟ ಮಾಡಿದರು. ಎಚ್.ಡಿ.ಕುಮಾರಸ್ವಾಮಿ ಅವರು ಸಸ್ಯಾಹಾರಿ ಊಟ ಮಾಡಿದರು, ಉಳಿದ ಗಣ್ಯರು ಹಾಗೂ ಮಹಿಳೆಯರು, ರೈತರಿಗೆ ಮಾಂಸಾಹಾರ ಊಟ ಮಾಡಿಸಲಾಗಿತ್ತು.



ಪಾಂಡವಪುರ ತಾಲೂಕಿನ ಅರಳಕುಪ್ಪೆ–ಸೀತಾಪುರ ಹಳೇ ಗದ್ದೆ ಬಯಲಿನಲ್ಲಿ ತಾವೇ ನಾಟಿ ಮಾಡಿದ್ದ ಸ್ಥಳಕ್ಕೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಭೇಟಿಕೊಟ್ಟು, ಬೆಳೆ ವೀಕ್ಷಣೆ ಮಾಡಿದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮಾತನಾಡಿ, ತಾಲೂಕಿನ ಅರಳಕುಪ್ಪೆ–ಸೀತಾಪುರ ಗದ್ದೆ ಬಯಲು ಪ್ರದೇಶದಲ್ಲಿ ಕಳೆದ ಎರಡೂವರೆ ತಿಂಗಳ ಹಿಂದೆ ಭತ್ತದ ಗದ್ದೆ ನಾಟಿ ಮಾಡುವ ಕಾರ್ಯದಲ್ಲಿ ಭಾಗಹಿಸಿದ್ದೆ ಇದೀಗ ಭತ್ತದ ಬೆಳೆ ಚೆನ್ನಾಗಿ ಬಂದಿದೆ, ಫಸಲು ನೋಡಿ ತುಂಬಾ ಖುಷಿಯಾಗುತ್ತಿದೆ, ಜತೆಗೆ ನಮ್ಮ ಸಂಪ್ರದಾಯದಂತೆ ಭತ್ತ ಬಯಲಿನಲ್ಲಿಯೇ ಕುಳಿತು ಸಾಮೂಹಿಕ ಊಟ ಮಾಡಿದ್ದು ಖುಷಿಯಾಗಿದೆ, ಹಿಂದೆ ನಾವು ನೆಲದ ಮೇಲೆ ಕುಳಿತು ಊಟ ಮಾಡುತ್ತಿದ್ದೆವು ಇದೀಗ ನೆಲದ ಮೇಲೆ ಕುಳಿತು ಊಟ ಮಾಡುತ್ತಿದ್ದೇವೆ ಎಂದರು.

ರೈತರಿಗೆ ನ್ಯಾಯುತವಾದ ಬೆಲೆ ದೊರಕಿಸಿಕೊಡಬೇಕಾಗಿದೆ. ಕೆಲವು ಬೆಳೆಗಳಿಗೆ ಕೇಂದ್ರ ಸರಕಾರ ಎಂಎಸ್‌ಪಿ ಬೆಲೆ ನಿಗದಿಪಡಿಸಿದೆ. ಮುಂದಿನ ದಿನಗಳಲ್ಲಿ ರೈತರ ಪರವಾಗಿ ಸರಕಾರದ ಗಮನ ಸೆಳೆಯುವ ಕೆಲಸ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು, ಶಾಸಕ ಎಚ್.ಟಿ.ಮಂಜು, ಎಂಎಲ್‌ಸಿ ವಿವೇಕಾನಂದ, ಜಿಪಂ ಮಾಜಿ ಸದಸ್ಯರಾದ ಸಿ.ಅಶೋಕ್, ಎಚ್.ಮಂಜುನಾಥ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ತಾಲೂಕು ಅಧ್ಯಕ್ಷ ಮಲ್ಲೇಶ್, ಚಿನಕುರಳಿ ಡೇರಿ ಅಧ್ಯಕ್ಷ ಸಿ.ಶಿವಕುಮಾರ್, ಮುಖಂಡರಾದ ಮಹದೇವು, ವಿಶ್ವನಾಥ್, ಗವಿಗೌಡ, ಲಕ್ಷ್ಮಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಮುಖಂಡರು, ಗ್ರಾಮಸ್ಥರು ಭಾಗವಹಿಸಿದ್ದರು.

ಬಾಲಕಿ ಮೇಲೆ ಅತ್ಯಾಚಾರವೆಸಗಿ ಕೊಂದಿದ್ದ ಶಿಕ್ಷಕನಿಗೆ ಜೀವಾವಧಿ ಶಿಕ್ಷೆ

ಮಂಡ್ಯ,ಅ.20– ಟ್ಯೂಷನ್‌ಗೆ ಬಂದಿದ್ದ ಬಾಲಕಿ ಮೇಲೆ ಅತ್ಯಾಚಾರವೆಸಗಿ ಕೊಲೆಗೈದಿದ್ದ ಶಿಕ್ಷಕನಿಗೆ ಜೀವಾವಧಿ ಶಿಕ್ಷೆ ವಿಧಿಸಿ, ಮಂಡ್ಯ ಜಿಲ್ಲಾ 1ನೇ ತ್ವರಿತಗತಿ ನ್ಯಾಯಾಲಯ ಆದೇಶ ಹೊರಡಿಸಿದೆ. ಮಳವಳ್ಳಿ ಪಟ್ಟಣದಲ್ಲಿ ಟ್ಯೂಷನ್ ಸೆಂಟರ್ ನಡೆಸುತ್ತಿದ್ದ ಕಾಂತರಾಜು (52) ಶಿಕ್ಷೆಗೊಳಗಾದ ಆರೋಪಿ. ಈತ 2022ರ ಅಕ್ಟೋಬರ್‌ನಲ್ಲಿ ಟ್ಯೂಷನ್‌ಗೆ ಬಂದಿದ್ದ ಬಾಲಕಿಗೆ ಚಾಕೋಲೇಟ್ ಕೊಡಿಸುವುದಾಗಿ ಪುಸಲಾಯಿಸಿ ಸಮೀಪದಲ್ಲೇ ಇದ್ದ ಗಲ್ಲಿಗೆ ಕರೆದೊಯ್ದು ಅತ್ಯಾಚಾರವೆಸಗಿದ್ದ. ನಂತರ ಬಾಲಕಿಯನ್ನು ಕೊಲೆ ಮಾಡಿ ಮಳವಳ್ಳಿ ಪಟ್ಟಣದ ಮೈಸೂರು ರಸ್ತೆಯಲ್ಲಿರುವ ಬೇಕರಿಯೊಂದರ ಹಿಂಭಾಗ ನಿರ್ಮಾಣ ಹಂತದಲ್ಲಿದ್ದ ಮನೆಯ ಕಟ್ಟಡದ ನೀರಿನ ಸಂಪಿಗೆ ಬಿಸಾಕಿದ್ದ.

ಈ ಪ್ರಕರಣದ ತನಿಖೆ ನಡೆಸಿದ ಮಳವಳ್ಳಿ ಠಾಣೆಯ ಪೊಲೀಸರು ಆರೋಪಿ ಕಾಂತರಾಜುವನ್ನು ಬಂಧಿಸಿ ವಿಚಾರಣೆಗೊಳಪಡಿಸಿದಾಗ ಹಲವು ಸಾಕ್ಷ್ಯಗಳನ್ನು ಕಲೆ ಹಾಕಿ ನ್ಯಾಯಾಲಯಕ್ಕೆ ಈತನ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ 1ನೇ ತ್ವರಿತಗತಿ ನ್ಯಾಯಾಲಯದ ನ್ಯಾಯಾಧೀಶರಾದ ಮಂಜುಳಾ ಇಟ್ಟಿ ಅವರು ಆರೋಪಿ ಕಾಂತರಾಜು ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅಪರಾಧಿಗೆ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಪ್ರಾಸಿಕ್ಯೂಷನ್ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ವಿ.ಎಸ್.ಭಟ್ ಅವರು ವಾದ ಮಂಡಿಸಿದ್ದರು.

ಈಜಲು ಹೋಗಿದ್ದ ಬಾಲಕರಿಬ್ಬರು ನೀರುಪಾಲು, ಶೋಧ ಕಾರ್ಯ

ಮದ್ದೂರು: ಕೆರೆಯಲ್ಲಿ ಈಜಲು ಹೋಗಿದ್ದ ಬಾಲಕರಿಬ್ಬರು ನೀರುಪಾಲಾಗಿದ್ದು, ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ತೆರಳಿ ಶೋಧನಾ ಕಾರ್ಯ ನಡೆಸಿದರು. ತಾಲೂಕಿನ ದೇಶಹಳ್ಳಿ ಗ್ರಾಮದಲ್ಲಿ ಭಾನುವಾರ ಈ ಘಟನೆ ಸಂಭವಿಸಿದೆ.



ತಾಲೂಕಿನ ಶಂಕರಪುರ ಗ್ರಾಮದ ರಂಜನ್ ಮತ್ತು ಮುತ್ತು ಈಜಾಡಲು ಹೋಗಿ ಮೃತಪಟ್ಟಿರುವ ಶಂಕೆ ಇದ್ದು, ದೇಹಗಳು ಇನ್ನು ಪತ್ತೆಯಾಗದೆ ಕೆರೆಯಲ್ಲಿ ಅಗ್ನಿಶಾಮಕ ದಳದವರು ತಡರಾತ್ರಿಯವರೆಗೂ ಶೋಧನೆ ನಡೆಸಿದರು. ಭಾನುವಾರ ಆಗಿದ್ದರಿಂದ ಶಾಲೆಗೆ ರಜೆ ಇದ್ದು, ಇಬ್ಬರು ಬಾಲಕರು ಶಂಕರಪುರದಿಂದ ದೇಶಹಳ್ಳಿಗೆ ಆಗಮಿಸಿ, ಕೆರೆಯಲ್ಲಿ ಈಜಾಡುವಾಗ ಕೆರೆ ಭರ್ತಿಯಾಗಿದ್ದ ಹಿನ್ನೆಲೆಯಲ್ಲಿ ಸುಳಿಗೆ ಸಿಲುಕಿದ್ದಾರೆ. ಇತ್ತೀಚೆಗಷ್ಟೇ ದೇಶಹಳ್ಳಿ ಕೆರೆ ತುಂಬಿದ್ದು ಪ್ರತಿದಿನ ಹಲವು ಮಂದಿ ಈಜಾಡಲು ಹೋಗುತ್ತಿದ್ದಾರೆ. ಅಲ್ಲಿ ಯಾವುದೇ ರೀತಿಯ ಭದ್ರತೆ ಇಲ್ಲದ ಕಾರಣ ಯಾವುದೇ ಕಾವಲುಗಾರರು ಇಲ್ಲದ ಕಾರಣ ಈ ಅವಘಡ ಸಂಭವಿಸಿದೆ. ಸೂಕ್ತವಾದ ಭದ್ರತೆ ಒದಗಿಸಬೇಕು ಎಂದು ಸ್ಥಳೀಯರು ಹಾಗೂ ಪ್ರವಾಸಿಗರು ಸಂಬಂಧಪಟ್ಟ ಪಂಚಾಯಿತಿ ಹಾಗೂ ಕಾವೇರಿ ನೀರಾವರಿ ನಿಗಮಕ್ಕೆ ಆಗ್ರಹಿಸಿದ್ದಾರೆ. ಬೆಸಗರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಿಡದೆ ಕಾಡಿದ ಮಳೆಗೆ ಕುಸಿದ ಮಣ್ಣಿನ ಮನೆ

ಕಿಕ್ಕೇರಿ: ವಾರದಿಂದ ಬಿಡದೆ ಸುರಿಯುತ್ತಿರುವ ಮಳೆಗೆ ಹಳೆಯ ಮಣ್ಣಿನ ಮನೆ ಕುಸಿದು ಬೀಳುವ ಹಂತ ತಲುಪುವಂತಾಗಿದೆ.

ಹೋಬಳಿಯ ಚಿನ್ನೇನಹಳ್ಳಿ ಗ್ರಾಮದ ರೈತ ಮಹಿಳೆ ರಾಜೇಗೌಡರ ಪತ್ನಿ ಪಾರ್ವತಮ್ಮ ಅವರ ಮಣ್ಣಿನ ಮನೆ ಶನಿವಾರ ತಡರಾತ್ರಿ ಸುರಿದ ಮಳೆ ಆರ್ಭಟಕ್ಕೆ ಸಂಪೂರ್ಣ ಕುಸಿದಿದೆ ದಪ್ಪದಾದ ಮಣ್ಣಿನ ಗೋಡೆ ಕುಸಿತಕ್ಕೆ ಮನೆಯ ಮೇಲ್ಛಾವಣಿ, ಗಳ, ತೀರು, ನಾಡ ಹೆಂಚುಗಳು ಸಂಪೂರ್ಣ ಹಾಳಾಗಿದೆ.

ಮನೆಯಲ್ಲಿದ್ದ ದವಸಧಾನ್ಯ, ಪಾತ್ರೆಗಳು, ಮಂಚ, ಬಟ್ಟೆಗಳು ನಾಶವಾಗಿವೆ. ಗೋಡೆ ಕುಸಿದ ವೇಳೆ ಮನೆಯಲ್ಲಿ ಮಲಗಿದ್ದ ಪಾರ್ವತಮ್ಮಳಿಗೆ ಜೋರು ಶಬ್ದ ಕೇಳಿ ಮನೆಯಿಂದ ಹೊರಗಡೆ ಬಂದು ಪಾರಾಗಿದ್ದಾರೆ.

ನಾಳೆ ಮಿನಿ ಉದ್ಯೋಗ ಮೇಳ

ಮಂಡ್ಯ,ಅ.20– ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಮೆ॥ಇಕ್ವಿಟಾಸ್ ಸ್ಮಾಲ್ ಫೈನಾನ್ಸ್, ಮೆ॥ ಬಿ.ಜೆಡ್ ಫೈನಾನ್ಸ್ ಲಿಮಿಟೆಡ್, ಮೆ॥ ಇಂಡೂಸ್ ಟಿ.ಎಂ.ಟಿ ಇಂಡಸ್ಟ್ರೀಸ್ ಹಾಗೂ ಮೆ॥ ಡೆಕ್ಕನ್ ಮ್ಯಾನೇಜ್‌ಮೆಂಟ್ ಸಂಸ್ಥೆ ಸಹಯೋಗದಲ್ಲಿ ಅ.22 ರಂದು ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಿನಿ ಉದ್ಯೋಗ ಮೇಳ ನಡೆಯಲಿದೆ.

ಸಂಸ್ಥೆಯಲ್ಲಿ ಖಾಲಿಯಿರುವ ಹಲವಾರು ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೊಮಾ ಹಾಗೂ ಯಾವುದೇ ಪದವಿ ಉತ್ತೀರ್ಣರಾದ 18 ರಿಂದ 35 ವರ್ಷದೊಳಗಿನ ಅಭ್ಯರ್ಥಿಗಳು ಮಿನಿ ಉದ್ಯೋಗ ಮೇಳದಲ್ಲಿ ಹಾಜರಾಗತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ:08232–295124 ಮತ್ತು 9164642684, 8970646629 ಹಾಗೂ 8660061488 ಅನ್ನು ಸಂಪರ್ಕಿಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ಪ್ರಗತಿ ಪರಿಶೀಲನಾ ಸಭೆ

ಮಂಡ್ಯ,ಅ.20– ಬೆಂಗಳೂರು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ ಪದ್ಮಾವತಿ ಅವರು ಅಕ್ಟೋಬರ್ 22 ರಂದು ಬೆಳಿಗ್ಗೆ 10 ಗಂಟೆಗೆ ಮಂಡ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಡಾ. ಜೆ.ಎಲ್ ಜವರೇಗೌಡ ಸಭಾಂಗಣದಲ್ಲಿ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಕಿಚ್ಚ ಸುದೀಪ್‌ಗೆ ಮಾತೃವಿಯೋಗ



ಬೆಂಗಳೂರು, ಅ.20– ನಟ ಕಿಚ್ಚ ಸುದೀಪ್ ಅವರ ತಾಯಿ ಸರೋಜಾ ಅವರು ಭಾನುವಾರ ನಿಧನರಾದರು. ಅವರಿಗೆ 86 ವರ್ಷ ವಯಸ್ಸಾಗಿತ್ತು.

ದೀರ್ಘಕಾಲದ ಅನಾರೋಗ್ಯದಿಂದ ಬಳಲುತ್ತಿದ್ದ ಸರೋಜಾ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆಗೆ ಸ್ಪಂದಿಸದೆ ಅವರು ನಿಧನರಾದರು. ಜೆ.ಪಿ.ನಗರದ ನಿವಾಸದ ಬಳಿ ಅಂತಿಮ ದರ್ಶನಕ್ಕಿಟ್ಟು ಸಂಜೆ ವೇಳೆಗೆ ವಿಲ್ಸನ್ ಗಾರ್ಡನ್ ಚಿತಾಗಾರದಲ್ಲಿ ಹಿಂದೂ ಸಂಪ್ರದಾಯದಂತೆ ಅಂತ್ಯಕ್ರಿಯೆ ನೆರವೇರಿಸಲಾಯಿತು. ಅಂತಿಮ ವಿಧಿ ವಿಧಾನ ನೆರವೇರಿಸಿದ ಸುದೀಪ್, ತಾಯಿಯನ್ನು ನೆನೆದು ಬಿಕ್ಕಿ ಬಿಕ್ಕಿ ಕಣ್ಣೀರಿನ ವಿದಾಯ ಹೇಳಿದರು. ಇವರಿಗೆ ಚಿತ್ರರಂಗ ಹಾಗೂ ಕಿರುತೆರೆ ಕಲಾವಿದರು ಸಾಂತ್ವನ ಹೇಳಿದರು. ಸುದೀಪ್ ತಾಯಿ ಅಗಲಿಕೆಗೆ ಉಪಮುಖ್ಯ ಮಂತ್ರಿ ಡಿ.ಕೆ.ಶಿವ ಕುಮಾರ್, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಹಲವು ರಾಜಕೀಯ ನಾಯಕರು, ಚಿತ್ರರಂಗದ ಕಲಾವಿದರು ಸಂತಾಪ ಸೂಚಿಸಿದ್ದಾರೆ.

ಕನ್ನಡದಲ್ಲೇ ಪವನ್ ಕಲ್ಯಾಣ್ ಸಂತಾಪ: ಸುದೀಪ್ ಅವರ ತಾಯಿ ಸರೋಜಾ ನಿಧನದ ಹಿನ್ನೆಲೆಯಲ್ಲಿ 'ಆಂಧ್ರ ಪ್ರದೇಶ ಉಪ ಮುಖ್ಯಮಂತ್ರಿ ಕಚೇರಿ' ಎಕ್ಸ್(ಟ್ವಿಟರ್) ಖಾತೆ ಮೂಲಕ ಪವನ್ ಕಲ್ಯಾಣ್ ಅವರು ಪೋಸ್ಟ್ ಮಾಡಿ, ಸಂತಾಪ ಸೂಚಿಸಿದ್ದಾರೆ. 'ಖ್ಯಾತ ನಟ ಸುದೀಪ್ ಅವರ ತಾಯಿ ಶ್ರೀಮತಿ ಸರೋಜಾ ಸಂಜೀವ್ ಅವರು ವಿಧಿವಶರಾಗಿದ್ದಾರೆ ಎಂದು ತಿಳಿದು ದುಃಖವಾಗಿದೆ. ಶ್ರೀಮತಿ ಸರೋಜಾ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ. ತಮ್ಮ ನಟನೆಯ ಮೇಲೆ ತಾಯಿಯ ಪ್ರಭಾವ ಮತ್ತು ಪ್ರೋತ್ಸಾಹ ಇದೆ ಎಂದು ಸುದೀಪ್ ಹೇಳಿದ್ದರು. ತಾಯಿಯ ನಷ್ಟದಿಂದ ಬೇಗ ಚೇತರಿಸಿಕೊಳ್ಳಬೇಕು. ಸುದೀಪ್ ಅವರ ಕುಟುಂಬಕ್ಕೆ ನನ್ನ ತೀವ್ರ ಸಂತಾಪಗಳು' ಎಂದು ಕನ್ನಡದಲ್ಲೇ ಸಾಂತ್ವನ ಹೇಳಿದ್ದಾರೆ.

ಓದುಗ, ಬರಹಗಾರರು ಅಪರಿಚಿತರಾಗಿದ್ದರೆ ಒಳಿತು



ಮೈಸೂರಿನ ಸಾಹಿತ್ಯ ಓದುಗರು ಪರಿಚಿತ, ಅಪರಿಚಿತ ಓದುಗರ ವೇದಿಕೆಯ ವಾರ್ಷಿಕೋತ್ಸವದಲ್ಲಿ ಅಪರಿಚಿತ ಓದುಗರ ತಂಡವನ್ನು ಕಾಣಬಹುದು.

ಮೈಸೂರು, ಅ.20(ಎಸ್‌ಪಿಎನ್)–ಓದುಗ ಹಾಗೂ ಬರಹಗಾರ ಇಬ್ಬರೂ ಅಪರಿಚಿತರಾಗಿದ್ದರೆ ಒಳ್ಳೆಯದು ಎಂದು ಸಾಹಿತಿ ಅಬ್ದುಲ್ ರಶೀದ್ ಅಭಿಪ್ರಾಯಪಟ್ಟರು.

ಮೈಸೂರು ಜೆಎಲ್‌ಬಿ ರಸ್ತೆಯ ರೋಟರಿ ಭವನ(ಸೆಂಟ್ರಲ್)ದಲ್ಲಿ ಮೈಸೂರಿನ ಸಾಹಿತ್ಯ ಓದುಗರು ಪರಿಚಿತ, ಅಪರಿಚಿತ ಓದುಗರ ವೇದಿಕೆಯ ವಾರ್ಷಿಕೋತ್ಸವದ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ತಿಂಗಳಿಗೊಮ್ಮೆ ಮೈಸೂರಿನ ಚೆಲುವಾಂಬ ಪಾರ್ಕಿನಲ್ಲಿ ಸೇರುತ್ತಿದ್ದ (ಅ)ಪರಿಚಿತ ಓದುಗರ ತಂಡದ ಮೊದಲ ವಾರ್ಷಿಕೋತ್ಸವ ಭಾನುವಾರ ಆಚರಿಸಿರುವುದು ಸಂತಸದ ವಿಚಾರ. ಹಿರಿಯ ಸಾಹಿತಿ ಪೂರ್ಣಚಂದ್ರ ತೇಜಸ್ವಿ ಕೂಡ ಈ ತತ್ವವನ್ನೇ ಪರಿಪಾಲಿಸಿದ್ದರು. ಓದುಗರೆಲ್ಲರೂ ಒಂದೆಡೆ ಸೇರಿ ಕುಟುಂಬದ ರೀತಿ ಒಂದುಗೂಡಿ, ಹಬ್ಬದಂತಹ ಕಾರ್ಯಕ್ರಮವನ್ನು ಆಚರಿಸಿರುವುದು ಉತ್ತಮ ಸಂಗತಿ ಎಂದರು.

ಕಾರ್ಯಕ್ರಮದಲ್ಲಿ ಅಪರಿಚಿತ ಓದುಗರಾದ ಅನುಷ್ ಶೆಟ್ಟಿ, ಅನಂತ ಕುಣಿಗಲ್, ತಂಡದ ನಿರ್ವಾಹಕ ಕಿರಣ್ ಪಿ.ಕೌಶಿಕ್, ಸಹ ನಿರ್ವಾಹಕ ಸುನಿಲ್ ನಾಗರಾಜ್, ತೃಪ್ತಿ ಪಟಗಾರ, ಲತಾ, ರಂಜಿತ, ಅರ್ಪಿತ, ಸತೀಶ್, ಗಿರೀಶ್, ಗಂಗಾಧರ್ ಮುಂತಾದವರು ಇದ್ದರು.

ವಿಜಯದಶಮಿ, ಆರ್‌ಎಸ್‌ಎಸ್ ಶತಮಾನ ಪೂರೈಸಿದ ಹಿನ್ನಲೆ ಮೈಸೂರಲ್ಲಿ ಸ್ವಯಂ ಸೇವಕರಿಂದ ಪಥ ಸಂಚಲನ



ಪಥ ಸಂಚಲನ ವೇದಿಕೆ ಕಾರ್ಯಕ್ರಮದಲ್ಲಿ ಕರ್ನಾಟಕ ದಕ್ಷಿಣ ಪ್ರಾಂತ ಕಾಲೇಜು ವಿದ್ಯಾರ್ಥಿ ಪ್ರಮುಖ್ ಉಮೇಶ್ ಮಾತನಾಡಿದರು



ವಿಜಯದಶಮಿ ಹಾಗೂ ಆರ್‌ಎಸ್‌ಎಸ್ ಶತಮಾನ ಪೂರೈಸಿದ ಹಿನ್ನಲೆಯಲ್ಲಿ ಕುವೆಂಪುನಗರದಲ್ಲಿ ಸ್ವಯಂ ಸೇವಕರಿಂದ ಪಥಸಂಚಲನ ನಡೆಸಲಾಯಿತು.

ಮೈಸೂರು, ಅ.20(ಎಂಕೆ)– ವಿಜಯದಶಮಿ ಹಾಗೂ ಆರ್‌ಎಸ್‌ಎಸ್ (ರಾಷ್ಟ್ರೀಯ ಸ್ವಯಂಸೇವಕ ಸಂಘ)ಸ್ಥಾಪನೆಯಾಗಿ ಶತಮಾನ ಪೂರೈಸಿದ ಹಿನ್ನಲೆಯಲ್ಲಿ ಭಾನುವಾರ ಸ್ವಯಂ ಸೇವಕರಿಂದ ಪಥಸಂಚಲನ ನಡೆಸಲಾಯಿತು.

ಮೈಸೂರಿನ ಕುವೆಂಪುನಗರದ (ಅಶೋಕಪುರಂ ಪೊಲೀಸ್ ಠಾಣೆ ಹಿಂಭಾಗ) ಕನ್ನೇಗೌಡ ಕ್ರೀಡಾಂಗಣದಿಂದ ಆರಂಭವಾದ ಪಥಸಂಚಲನವು ಜಯನಗರ 10 ನೇ ಕ್ರಾಸ್, 2 ನೇ ಕ್ರಾಸ್, ಇಸ್ಕಾನ್ ಟೆಂಪಲ್ ಮುಂಭಾಗ, ಜಯನಗರ 5 ನೇ ಕ್ರಾಸ್, 3 ನೇ ಕ್ರಾಸ್ ಬೀದಿಗಳಲ್ಲಿ ಸಾಗಿ ಪುನಃ ಕನ್ನೇಗೌಡ ಕ್ರೀಡಾಂಗಣಕ್ಕೆ ಬಂದು ಸೇರಿತು.

ಪಥಸಂಚಲನದಲ್ಲಿ ಸಂಘದ ಸ್ಥಾಪಕ ಕೇಶವ ಬಲಿರಾಮ ಹೆಡಗೇವಾರ್, ಎಂ.ಎಸ್.ಗೋಳ್ವಲ್ಕರ್ ಅವರ ಭಾವಚಿತ್ರಗಳನ್ನು ಹಾಗೂ ಭಗವಾಧ್ವಜ ಇರಿಸಿಕೊಂಡು ಸಾಗಿದ ಜೀಪ್‌ಗೆ, ಸ್ವಯಂಸೇವಕರಿಗೆ ರಸ್ತೆ ಬದಿ ನಿಂತ ಜನರು ಹೂಗಳನ್ನು ಎರಚಿ ಸ್ವಾಗತಿಸಿದರು. ಗಣವೇಷದೊಂದಿಗೆ ಶಿಸ್ತಿನಿಂದ ಹೆಜ್ಜೆಹಾಕಿದ 400ಕ್ಕೂ ಹೆಚ್ಚು ಸ್ವಯಂ ಸೇವಕರು, ಸಂಘ ಸ್ಥಾಪನೆಯಾದ ಕ್ಷಣವನ್ನು ಸ್ಮರಿಸಿದರು.

ಪಥಸಂಚಲನಕ್ಕೂ ಮುನ್ನ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಕರ್ನಾಟಕ ದಕ್ಷಿಣ ಪ್ರಾಂತ ಕಾಲೇಜು ವಿದ್ಯಾರ್ಥಿ ಪ್ರಮುಖ್ ಉಮೇಶ್ ಮಾತನಾಡಿ, 97 ವರ್ಷಗಳ ಹಿಂದೆ ಇದೇ ವಿಜಯದಶಮಿ ದಿನ ಮಹಾರಾಷ್ಟ್ರ ನಾಗಪುರದಲ್ಲಿ 32 ಜನ ಗಣವೇಷಧಾರಿಗಳು ಪಥಸಂಚಲನ ನಡೆಸಿ ನೆರೆದಿದವರು ಅಭಿಮಾನ ಗಳಿಸಿದ್ದರು. ಸಂಘದ ವತಿಯಿಂದ ಆಯೋಜನೆಗೊಂಡ ಮೊದಲ ಪಥಸಂಚಲನ ಅದಾಗಿತ್ತು. ಇಂದು ಐದನೇ ತಲೆಮಾರಿನ ಸ್ವಯಂ ಸೇವಕರು ಇಂದಿಲ್ಲಿ ಸೇರಿದ್ದೇವೆ ಎಂದು ಸ್ಮರಿಸಿದರು.

ಎಲ್ಲರಿಗೂ ಹಿತವನ್ನುಂಟು ಮಾಡುವ ಜೀವನ ನಡವಳಿಕೆ ಆಧಾರದ ಮೇಲೆ ಸಮಾಜದಲ್ಲಿ ಬದಲಾವಣೆಗಳಾಗಬೇಕು. ಭೂಮಿ ಹಾಗೂ ಪರ ಸ್ತ್ರೀಯರನ್ನು ತಾಯಿಯಂತೆ ಕಾಣುವುದು. ಎಲ್ಲಾ ಜೀವಿಗಳಲ್ಲಿಯೂ ಭಗವಂತನ ಅಂಶವಿದೆ ಎಂಬ ನಂಬಿಕೆ. ಪರರ ವಸ್ತುವಿಗೆ ಆಸೆ ಪಡದಿರುವುದು. ಸರ್ವೇ ಭವಂತು ಸುಖಿನಃ. ವಸುದೈವ ಕುಟುಂಬಕಂ ಎಂಬ ಮೌಲ್ಯಗಳಿಂದ ಸಮಾಜದಲ್ಲಿ ಬದಲಾವಣೆಗಳನ್ನು ಕಾಣಬೇಕಿದೆ ಎಂದರು.

ಇಡೀ ಜಗತ್ತು ಆರ್ಯಮಯವಾಗಬೇಕು. 'ಆರ್ಯ' ಎಂಬ ಪದವನ್ನಿಟ್ಟುಕೊಂಡು ಬುದ್ಧಿ ಜೀವಿಗಳು ಎನಿಸಿಕೊಂಡವರು ಸಮಾಜದಲ್ಲಿ ಹೇಗೆ ಗೊಂದಲ ವನ್ನುಂಟು ಮಾಡುತ್ತಿದ್ದಾರೆ ಎಂಬುದು ಎಲ್ಲರಿಗೂ ತಿಳಿದಿದೆ. ಆದರೆ ನಿಜಕ್ಕೂ ಆರ್ಯ ಎಂದರೆ, ಯಾರು ಸಮಾಜಕ್ಕೋಸ್ಕರ ಬದುಕುತ್ತಾನೋ ಆತನೆ ಆರ್ಯ ಎಂದು ಕರೆಯಲಾಗಿದೆ. ಇಡೀ ಜಗತ್ತೇ ಆರ್ಯಮಯವಾಗಿ ಬದುಕಬೇಕೆನ್ನುವ ಸಂಸ್ಕೃತಿ ನಮ್ಮದಾಗಿದೆ. ಹಾಗಾಗಿ ಭಾರತ ಭಾರತವಾಗಿ ಉಳಿದಾಗ ಮಾತ್ರ ವಿಶ್ವ ಉಳಿಯುತ್ತದೆ ಎಂದು ಹೇಳಿದರು.

ಇವತ್ತಿನ ನಮ್ಮ ಯುವ ಜನಾಂಗಕ್ಕೆ ಶ್ರೇಷ್ಠ ಮೌಲ್ಯವನ್ನು ಪರಿಚಯ ಮಾಡಿಕೊಡಲು ನಾವು ಹೊರಟಿದ್ದೇವೆ. ರಾವಣ, ಕೌರವರ ಸಂಹಾರದ ವೇಳೆ ರಾಮ, ಕೃಷ್ಣ ಜಾತಿ ನೋಡಲಿಲ್ಲ. ದುಷ್ಟತನದ ಸಂಹಾರವಾಗಬೇಕು ಶಿಷ್ಟತನದ ಸಂರಕ್ಷಣೆ ಆಗಬೇಕು ಎಂಬುದು ಅವರ ಮುಖ್ಯ ಧ್ಯೇಯವಾಗಿತ್ತು. ಆದರೆ ಇವತ್ತು ಸ್ವ–ಹಿತಸಾಧನೆಗಾಗಿ ಜಾತಿ, ಭಾಷೆ, ಸಂಸ್ಕೃತಿ ಹೆಸರಿನಲ್ಲಿ ಸಮಾಜ ವಿಘಟನೆ ಮಾಡುವ ವಿಕೃತಿಯನ್ನು ತಡೆಯಬೇಕು ಎಂದು ತಿಳಿದರು.

ಸದಾ ಕಾಲ ಸಜ್ಜನರು ಸುಖ–ಸಂತೋಷದಿಂದ ಬದುಕಲು, ವಿಶ್ವಶಾಂತಿಗಾಗಿ, ಹಿಂದೂ ಸಂಸ್ಕೃತಿ ಉಳಿವಿಗಾಗಿ ಭಾರತ ಶಕ್ತಿಶಾಲಿಯಾಗಬೇಕು. ಕಲಿಯುಗದಲ್ಲಿ ಸಂಘಟನೆಯೇ ಶಕ್ತಿಯಾಗಿರುವುದರಿಂದ ಸಂಘದ ಒಂದು ಲಕ್ಷ ಶಾಖೆ, ಪೂರ್ಣ ಪ್ರಮಾಣದ ಕಾರ್ಯಕರ್ತರ ಸಂಖ್ಯೆಯನ್ನು ಹೆಚ್ಚಿಸಿ, ಸಾಮಾಜಿಕ ಪರಿವರ್ತನೆಗೆ ಮುಂದಾಗುವುದು ನಮ್ಮ ಆದ್ಯತೆ. ಸಂಘದ ಸ್ವಯಂ ಸೇವಕರು ದೇಶಕ್ಕಾಗಿ ಸಮರ್ಪಿಸಿಕೊಂಡಿದ್ದಾರೆ. ಇಂದು ಜಗತ್ತಿಗೆ ಸಂಘ ಬೇಕಾಗಿದೆ. ಹಿಂದೂ ಸಮಾಜ ರಾಷ್ಟ್ರದ ಸಂರಕ್ಷಣೆ ಮಾಡುತ್ತಿದೆ.

ನಾಗರಿಕ ಶಿಷ್ಟಾಚಾರ ಪಾಲಿಸಿ: ದೇಶದ ಕಾನೂನು ಪಾಲಿಸಬೇಕು. ಸಾರ್ವಜನಿಕ ಆಸ್ತಿಯನ್ನು ಕಾಪಾಡಬೇಕು. ಜಗತ್ತಿಗೆ ಸಂಸ್ಕೃತಿ ಕಲಿಸಿದ ಭಾರತೀಯರು ನಾಗರೀಕ ಶಿಷ್ಟಾಚಾರದ ಬಗ್ಗೆ ಅರಿಯಬೇಕು. ಪ್ರತಿ ಮನೆಯಲ್ಲೂ ಕೈ ತೋಟ ಇರಬೇಕು. ಪ್ಲಾಸ್ಟಿಕ್ ಮುಕ್ತವಾಗಿರಬೇಕು. ಎಲ್ಲರನ್ನು ಸಮಾನ ಮನೋಭಾವದಿಂದ ಕಾಣಬೇಕು ಎಂದರು. ಆರ್‌ಎಸ್‌ಎಸ್ ಮೈಸೂರು ವಿಭಾಗ ಸಹಕಾರಿ ತಿಲಕ್‌ಕುಮಾರ್, ಮೈಸೂರು ನಗರ ಸಂಚಾಲಕ ವಾಸುದೇವ್ ಭಟ್ ಉಪಸ್ಥಿತರಿದ್ದರು.

ಶ್ರಮಿಕ ವರ್ಗವನ್ನು ಗೌರವಿಸಿ, ಸಾಮರಸ್ಯ ಸಮಾಜ ನಿರ್ಮಾಣಕ್ಕೆ ಸಹಕರಿಸಿ...

ದೇಶದಲ್ಲಿ ಒಂದೆಡೆ ಚಂದ್ರಯಾನ ನಡೆಯುತ್ತಿದೆ, ಮತ್ತೊಂದೆಡೆ ಅಸ್ಪೃಶ್ಯತೆಯೂ ಉಳಿದಿದೆ. ನಗರದ ಪ್ರದೇಶದಲ್ಲಿ ಅಸ್ಪೃಶ್ಯತೆಯ ವಾತಾವರಣ ಇಂದಿಗೂ ಕಾಣುತ್ತಿದೆ. ಮನೆ ಬಾಡಿಗೆಗೆ ಕೊಡುವಾಗ ನೀವು ಯಾರ ಪೈಕಿ ಎಂದು ಕೇಳುವುದನ್ನು ಬಿಟ್ಟಿಲ್ಲ. ಶ್ರಮಿಕ ವರ್ಗವನ್ನು ನಾವು ಆದರದಿಂದ ನೋಡುತ್ತಿಲ್ಲ. ಕಸವನ್ನು ಗುಡಿಸುವ ಪೌರಕಾರ್ಮಿಕರು ಒಂದು ಗ್ಲಾಸ್ ನೀರು ಕೇಳಿದರೆ ಬಾಟಲ್‌ನಿಂದ ಎರಚುವ ಮನಸ್ಥಿತಿ ಇಂದಿಗೂ ನಮ್ಮ ಸಮಾಜದಿಂದ ಹೋಗಿಲ್ಲ. ನಮ್ಮ ಮನೆಯ ಕೆಲಸದಾಕೆಯನ್ನು ಏಕವಚನದಲ್ಲಿ ಮಾತನಾಡಿಸುವುದನ್ನು ನೋಡುತ್ತೇವೆ. ಈ ರೀತಿಯ ನಡವಳಿಕೆಯಿಂದ ಸಮಾಜದಲ್ಲಿ ಸಾಮರಸ್ಯ ಮೂಡುವುದೇಗೆ. ಹಾಗಾಗಿ ನಗರ ಪ್ರದೇಶದಲ್ಲಿ ಶ್ರಮಿಕ ವರ್ಗವನ್ನು ಆದರದಿಂದ, ಗೌರವದಿಂದ ಕಾಣುವ ಮನಸ್ಥಿತಿಯನ್ನು ರೂಡಿಸಿಕೊಳ್ಳಬೇಕು. ಕನಿಷ್ಠ ವರ್ಷಕ್ಕೊಮ್ಮೆಯಾದರೂ ಸಾಮರಸ್ಯ ಭಾವದಿಂದ ಅವರನ್ನು ಮನೆಗೆ ಕರೆದು ಬೋಜನವನ್ನು ಉಣಬಡಿಸುವ ವಾತ್ಸಾಲ್ಯದ ಉದಾರತೆಯನ್ನು ತೋರಿಸುವುದು ಅವಶ್ಯವಾಗಿದೆ.

- ಉಮೇಶ್, ಕರ್ನಾಟಕ ದಕ್ಷಿಣ ಪ್ರಾಂತ ಕಾಲೇಜು ವಿದ್ಯಾರ್ಥಿ ಪ್ರಮುಖ್



ಮೈಸೂರು ಮಿತ್ರ ಸೋಮವಾರ 21 ಅಕ್ಟೋಬರ್ 2024

ಇಂದಿನಿಂದ 6ನೇ ಸುತ್ತಿನ ಲಸಿಕೆ ಕಾರ್ಯಕ್ರಮ

ಜಾನುವಾರುಗಳಿಗೆ ಲಸಿಕೆ ಕೊಡಿಸಲು ಎಡಿಸಿ ಆರ್. ಐಶ್ವರ್ಯ ಮನವಿ



ಮಡಿಕೇರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಸಿದ್ಧತೆ ಸಭೆಯಲ್ಲಿ ಜಾನುವಾರು ರೋಗ ನಿಯಂತ್ರಣ ಭಿತ್ತಿಪತ್ರವನ್ನು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಬಿಡುಗಡೆಗೊಳಿಸಿದರು.

> "ಕಾಲುಬಾಯಿ ರೋಗ ಲಸಿಕೆ ಕಾರ್ಯಕ್ರಮದ ಸೀರೋ ಮಾನಿಟರಿಂಗ್ ನಿರ್ವಹಣೆಗಾಗಿ ಸೋಮವಾರಪೇಟೆ ತಾಲೂಕಿನ ಕೆಳಕೊಡ್ಲಿ ಗ್ರಾಮವನ್ನು ಆಯ್ಕೆ ಮಾಡಲಾಗಿದೆ. ಮಾಹಿತಿಗೆ ಹತ್ತಿರದ ಪಶುವೈದ್ಯಕೀಯ ಆಸ್ಪತ್ರೆಗೆ ಭೇಟಿ ನೀಡಬಹುದು.
>
> –ಲಿಂಗರಾಜು ದೊಡ್ಡಮನಿ, ಪಶುಪಾಲನಾ ಇಲಾಖೆ ಉಪನಿರ್ದೇಶಕ.

ಮಡಿಕೇರಿ ಅ.20–ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 6ನೇ ಸುತ್ತಿನ ಕಾಲುಬಾಯಿ ರೋಗ ಲಸಿಕೆ ಕಾರ್ಯಕ್ರಮ ಅ.21 ರಿಂದ ನ.20 ರವರೆಗೆ ಕೊಡಗು ಜಿಲ್ಲೆಯಾದ್ಯಂತ ನಡೆಯಲಿದೆ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಕಾಲುಬಾಯಿ ರೋಗ ನಿಯಂತ್ರಣ ಲಸಿಕೆ ಅಭಿಯಾನದ ಜಿಲ್ಲಾ ಮಟ್ಟದ ನಿರ್ವಹಣಾ ಸಮಿತಿಯ ಪೂರ್ವ ಸಿದ್ಧತೆ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರದ ನಿರ್ದೇಶನದಂತೆ ದನ ಮತ್ತು ಎಮ್ಮೆಗೆ ಕಾಲುಬಾಯಿ ರೋಗ ಕಾಣಿಸಿಕೊಳ್ಳದಂತೆ ಲಸಿಕೆ ಹಾಕುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಕೊಡಗು ಜಿಲ್ಲೆ ಬೆಟ್ಟಗುಡ್ಡ ಪ್ರದೇಶವಾಗಿರುವುದರಿಂದ ಅಲ್ಲಲ್ಲಿ ಮನೆಗಳು ಇರುವುದರಿಂದ ಲಸಿಕೆ ಹಾಕಲು ಯಾವುದೇ ಜಾನುವಾರು ಬಿಟ್ಟು ಹೋಗದಂತೆ ಅಗತ್ಯ ವಾಹನ ನಿಯೋಜಿಸಲು ಹಾಸನದ ಹಾಲು ಒಕ್ಕೂಟದ ಜಂಟಿ ನಿರ್ದೇಶಕರಿಗೆ ಆದೇಶಿಸಿದರು.

ಪಶುಪಾಲನಾ ಇಲಾಖೆ ಉಪನಿರ್ದೇಶಕ ಡಾ.ಲಿಂಗರಾಜು ದೊಡ್ಡಮನಿ ಮಾತನಾಡಿ, ಕಾಲುಬಾಯಿ ರೋಗ ನಿಯಂತ್ರಣಕ್ಕೆ ಲಸಿಕೆ ನೀಡುವುದು ಅತ್ಯಗತ್ಯವಾಗಿದೆ. ಈ ರೋಗದ ವಿರುದ್ಧ ಪ್ರತಿ 6 ತಿಂಗಳಿಗೊಮ್ಮೆ ಜಾನುವಾರುಗಳಿಗೆ ಲಸಿಕೆ ಕೊಡಿಸಿ ರೋಗ ಬರದಂತೆ ತಡೆಯಬೇಕಿದೆ ಎಂದರು.

6ನೇ ಸುತ್ತಿನಲ್ಲಿ ಲಸಿಕೆ ವಿತರಣೆಗಾಗಿ 57 ಸಾವಿರ ಲಸಿಕೆ ಪೂರೈಕೆಯಾಗಿದೆ. ಈಗಾಗಲೇ 5ನೇ ಸುತ್ತಿನಲ್ಲಿ 2450 ಲಸಿಕೆ ಉಳಿದಿದ್ದು, ಒಟ್ಟು 59,450 ಲಸಿಕೆ ದಾಸ್ತಾನು ಇದೆ. ಕೊಡಗು ಜಿಲ್ಲೆಯಲ್ಲಿ ಪಶುವೈದ್ಯಾಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ, ಜಾನುವಾರುಗಳಿಗೆ ಲಸಿಕೆ ನೀಡಲಿದ್ದಾರೆ. ರೈತರು, ಜಾನುವಾರು ಮಾಲೀಕರು ಲಸಿಕೆ ಹಾಕಿಸಲು ಸಹಕರಿಸುವಂತೆ ಮನವಿ ಮಾಡಿದರು.

ಜಿಲ್ಲೆಯಲ್ಲಿ ಜಾನುವಾರು ಗಣತಿಯಂತೆ ದನ ಹಾಗೂ ಎಮ್ಮೆಗಳ ಸಂಖ್ಯೆ 76,920 ಇದ್ದು, ಈಗಾಗಲೇ ಲಸಿಕೆ ಕಾರ್ಯಕ್ರಮಕ್ಕೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಲಸಿಕೆಯು ಸಂಪೂರ್ಣವಾಗಿ ಉಚಿತವಾಗಿದ್ದು, ಯಾವುದೇ ರೀತಿಯ ಶುಲ್ಕವಿರುವುದಿಲ್ಲ. ಇದು ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಲಸಿಕಾದಾರರು ಜಾನುವಾರು ಮಾಲೀಕರ ಮನೆಗೆ ಬಂದಾಗ ಸಹಕಾರ ನೀಡಿ ನಾಲ್ಕು ತಿಂಗಳ ಮೇಲ್ಪಟ್ಟ ಎಲ್ಲಾ ದನ, ಎಮ್ಮೆಗಳಿಗೆ ಲಸಿಕೆ ಹಾಕಿಸುವಂತೆ ಕೋರಿದರು.

6ನೇ ಸುತ್ತಿಗೆ ಈಗಾಗಲೇ 70 ಸಾವಿರ ಸಿರಿಂಜ್ ಪೂರೈಕೆಯಾಗಿದೆ. ಲಸಿಕೆ ಕಾರ್ಯಕ್ರಮ ಕೈಗೊಳ್ಳಲು ಜಿಲ್ಲೆಯಲ್ಲಿ 13 ತಾಂತ್ರಿಕಾಧಿಕಾರಿಗಳು, 31 ಅರೆ ತಾಂತ್ರಿಕ ಸಿಬ್ಬಂದಿ, 7 ಡಿ ದರ್ಜೆ ನೌಕರರು, 13 ಹೊರಗುತ್ತಿಗೆ ನೌಕರರು, 4 ಮೈತ್ರಿ ಸಿಬ್ಬಂದಿ ಸೇರಿ ಒಟ್ಟು 69 ಸಿಬ್ಬಂದಿ ನಿಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣಾ ಕಾರ್ಯಕ್ರಮ ಸಂಬಂಧ ಸರ್ಕಾರದಿಂದ ಹೊರತಂದಿರುವ ಭಿತ್ತಿಪತ್ರವನ್ನು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಬಿಡುಗಡೆಗೊಳಿಸಿದರು. ಹಾಸನ ಹಾಲು ಒಕ್ಕೂಟದ ಜಂಟಿ ನಿರ್ದೇಶಕ ಡಾ.ಪ್ರಸನ್ನ, ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕರಾದ ಡಾ.ಪ್ರಸನ್ನ (ಮಡಿಕೇರಿ), ಡಾ.ನವೀನ್(ವಿರಾಜಪೇಟೆ), ಡಾ.ಗಿರೀಶ್(ಪೊನ್ನಂಪೇಟೆ), ಡಾ.ರಾಜಶೇಖರ್ (ಸೋಮವಾರಪೇಟೆ), ಡಾ.ಸಂಜೀವ್ ಶಿಂಧೆ (ಕುಶಾಲನಗರ), ಹಿರಿಯ ಪಶುವೈದ್ಯಾಧಿಕಾರಿ ಡಾ.ಶಿಲ್ಪ ಇತರರು ಇದ್ದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯ ಮೆಚ್ಚುಗೆ



ವಿರಾಜಪೇಟೆ ಮಹಿಳಾ ಸಮಾಜದಲ್ಲಿ ನಡೆದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಒಕ್ಕೂಟದ ಪದಾಧಿಕಾರಿಗಳ ಸಮಾವೇಶವನ್ನು ಶ್ರೀ ಶಾಂತಮಲ್ಲಿಕಾರ್ಜುನಸ್ವಾಮೀಜಿ ಉದ್ಘಾಟಿಸಿದರು.

ವಿರಾಜಪೇಟೆ, ಅ.20–ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಾತಿ ಬೇಧವಿಲ್ಲದೆ ಜನರ ಏಳಿಗೆಗಾಗಿ ಸರ್ಕಾರ ಮಾಡುವ ಕೆಲಸವನ್ನು ಮಾಡುತ್ತಿರುವುದು ಉತ್ತಮ ಕಾರ್ಯ ಎಂದು ಅರಮೇರಿ ಕಳಂಚೇರಿ ಮಠಾಧ್ಯಕ್ಷರಾದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಮೆಚ್ಚುಗೆ ವ್ಯಕ್ತಪಡಿಸಿದರು.

ಪಟ್ಟಣದ ಮಹಿಳಾ ಸಮಾಜದಲ್ಲಿ ನಡೆದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಒಕ್ಕೂಟದ ಪದಾಧಿಕಾರಿಗಳ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಇದು ಮಾದರಿ ಸಂಸ್ಥೆಯಾಗಿದೆ. ಎಲ್ಲಾ ವರ್ಗದ ಜನರನ್ನು ಒಗ್ಗೂಡಿಸಿ ಅವರ ಶ್ರೇಯೋಭಿವೃದ್ಧಿ ಹಾಗೂ ಸ್ವಾವಲಂಬನೆ ಬದುಕಿಗೆ 40 ವರ್ಷಗಳಿ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದರು.

ಯೋಜನೆಯ ಉಡುಪಿ ಕರಾವಳಿ ಪ್ರಾದೇಶಿಕ ವಿಭಾಗದ ನಿರ್ದೇಶಕ ದುಗ್ಗೇಗೌಡ ಮಾತನಾಡಿ, ಸಮಾಜ ಸೇವೆಗಾಗಿ ಯೋಜನೆಯ ಒಕ್ಕೂಟದ ಪದಾಧಿಕಾರಿಗಳು ಸೇವೆಗೆ ಮುಂದಾಗಬೇಕು. ಧರ್ಮಸ್ಥಳ ಪುಣ್ಯ ಕ್ಷೇತ್ರ ಕಷ್ಟದಲ್ಲಿರುವವರನ್ನು ಕೈಹಿಡಿದು ಮೇಲೆತ್ತುವ ಸಂಸ್ಥೆಯಾಗಿದೆ. ಜೊತೆಗೆ ಜನರ ಏಳಿಗೆಗಾಗಿ ಹಲವಾರು ಯೋಜನೆಗಳನ್ನು ಕಾರ್ಯರೂಪಕ್ಕೆ ತರಲಾಗಿದೆ ಎಂದು ತಿಳಿಸಿದರು.

ಯೋಜನೆ ಜಿಲ್ಲಾ ನಿರ್ದೇಶಕಿ ಲೀಲಾವತಿ, ಯೋಜನೆಯ ಮರುಪಾವತಿ, ಮಾಸಿಕ ವರದಿ ಬಗ್ಗೆ ಪದಾಧಿಕಾರಿಗಳಿಗೆ ಮಾಹಿತಿ ನೀಡಿದರು. ಮಡಿಕೇರಿ ಐಡಿಬಿಐ ಬ್ಯಾಂಕ್ ಸಹಾಯಕ ಪ್ರಬಂಧಕ ವಂಶಿ, ಬ್ಯಾಂಕ್ ಹಾಗೂ ಯೋಜನೆಯ ಪಾರದರ್ಶಕ ವ್ಯವಹಾರದ ಮಾಹಿತಿ ನೀಡಿದರು. ಯೋಜನಾಧಿಕಾರಿ ಬಿ.ದಿನೇಶ್, ಸಾಧನ ವರದಿ ಮಂಡಿಸಿದರು. ಕಾರ್ಯನಿರ್ವಹಣಾಧಿಕಾರಿ ಅನಿಲ್ ಕುಮಾರ್ ಮಾತನಾಡಿದರು. ಯೋಜನಾಧಿಕಾರಿ ದಿನೇಶ್, ಕಾನೂರು ವಲಯ ಮೇಲ್ವಿಚಾರಕ ಸುಜೀರ್ ಕುಲಾಲ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಆರ್.ಶ್ರೇಯಾ, ಮೇಲ್ವಿಚಾರಕ ಶ್ರೇಣಿ ಸಿಬ್ಬಂದಿ, ಕಚೇರಿ ಪ್ರಬಂಧಕರು, ಒಕ್ಕೂಟದ ಅಧ್ಯಕ್ಷರು, ಪದಾಧಿಕಾರಿಗಳು, ಸೇವಾ ಪ್ರತಿನಿಧಿಗಳು ಹಾಜರಿದ್ದರು.

ಆನೆಗಳಿಗೆ ವಿಶೇಷ ಅಭಯಾರಣ್ಯ ರಚಿಸಿ

ಸಿಎನ್‌ಸಿ ಅಧ್ಯಕ್ಷ ನಾಚಪ್ಪ ಅರಣ್ಯ, ಪರಿಸರ ಮಂತ್ರಾಲಯಕ್ಕೆ ಪತ್ರ



ಎನ್.ಯು.ನಾಚಪ್ಪ

ಮಡಿಕೇರಿ, ಅ.20–ಮಾನವ ಹಾಗೂ ವನ್ಯಜೀವಿ ಸಂಘರ್ಷ ಪರಿಹರಿಸಲು ಮತ್ತು ಜೀವ ವೈವಿಧ್ಯತೆ ಸಂರಕ್ಷಿಸಲು 'ಪ್ರಾಜೆಕ್ಟ್ ಎಲಿಫೆಂಟ್' 1991–92ರ ಅಡಿ ಆನೆಗಳಿಗೆ ವಿಶೇಷ ಅಭಯಾರಣ್ಯ ರಚನೆಗೆ ಮುಂದಾಗಬೇಕೆಂದು ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು.ನಾಚಪ್ಪ ಒತ್ತಾಯಿಸಿದ್ದಾರೆ.

ಕೇಂದ್ರ ಸರ್ಕಾರದ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯಕ್ಕೆ ಪತ್ರ ಬರೆದಿರುವ ಅವರು, ಪ್ರಾಜೆಕ್ಟ್ ಎಲಿಫೆಂಟ್ ಅಡಿಯಲ್ಲಿ ಸಂಘರ್ಷ ವಲಯದ ಆನೆಗಳಿಗೆ ವಿಶೇಷ ಅಭಯಾರಣ್ಯ ರಚನೆಗೆ ಸಿದ್ದಾಪುರ ವ್ಯಾಪ್ತಿಯ ಬೃಹತ್ ಕಾಫಿ ತೋಟವೊಂದನ್ನು ಮುಟ್ಟುಗೋಲು ಹಾಕಿಕೊಳ್ಳಬೇಕೆಂದು ಮನವಿ ಮಾಡಿದ್ದಾರೆ.

ಕೊಡವ ಲ್ಯಾಂಡ್ ಅನ್ನು ಕೂರ್ಗ್ ಅಥವಾ ಕೊಡಗು ಎಂದು ಕರೆಯುತ್ತಾರೆ. ಇದು ಕೊಡವರ ಸಾಂಪ್ರದಾಯಿಕ ಮತ್ತು ಅವಿಭಾಜ್ಯ ತಾಯ್ನಾಡು. ಕೊಡವ ಪ್ರದೇಶದ ಹಳ್ಳಿಗಾಡಿನ ಗುಡ್ಡ, ಪರ್ವತ ಪ್ರದೇಶ, ಜಲಪಾತಗಳು ಮತ್ತು ಶ್ರೀಮಂತ ಜೀವ ವೈವಿಧ್ಯತೆ ಮಾನವರು ಮತ್ತು ವನ್ಯಜೀವಿಗಳಿಗೆ ನೆಲೆಯಾಗಿದೆ. ದೇಶದಲ್ಲಿ ಕಾಡಾನೆಗಳ ಜನಸಂಖ್ಯೆ 30 ಸಾವಿರಕ್ಕಿಂತ ಹೆಚ್ಚು ಎಂದು ಅಂದಾಜಿಸಲಾಗಿದೆ. ಆದರೆ, ಕರ್ನಾಟಕದ ಆನೆಗಳ ಸಂಖ್ಯೆ 6395 ಎಂದು 2023ರಲ್ಲಿ ಅಂದಾಜಿಸಲಾಗಿದೆ. ಕೊಡವ ಲ್ಯಾಂಡ್‌ನಲ್ಲಿನ ಕಾಡಾನೆಗಳ ಸಂಖ್ಯೆ 1103 ಎಂದು ದಾಖಲಾಗಿದೆ. ಇದು ಕರ್ನಾಟಕದ ಒಟ್ಟು ಕಾಡಾನೆ ಸಂಖ್ಯೆ ಸುಮಾರು 6ನೇ ಒಂದು ಭಾಗವನ್ನು ಪ್ರತಿನಿಧಿಸುತ್ತದೆ.

40 ವರ್ಷಗಳಿಂದ ಸುಮಾರು 200ಕ್ಕೂ ಅಧಿಕ ಕಾಡಾನೆಗಳು ಹಿಂಡಿನಿಂದ ಪ್ರತ್ಯೇಕಗೊಂಡು ಜನವಸತಿ ಪ್ರದೇಶಗಳಲ್ಲಿ ವಾಸಿಸುತ್ತಿವೆ. ಈ ಆನೆಗಳು ತಮ್ಮ ನೈಸರ್ಗಿಕ ಆವಾಸಸ್ಥಾನದಲ್ಲಿ ಆಹಾರ ಮತ್ತು ನೀರಿನ ಕೊರತೆಯಿಂದ ಮಾನವ ವಸಾಹತುಗಳಿಗೆ ಸೆಳೆಯಲ್ಪಟ್ಟವು. ಕಾಲಾನಂತರದಲ್ಲಿ ಅವುಗಳು ಈ ಪ್ರದೇಶಗಳಲ್ಲಿ ಸಂತಾನೋತ್ಪತ್ತಿ ಮಾಡಿ ಶಾಶ್ವತವಾಗಿ ನೆಲೆಸಿವೆ. ಇದು ಗಮನಾರ್ಹವಾದ ಮನುಷ್ಯ–ಆನೆ ಸಂಘರ್ಷ ಸೃಷ್ಟಿಸುತ್ತದೆ ಎಂದು ತಿಳಿಸಿದ್ದಾರೆ.

ಬಿಜೆಪಿ ಮುಖಂಡನ ಹತ್ಯೆಗೈದ ಇಬ್ಬರಿಗೆ ಜೀವಾವಧಿ ಶಿಕ್ಷೆ



ಸಂಪತ್ ಕುಮಾರ್, ಹರಿಪ್ರಸಾದ್, ಜಯನ್.

ಮಡಿಕೇರಿ: ಕೊಡಗು ಬಿಜೆಪಿ ಪ್ರಧಾನ ಕಾರ್ಯದರ್ಶಿಯಾಗಿದ್ದ ಸಂಪಾಜೆ ನಿವಾಸಿ ಬಾಲಚಂದ್ರ ಕಳಗಿ ಹತ್ಯೆ ಮಾಡಿದ ಇಬ್ಬರಿಗೆ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ಕಲ್ಲುಗುಂಡಿ ನಿವಾಸಿ ಹರಿಪ್ರಸಾದ್ ಮತ್ತು ಲಾರಿ ಚಾಲಕ ಮಡಿಕೇರಿಯ ಜಯನ್ ಶಿಕ್ಷೆಗೆ ಗುರಿಯಾಗಿದ್ದಾರೆ. ಸಂಪಾಜೆ ಗ್ರಾಪಂ ಮಾಜಿ ಅಧ್ಯಕ್ಷ ಹಾಗೂ ಕೊಡಗು ಜಿಲ್ಲಾ ಬಿಜೆಪಿ ಪ್ರಭಾವಿ ಮುಖಂಡರಾಗಿದ್ದ ಬಾಲಚಂದ್ರ ಕಳಗಿ ಅವರನ್ನು 2019ರ ಮಾ.19ರಂದು ಮೇಕೇರಿ–ತಾಳತ್‌ಮನೆ ಬೈಪಾಸ್ ರಸ್ತೆಯಲ್ಲಿ ಕಾರಿಗೆ ಲಾರಿಯಲ್ಲಿ ಡಿಕ್ಕಿ ಹೊಡೆದು ಹತ್ಯೆ ಮಾಡಲಾಗಿತ್ತು. ಮೇಲ್ನೋಟಕ್ಕೆ ಇದೊಂದು ಅಪಘಾತ ಪ್ರಕರಣ ಎಂದು ಕಂಡು ಬಂದಿತ್ತಾದರೂ, ತನಿಖೆ ನಡೆಸಿದ ಪೊಲೀಸರು ಇದೊಂದು ವ್ಯವಸ್ಥಿತ ಕೊಲೆ ಎಂದು ಪ್ರಕರಣ ಭೇದಿಸಿದ್ದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆರೋಪಿಗಳಾದ ಸಂಪಾಜೆ ಕಲ್ಲುಗುಂಡಿ ನಿವಾಸಿಗಳಾದ ಸಂಪತ್ ಕುಮಾರ್, ಹರಿಪ್ರಸಾದ್ ಮತ್ತು ಲಾರಿ ಚಾಲಕ ಮಡಿಕೇರಿಯ ಜಯನ್ ಅವರನ್ನು ಮಡಿಕೇರಿ ಪೊಲೀಸರು ಬಂಧಿಸಿದ್ದರು. ಜಾಮೀನಿನಲ್ಲಿ ಹೊರಗೆ ಬಂದಿದ್ದ ಆರೋಪಿಗಳಲ್ಲಿ ಒಬ್ಬನಾದ ಸಂಪತ್‌ಕುಮಾರ್(35)ನನ್ನು ಸುಳ್ಯದ ಶಾಂತಿನಗರದಲ್ಲಿ ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು.

ಬಾಲಚಂದ್ರ ಕಳಗಿ ಕೊಲೆ ಪ್ರಕರಣ ಸಂಬಂಧ ಇದೀಗ ನ್ಯಾಯಾಲಯ ಇಬ್ಬರಿಗೆ ಜೀವಾವಧಿ ಶಿಕ್ಷೆ ಹಾಗೂ 44 ಸಾವಿರ ರೂ. ದಂಡ ವಿಧಿಸಿ, ತೀರ್ಪು ನೀಡಿದೆ. ದಂಡದ ಹಣವನ್ನು ಮೃತ ಬಾಲಚಂದ್ರ ಕಳಗಿ ಅವರ ಪತ್ನಿಗೆ ನೀಡುವಂತೆ ನ್ಯಾಯಾಲಯ ಆದೇಶಿಸಿದೆ. ಸರ್ಕಾರದ ಪರವಾಗಿ ಅಭಿಯೋಜಕ ದೇವೇಂದ್ರ ವಾದ ಮಂಡಿಸಿದ್ದರು.



ಕಬಡಕೇರಿ ನಿವಾಸಿ ವಾಸು ನದಿಗೆ ಹಾರುತ್ತಿರವ ದೃಶ್ಯ.

ಉದ್ದೇಶಪೂರ್ವಕ ನದಿಗೆ ಹಾರಿದ ವ್ಯಕ್ತಿ

ವಾಸು ನದಿಗೆ ಬಿದ್ದ ಪ್ರಕರಣಕ್ಕೆ ಹೊಸ ತಿರುವು

ನಾಪೋಕ್ಲು, ಅ.20(ದುಗ್ಗಳ)–ಮೂರ್ನಾಡು ಬಳಿಯ ಬಲಮುರಿ ಅಗಸ್ತ್ಯೇಶ್ವರ ಜಾತ್ರೆಗೆ ಬಂದಿದ್ದ ವ್ಯಕ್ತಿ ನದಿಗೆ ಬಿದ್ದ ಪ್ರಕರಣಕ್ಕೆ ಇದೀಗ ಹೊಸ ತಿರುವು ಸಿಕ್ಕಿದ್ದು, ಉದ್ದೇಶಪೂರ್ವಕವಾಗಿ ನದಿಗೆ ಧುಮುಕಿದ್ದ ಎಂದು ಸ್ಥಳೀಯರೊಬ್ಬರ ವಿಡಿಯೋದಿಂದ ಬಹಿರಂಗಗೊಂಡಿದೆ.

ಹೊದ್ದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಬಡಕೇರಿ ನಿವಾಸಿ ವಾಸು ಕಳೆದ ಶುಕ್ರವಾರ ಬಲಮುರಿ ಜಾತ್ರೆಗೆ ಸಹವರ್ತಿಗಳೊಂದಿಗೆ ಆಗಮಿಸಿದ್ದರು. ಕಿರುಸೇತುವೆಯಲ್ಲಿ ನಡೆದು ಬರುತ್ತಿದ್ದ ಈತ ಏಕಾಏಕಿ ಕಾವೇರಿ ನದಿಗೆ ಧುಮುಕಿದ್ದು, ಈತನನ್ನು ಎಂ.ಆರ್.ಬಿಪಿನ್ ಹಾಗೂ ಸ್ಥಳೀಯರು ರಕ್ಷಿಸಿದ್ದರು.

ಮೊದಲು ಸೇತುವೆ ಮೇಲೆ ವಾಹನವೊಂದು ಮುಂಭಾಗದಿಂದ ಬರುವ ಸಂದರ್ಭ ಆಯತಪ್ಪಿ ವಾಸು ಎಂಬವರು ನದಿಗೆ ಬಿದ್ದಿದ್ದಾರೆ ಎನ್ನಲಾಗಿತ್ತು. ಆದರೆ, ವಾಸು ಅವರು ಉದ್ದೇಶಪೂರ್ವಕವಾಗಿಯೇ ನದಿಗೆ ಹಾರುವ ದೃಶ್ಯ ವ್ಯಕ್ತಿಯೊಬ್ಬರ ಕ್ಯಾಮರಾದಲ್ಲಿ ಸೆರೆಯಾಗಿದೆ. ಈತ ಯಾವ ಕಾರಣಕ್ಕೆ ನದಿಗೆ ಧುಮುಕಿದ್ದಾನೆ ಎಂಬುದು ಇನ್ನೂ ತಿಳಿದು ಬಂದಿಲ್ಲ.

ಬೈಕ್‌ಗಳ ಮುಖಾಮುಖಿ ಡಿಕ್ಕಿ: ಇಬ್ಬರು ಸಾವು



ಚೌಡಹಳ್ಳಿ ಸಮೀಪ ನಡೆದ ಬೈಕ್‌ಗಳ ಅಪಘಾತದಿಂದ ಗಾಯಗೊಂಡ ಚಂದುನನ್ನು ಗುಂಡ್ಲುಪೇಟೆ ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ಯುತ್ತಿರುವುದು.

ಗುಂಡ್ಲುಪೇಟೆ, ಅ.20– ಬೈಕ್‌ಗಳ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಇಬ್ಬರು ಸವಾರರು ಸ್ಥಳದಲ್ಲೇ ಮೃತಪಟ್ಟಿದ್ದು, ಮತ್ತೊರ್ವ ಗಂಭೀರವಾಗಿ ಗಾಯಗೊಂಡಿರುವ ಘಟನೆ ತಾಲೂಕಿನ ಚೌಡಹಳ್ಳಿ ಸಮೀಪ ಭಾನುವಾರ ನಡೆದಿದೆ.

ಚೌಡಹಳ್ಳಿ ಗ್ರಾಮದ ಶಿವಯ್ಯ(56) ಹಾಗೂ ಹುಲ್ಲೇಪುರ ಗ್ರಾಮದ ಅಜಿತ್ (22) ಮೃತಪಟ್ಟಿದ್ದು, ತೀವ್ರವಾಗಿ ಗಾಯಗೊಂಡ ಚೌಡಹಳ್ಳಿ ಗ್ರಾಮದ ಚಂದು (20)ನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಮಧ್ಯಾಹ್ನ ಈ ಮೂವರು ಹೆಲ್ಮೆಟ್ ಧರಿಸದೆ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದರು. ಈ ವೇಳೆ ಚೌಡಹಳ್ಳಿ ರಸ್ತೆ ತಿರುವಿನಲ್ಲಿ ವೇಗವಾಗಿ ಬಂದು ಮುಖಾಮುಖಿ ಡಿಕ್ಕಿ ಹೊಡೆದಿದ್ದಾರೆ. ಪರಿಣಾಮ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಸ್ಥಳಕ್ಕೆ ಸರ್ಕಲ್ ಇನ್ಸ್‌ಪೆಕ್ಟರ್ ಪರಶಿವಮೂರ್ತಿ, ಸಬ್ ಇನ್ಸ್‌ಪೆಕ್ಟರ್ ಸಾಹೇಬಗೌಡ, ಪೇದೆ ಮಹೇಶ್ ಭೇಟಿ ನೀಡಿ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಹಚ್ಚ ಹಸಿರಿನಿಂದ ಕಂಗೊಳಿಸುತ್ತಿರುವ ಅರಣ್ಯ

• ನಿರಂತರ ಮಳೆಯಿಂದ ಕಾಡಿನ ಕೆರೆಗಳು ಭರ್ತಿ • ಚಿಗುರೊಡೆದ ಗಿಡ, ಮರ



ನಿರಂತರ ಮಳೆಯಿಂದ ಹಚ್ಚ ಹಸಿರಿನಿಂದ ಕಂಗೊಳಿಸುತ್ತಿರುವ ಅರಣ್ಯ ಪ್ರದೇಶ.

ಚಾಮರಾಜನಗರ, ಅ.20–ಕಳೆದ ಹದಿನೈದು ದಿನಗಳಿಂದ ನಿರಂತರವಾಗಿ ಮಳೆಯಾಗುತ್ತಿರುವುದರಿಂದ ಜಿಲ್ಲೆಯ ಅರಣ್ಯ ಪ್ರದೇಶ ಹಚ್ಚ ಹಸಿರಿನಿಂದ ಕಂಗೊಳಿಸುತ್ತಿದ್ದು, ಅರಣ್ಯ ಸೌಂದರ್ಯವನ್ನು ಪ್ರವಾಸಿಗರು ಕಣ್ತುಂಬಿಕೊಳ್ಳುತ್ತಿದ್ದಾರೆ.

ಕಳೆದ ವರ್ಷ ವಾಡಿಕೆಗಿಂತ ಕಡಿಮೆ ಮಳೆಯಾದ್ದರಿಂದ ಕೆರೆಕಟ್ಟೆಗಳಲ್ಲಿ ನೀರು ಬತ್ತಿ ಹೋಗಿತ್ತು. ಕಾಡು ಪೂರ್ಣವಾಗಿ ಒಣಗಿ ಪ್ರಾಣಿಗಳಿಗೆ ಕುಡಿಯುವ ನೀರಿನ ತೊಂದರೆಯಾಗುವ ಹಂತ ತಲುಪಿತ್ತು. ಸೋಲಾರ್ ಪಂಪ್ ವ್ಯವಸ್ಥೆ ಇರುವ ಕೆರೆಗಳಲ್ಲಿ ಮಾತ್ರ ಅಲ್ಪ ಪ್ರಮಾಣದಲ್ಲಿ ನೀರಿತ್ತು. ಇದರಿಂದ ಪ್ರವಾಸಿಗರಿಗೆ ಪ್ರಾಣಿಗಳು ಹೆಚ್ಚು ಕಾಣಸಿಗುತ್ತಿರಲಿಲ್ಲ. ಮೂರು ವಾರಗಳಿಂದ ಅರಣ್ಯ ವ್ಯಾಪ್ತಿಯಲ್ಲಿ ಮಳೆಯಾಗುತ್ತಿರುವುದರಿಂದ ಕಾಡಿನ ಕೆರೆಗಳು ತುಂಬಿವೆ. ಗಿಡ, ಮರ, ಹುಲ್ಲು ಚಿಗುರಿ ಪರಿಸರ ಹಸಿರಾಗಿದೆ. ಸಸ್ಯಾಹಾರಿ ಪ್ರಾಣಿಗಳಿಗೆ ಮೇವಿಗೆ ಕೊರತೆ ಇಲ್ಲ. ಆದ್ದರಿಂದ ಪ್ರಾಣಿಗಳು ಹೆಚ್ಚು ಕಾಣಿಸಿಕೊಳ್ಳುತ್ತಿವೆ.

ಜಿಲ್ಲೆಯಲ್ಲಿ ಬಂಡೀಪುರ, ಬಿಳಿಗಿರಿರಂಗನಾಥಸ್ವಾಮಿ ದೇವಾಲಯ ಅರಣ್ಯ (ಬಿಆರ್‌ಟಿ), ಮಹದೇಶ್ವರಬೆಟ್ಟ ಹಾಗೂ ಕಾವೇರಿ ವನ್ಯಜೀವಿ ಧಾಮಗಳಿವೆ. ಬೇಸಿಗೆ ಕಾಲದಲ್ಲಿ ಮಳೆ ಕೊರತೆ ಪರಿಣಾಮ ಈ ಕಾಡುಗಳು ಒಣಗಿ ಬೆಂಡಾಗಿ ಬೆಂಕಿ ಆತಂಕ ಎದುರಿಸುವುದು ಸಹಜ. ಆದರೆ, ಇದೀಗ ಉತ್ತಮ ಮಳೆಯಿಂದ ಕಾಡು ಕಂಗೊಳಿಸುತ್ತಿದೆ. ಎತ್ತ ನೋಡಿದರೂ ಹಸಿರು ಹೊದಿಕೆ ಅನುಭವವಾಗುತ್ತಿದೆ. ಇದರಿಂದ ಸಹಜವಾಗಿಯೇ ಪ್ರವಾಸಿಗರನ್ನು ಅರಣ್ಯ ಪದೇಶಗಳು ಕೈಬೀಸಿ ಕರೆಯುತ್ತಿವೆ.

ಬಂಡೀಪುರ 1080 ಚದರ ಕಿಮೀ ಪ್ರದೇಶಕ್ಕೆ ಹರಡಿದ್ದರೆ, ಬಿಆರ್‌ಟಿ ವನ್ಯಧಾಮ 625 ಚದರ ಕಿಮೀ ವ್ಯಾಪಿಸಿದೆ. ಇಲ್ಲಿ ಅಸಂಖ್ಯಾ ವನ್ಯಜೀವಿಗಳು ಆಶ್ರಯ ಪಡೆದುಕೊಂಡಿವೆ. ಈಗಿನ ವಾತಾವರಣ ಅವುಗಳ ಪಾಲಿಗೂ ಹಿತವಾಗಿದ್ದು, ಸ್ವಚ್ಛಂದವಾಗಿ ವಿಹರಿಸುತ್ತಿವೆ.

ಪ್ರವಾಸಿ ತಾಣಗಳಿಗೆ ಪ್ರವಾಸಿಗರ ದಂಡು

ದಸರಾ ರಜೆ ಇದ್ದಿದ್ದರಿಂದ ಜಿಲ್ಲೆ ಮಾತ್ರವಲ್ಲದೆ, ರಾಜ್ಯದ ವಿವಿಧೆಡೆಯಿಂದ ಪ್ರವಾಸಿಗರು ಜಿಲ್ಲೆಯ ಕಾಡುಗಳು, ಪ್ರವಾಸಿ ತಾಣಗಳು, ಧಾರ್ಮಿಕ ತಾಣಗಳಿಗೆ ಸಾಕಷ್ಟು ಸಂಖ್ಯೆಯಲ್ಲಿ ಭೇಟಿ ನೀಡಿದ್ದರು. ಅದರಲ್ಲೂ ಬಂಡೀಪುರ, ಗೋಪಾಲಸ್ವಾಮಿಬೆಟ್ಟ, ಕೆ.ಗುಡಿ, ಬಿಳಿಗಿರಿರಂಗನಬೆಟ್ಟ, ಮಹದೇಶ್ವರಬೆಟ್ಟದತ್ತ ಲಕ್ಷಾಂತರ ಮಂದಿ ಬಂದು ಹೋಗುತ್ತಿದ್ದಾರೆ. ಇದರಿಂದ ಈ ತಾಣಗಳ ಯಾವ ಮೂಲೆಯಲ್ಲಿ ನೋಡಿದರೂ ಪ್ರವಾಸಿಗರು ಕಂಡು ಬರುತ್ತಿದ್ದಾರೆ.

ನೆರೆಯ ಕೇರಳ, ತಮಿಳುನಾಡಿನಿಂದಲೂ ಹೆಚ್ಚಿನ ಪ್ರವಾಸಿಗರು ಭೇಟಿ ನೀಡುತ್ತಿರುವುದು ಕಂಡು ಬರುತ್ತಿದೆ. ಜಿಲ್ಲೆಯಾದ್ಯಂತ ಮೂರ್ನಾಲ್ಕು ದಿನಗಳಿಂದ ಮೋಡ ಕವಿದ ವಾತಾವರಣ, ಚಳಿ, ಗಾಳಿ ಜೋರು ಮಳೆಯಾಗುತ್ತಿರುವುದರಿಂದ ಮಲೆನಾಡಿನಂತಾಗಿದೆ. ಭಾನುವಾರ ಬೆಳಗ್ಗೆ, ಮಧ್ಯಾಹ್ನ ತುಂತುರು ಮಳೆಯಾಯಿತು. 24 ಗಂಟೆ ಅವಧಿಯಲ್ಲಿ ಜಿಲ್ಲೆಯಾದ್ಯಂತ 0.30 ಮಿ.ಮೀ. ಮಳೆಯಾಗಿದೆ. ಇನ್ನೂ 2–3 ದಿನ ಇದೇ ವಾತಾವರಣ ಇರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕಾಂಗ್ರೆಸ್ ಕಚೇರಿಯಲ್ಲಿ ವಾಲ್ಮೀಕಿ ಜಯಂತಿ...



ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಶಾಸಕ ಎ.ಆರ್.ಕೃಷ್ಣಮೂರ್ತಿ ಪುಷ್ಪಾರ್ಚನೆ ನೆರವೇರಿಸಿದರು. ಚುಡಾ ಅಧ್ಯಕ್ಷ ಮಹಮದ್ ಅಸ್ಗರ್ ಮುನ್ನಾ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ, ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್, ಆರ್.ಮಹದೇವ, ಹೆಚ್.ವಿ.ಚಂದ್ರು, ನಗರಸಭೆ ಸದಸ್ಯೆ ಚಿನ್ನಮ್ಮ, ಕಾಗಲವಾಡಿ ಚಂದ್ರು, ಮಹೇಶ್ ಕುದರ್, ನಸ್ರುಲ್ ಖಾನ್, ಎಪಿಎಂಸಿ ಅಧ್ಯಕ್ಷ ಸೋಮೇಶ್, ಜಿಪಂ ಮಾಜಿ ಸದಸ್ಯ ರಮೇಶ್, ಅಸಂಘಟಿತ ಕಾರ್ಮಿಕ ಸಂಘದ ಅಧ್ಯಕ್ಷ ಸ್ವಾಮಿ, ಮಹದೇವಯ್ಯ, ಪುಟ್ಟಸ್ವಾಮಿ, ಮರಿಯಾಲ ಹುಂಡಿ ಕುಮಾರ್, ವಕೀಲ ಪೃಥ್ವಿ, ತಾಪಂ ಮಾಜಿ ಸದಸ್ಯ ಮಹಾಲಿಂಗು, ರಾಜು, ಸೋಮಣ್ಣ, ಹೆಚ್.ಎಂ.ಮಹದೇವಶೆಟ್ಟಿ, ಚಂಗುಮಣಿ, ರಾಜೇಶ್ ಎನ್.ಆರ್. ಪುರುಷೋತ್ತಮ್, ಮೋಹನ್ ನಗು, ಮರಿಸ್ವಾಮಿ ಇದ್ದರು.

ಕೆ.ಬಿ.ಪ್ರಕಾಶ್ ನಿಧನ



ಚಾಮರಾಜನಗರ, ಅ.20–ತಾಲೂಕು ಕುದೇರು ಗ್ರಾಮದ ಮಂಡಲ ಪಂಚಾಯಿತಿ ಮಾಜಿ ಸದಸ್ಯ ಕೆ.ಬಿ.ಪ್ರಕಾಶ್ (66) ಭಾನುವಾರ ನಿಧನರಾದರು.

ಮೃತರು ಪತ್ನಿ, ಪುತ್ರಿ, ಪುತ್ರ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸೋಮವಾರ ಮಧ್ಯಾಹ್ನ 1 ಗಂಟೆಗೆ ಮೃತರ ಜಮೀನಿನಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

ವಿದ್ಯಾಸಿರಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಚಾಮರಾಜನಗರ, ಅ.20–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನ, ಶುಲ್ಕಮರುಪಾವತಿ, ವಿದ್ಯಾಸಿರಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.



ಸ್ನಾತಕೋತ್ತರ, ವೃತ್ತಿಪರ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ಹಾಗೂ ಪ್ರವರ್ಗ–1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳು ವೆಬ್‌ಸೈಟ್: https://ssp.postmatric.karnataka.gov.inನಲ್ಲಿ ನ.30ರೊಳಗೆ ಅರ್ಜಿ ಸಲ್ಲಿಸಬೇಕು

ಮಾಹಿತಿಗೆ ವೆಬ್‌ಸೈಟ್: https://bcwd.karnataka.gov.in ಅಥವಾ ಮೊ.ಸಂ:8050770005 ಹಾಗೂ ದೂ.ಸಂ: 08226–222180 ಅನ್ನು ಸಂಪರ್ಕಿಸುವಂತೆ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎನ್‌ಎಸ್‌ಯುಐ ನಡಿಗೆ ಕ್ಯಾಂಪಸ್ ಕಡೆಗೆ ಚಾಲನೆ



ಚಾ.ನಗರ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಎನ್‌ಎಸ್‌ಯುಐ ರಾಜ್ಯಾಧ್ಯಕ್ಷ ಕೀರ್ತಿ ಗಣೇಶ್ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಚಾಮರಾಜನಗರ: ಎನ್‌ಎಸ್‌ಯುಐ ಕ್ಯಾಂಪಸ್ ಗೇಟ್‌ಮೀಟ್ ಕಾರ್ಯಕ್ರಮ ಆಯೋಜಿಸಿ ರಾಜ್ಯಾದ್ಯಂತ ಪ್ರವಾಸಗೊಂಡು ವಿದ್ಯಾರ್ಥಿಗಳ ಸಮಸ್ಯೆ ಆಲಿಸಿ, ಸರ್ಕಾರದ ಗಮನಕ್ಕೆ ತಂದು ಪರಿಹರಿಸಲು ಪ್ರಯತ್ನಿಸಲಾಗುವುದು ಎಂದು ಎನ್‌ಎಸ್‌ಯುಐ ರಾಜ್ಯಾಧ್ಯಕ್ಷ ಹಾಗೂ ಡಿ.ದೇವರಾಜು ಅರಸ್ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಕೀರ್ತಿ ಗಣೇಶ್ ಹೇಳಿದರು.

ನಗರದ ಸರ್ಕಾರಿ ಮಹಿಳಾ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಭೇಟಿ ವಿದ್ಯಾರ್ಥಿಗಳಿಂದ ಸಮಸ್ಯೆ ಆಲಿಸಿ ಮಾತನಾಡಿದ ಅವರು, ರಾಜ್ಯಾದ್ಯಂತ ವಿದ್ಯಾರ್ಥಿಗಳ ಸಮಸ್ಯೆ ಆಲಿಸುವ ನಿಟ್ಟಿನಲ್ಲಿ ಎನ್‌ಎಸ್‌ಯುಐ ಕ್ಯಾಂಪಸ್ ಗೇಟ್‌ಮೀಟ್ ಕಾರ್ಯಕ್ರಮಕ್ಕೆ ಈಗಾಗಲೇ ಮಂಗಳೂರಿನಲ್ಲಿ ಚಾಲನೆ ನೀಡಲಾಗಿದೆ. ಉಡುಪಿ, ಚಿಕ್ಕಮಗಳೂರು, ಮಂಡ್ಯ ಜಿಲ್ಲೆಗಳ ಪ್ರವಾಸ ಮಾಡಲಾಗಿದ್ದು, ವಿದ್ಯಾರ್ಥಿಗಳಿಂದ ಬಸ್ ಸಮಸ್ಯೆ, ವಿದ್ಯಾರ್ಥಿನಿಲಯ ಸಮಸ್ಯೆ, ವಿದ್ಯಾರ್ಥಿವೇತನ ಸಮಸ್ಯೆ ಕೇಳಿ ಬಂದಿದೆ. ಚಾಮರಾಜನಗರದಲ್ಲೂ ಬಸ್, ಹಾಸ್ಟೆಲ್, ವಿದ್ಯಾರ್ಥಿವೇತನ ಸಮಸ್ಯೆ ತಿಳಿದಿದೆ. ರಾಜ್ಯ ಪ್ರವಾಸ ಮುಗಿದ ಮೇಲೆ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹರಿಸಲು ಶ್ರಮಿಸಲಾಗುವುದು ಎಂದರು.

ಮನವಿ: ಸರ್ಕಾರಿ ಮಹಿಳಾ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಬಿಡುಗಡೆಯಾಗಿರುವ 5 ಕೋಟಿ ರೂ. ಅನುದಾನ ಕಡಿಮೆಯಾಗಿರುವುದರಿಂದ ಕಾಮಗಾರಿ ಆರಂಭವಾಗಿಲ್ಲ. ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸಿಕೊಡಬೇಕು. ಅಲ್ಲದೆ, ವಿದ್ಯಾರ್ಥಿನಿಲಯ ನಿರ್ಮಿಸಿಕೊಡಬೇಕು ಎಂದು ಜಿಲ್ಲಾಧ್ಯಕ್ಷ ಮೋಹನ್ ಮನವಿ ಮಾಡಿದರು.

ಬೈಕ್ ರ್‍ಯಾಲಿ: ಇದಕ್ಕೂ ಮುನ್ನ ನಗರದ ಪ್ರವಾಸಿ ಮಂದಿರದಿಂದ ಎನ್‌ಎಸ್‌ಯುಐ ಜಿಲ್ಲಾ ಘಟಕದ ವತಿಯಿಂದ ಬೈಕ್ ರ್‍ಯಾಲಿ ಮೂಲಕ ರಾಮಸಮುದ್ರದ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು.

ಇದೇ ವೇಳೆ ಕೀರ್ತಿ ಗಣೇಶ್ ಕರಿನಂಜನಪುರ ಬಿಸಿಎಂ ಬಾಲಕಿಯರ ವಿದ್ಯಾರ್ಥಿನಿಲಯ, ಮಹದೇಶ್ವರ ಬಡಾವಣೆಯ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಬೇಡರಪುರ ಇಂಜಿನಿಯರಿಂಗ್ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ಎನ್‌ಎಸ್‌ಯುಐ ರಾಜ್ಯ ಉಪಾಧ್ಯಕ್ಷ ರಫೀಕ್ ಅಲಿ, ಪ್ರಧಾನ ಕಾರ್ಯದರ್ಶಿ ಜಿ.ಎನ್.ಲೋಕೇಶ್, ಪೋಷಕ ನಾಗೇಂದ್ರ, ಯುವ ಕಾಂಗ್ರೆಸ್ ಮುಖಂಡರಾದ ಶ್ರೀನಿವಾಸ್, ಸುನಿಲ್ ಕುಮಾರ್, ಸಾಮಾಜಿಕ ಜಾಲತಾಣ ಜಿಲ್ಲಾಧ್ಯಕ್ಷ ಸೈಯದ್ ಮುಸಾಹಿಬ್, ಜಿಲ್ಲಾಧ್ಯಕ್ಷ ಮೋಹನ್ ನಗು, ಉಪಾಧ್ಯಕ್ಷರಾದ ಮಹಮ್ಮದ್ ದಸ್ತಗಿರ್, ಮುತ್ತುರಾಮು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್, ಕಾರ್ಯದರ್ಶಿ ನವೀನ್, ತಾಲೂಕು ಶಶಾಂಕ್, ಸುಜನ್, ಸುನೀಲ್ ಕುಮಾರ್, ಅಪ್ಪು ಇತರರು ಹಾಜರಿದ್ದರು.

ಮೈಸೂರಲ್ಲಿ ಗುಡುಗು-ಮಿಂಚು ಸಹಿತ ಭಾರೀ ಮಳೆ

ಮೈಸೂರು,ಅ.20 (ಪಿಎಂ)– ಮೈಸೂರಿ ನಲ್ಲಿ ಭಾನುವಾರ ರಾತ್ರಿ ಗುಡುಗು-ಮಿಂಚು ಸಹಿತ ಭಾರೀ ಮಳೆ ಯಾಯಿತು. ಕೆಆರ್ ವೃತ್ತ ಸೇರಿದಂತೆ ನಗರದ ಪ್ರಮುಖ ವೃತ್ತ ಮತ್ತು ರಸ್ತೆಗಳ ತಗ್ಗು ಜಾಗಗಳು ಜಲಾವೃತ ಗೊಂಡಿದ್ದವು. ತಡರಾತ್ರಿ ಮಳೆ ಬಂದ ಹಿನ್ನೆಲೆಯಲ್ಲಿ ಜನ ಜೀವನಕ್ಕೆ ಅಷ್ಟೇನೂ ತೊಂದರೆ ಆಗಲಿಲ್ಲ. ಆದರೆ ತಗ್ಗು ಪ್ರದೇಶದಲ್ಲಿನ ನಿವಾಸಿಗಳು ಮಳೆ ನೀರಿನ ಕಾರಣಕ್ಕೆ ಕಿರಿಕಿರಿ ಅನುಭವಿಸುವುದು ಎಂದಿನಂತೆ ಮುಂದುವರೆದಿತ್ತು.

ಅ.23ರವರೆಗೆ ಮಳೆ: ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆಯಂತೆ ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ಅ.23ರವರೆಗೆ ಮೋಡ ಕವಿದ ವಾತಾವರಣ ಇದ್ದು, ತುಂತುರು ಮಳೆ ಬರುವ ಸಂಭವವಿದೆ ಎಂದು ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಪ್ರಕಟಣೆಯಲ್ಲಿ ತಿಳಿಸಿದೆ.

ಒಂದನೇ ಪುಟದಿಂದ

ಇಡಿ ದಾಳಿ ಅಂತ್ಯ

ಬೆಂಗಳೂರಿಗೆ ಹಿಂದಿರುಗಿದರು. ಅದೇ ರೀತಿ ಪಾರ್ವತಿ ಅವರ ಹೆಸರಿನಲ್ಲಿ ಭೂಮಿ ಸಂಬಂಧ ನಡೆದಿದ್ದ ಕ್ರಯ, ಕಂದಾಯ, ಖಾತೆ ವರ್ಗಾವಣೆ, ಅನ್ಯಕ್ರಾಂತ ಕುರಿತಂತೆ ಏಕಕಾಲದಲ್ಲಿ ನಜರ್‌ಬಾದ್‌ನ ಮಿನಿ ವಿಧಾನ ಸೌಧದಲ್ಲಿರುವ ಮೈಸೂರು ತಾಲೂಕು ತಹಸೀಲ್ದಾರ್ ಕಚೇರಿ ಮೇಲೂ ಅಧಿಕಾರಿಗಳು ದಾಳಿ ನಡೆಸಿ ತಹಸೀಲ್ದಾರ್ ಮಹೇಶ್ ಕುಮಾರ್‌ರಿಂದ ಅಗತ್ಯ ಮಾಹಿತಿ ಪಡೆದಿದ್ದನ್ನು ಇಲ್ಲಿ ಸ್ಮರಿಸಬಹುದು. ಪರಿಶೀಲನೆ ವೇಳೆ ಮುಡಾ ಮತ್ತು ತಹಸೀಲ್ದಾರ್ ಕಚೇರಿಗಳಲ್ಲಿ ಅಧಿಕಾರಿಗಳು ತನಿಖೆಗೆ ಸಂಪೂರ್ಣ ಸಹಕಾರ ನೀಡಿದರಲ್ಲದೆ, ಊಟ-ತಿಂಡಿ, ಕಾಫಿ, ವಸತಿ ಸೌಕರ್ಯ ಒದಗಿಸಿದ್ದರು.

ದಾಖಲಾತಿ ಪಡೆದ ಇಡಿ ಅಧಿಕಾರಿಗಳು

ಸಂಗ್ರಹಿಸಿದ ಹಣದ ಮೊತ್ತ, ಈಗ ಹಂಚಿಕೆಯ ಸ್ಥಿತಿ ಹೇಗಿದೆ ಎಂದು ಪ್ರಶ್ನೆ ಕೇಳಲಾಗಿದೆ. ಜೆ. ದೇವರಾಜು (ಸಿಎಂ ಬಾವಮೈದುನ ಬಿ.ಎಂ. ಮಲ್ಲಿಕಾರ್ಜುನಸ್ವಾಮಿಗೆ ಭೂಮಿ ಮಾರಿದವರು) ಸಲ್ಲಿಸಿದ ಮನವಿ ಪತ್ರ ಪರಿಶೀಲಿಸಲಾಗಿತ್ತೆ? ಅವರು ವಾರಸುದಾರರೆಂಬುದಕ್ಕೆ ದೃಢೀಕರಣ ಪತ್ರ ಪಡೆಯಲಾಗಿತ್ತೆ, ಅದರ ಆಧಾರದ ಮೇಲೆ ಏನಾದರೂ ನಡಾವಳಿಗಳಾಗಿತ್ತೆ ಎಂಬ ಮಾಹಿತಿಯನ್ನೂ ಇಡಿ ಅಧಿಕಾರಿಗಳು ಕೇಳಿದ್ದಾರೆ.

ಡಿ-ನೋಟಿಫಿಕೇಷನ್ ವಿವರ: ಸರ್ವೆ ನಂಬರ್ 464ರ ಭೂಮಿಯನ್ನು ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಟ್ಟ ಆದೇಶ ಪ್ರತಿ, ಅದಕ್ಕೆ ಕಾರಣ, ಸರ್ವೆ ನಂಬರ್‌ಗೆ ಸೇರಿದ ಎಲ್ಲಾ ಭೂಮಿಯನ್ನೂ ಡಿ-ನೋಟಿಫೈ ಮಾಡಲಾಗಿತ್ತೆ? ಸರ್ವೆ ನಂಬರ್ 464ರ 3.16 ಎಕರೆ ಜಮೀನಿಗೆ ಪರಿಹಾರ ನಿಗದಿಗೆ ಅನುಸರಿಸಿರುವ ನಿಯಮ, ಮುಡಾ ನಿರ್ಣಯ, 2021ರಲ್ಲಿ ಪಾರ್ವತಿ ಅವರಿಗೆ ಪರಿಹಾರವಾಗಿ ನಿವೇಶನ ಹಂಚಿಕೆಗಾಗಿ ಮಾಡಿದ ಶಿಫಾರಸು, 2021ರ ಅಕ್ಟೋಬರ್ 25ರಂದು ಪಾರ್ವತಿ ಸಲ್ಲಿಸಿದ ಮನವಿ ಪತ್ರ, 2021ರ ನವೆಂಬರ್ 25ರಂದು ಮಾಡಿದ ರಿಲಿಂಕ್ವಿಷ್ ಡೀಡ್, 2022ರ ಜನವರಿ 5ರ ಸರ್ಕಾರದ ಆದೇಶ ಪ್ರತಿಯನ್ನೂ ಅಧಿಕಾರಿಗಳು ಕೇಳಿದ್ದಾರೆ.

ಸರ್ಕಾರದ ಅನುಮೋದಿತ ದಾಖಲೆಗಳು: ಭೂಮಿ ಕಳೆದುಕೊಂಡವರಿಗೆ ಶೇ. 50:50ರ ಅನುಪಾತದಡಿ ಬದಲಿ ನಿವೇಶನ ಹಂಚಿಕೆ ಸಂಬಂಧ ಮಾಹಿತಿ, ಆ ಬಗ್ಗೆ ಸರ್ಕಾರದ ಅನುಮತಿ ನೀಡಿತ್ತೆ? ಕೆಸರೆಯ 3.16 ಎಕರೆ ಭೂಮಿಗೆ ನೀಡಿದ ನಿವೇಶನಗಳ ವಿವರ, ಪ್ರಸ್ತುತ ದೇವನೂರು ಬಡಾವಣೆಯ ಸ್ಥಿತಿ, ಭೂಸ್ವಾಧೀನಪಡಿಸಿದ ವಿಸ್ತೀರ್ಣ, ನಿವೇಶನ ರಚನೆ ಹಾಗೂ ಹಂಚಿಕೆ ಮಾಹಿತಿಯನ್ನೂ ಇಡಿ ಕೇಳಿತ್ತು. ಬಳಸದೇ ಉಳಿದಿರುವ ಭೂಮಿ, ಶೇ. 50:50ರ ಅನುಪಾತದಡಿ ಪರಿಹಾರ ವಿತರಣೆ, 3.16 ಎಕರೆ ಭೂಮಿ ಅಭಿವೃದ್ಧಿ ಕೆಲಸ, ವೆಚ್ಚ, ಆ ಯೋಜನೆಗೆ ಎಡಿಬಿಯಿಂದ ಪಡೆದ ಸಾಲ, ಪಾರ್ವತಿ ಅವರಿಗೆ 14 ನಿವೇಶನ ಮಂಜೂರು, ಬಡಾವಣೆಯ ಹೆಸರು, ಆಯ್ಕೆ ಮಾಡಲು ಅನುಸರಿಸಿದ ನಿಯಮ, ಆ ನಿವೇಶನಗಳನ್ನು ಕೋರಿ ಬೇರೆ ಯಾರಾದರೂ ಅರ್ಜಿ ಸಲ್ಲಿಸಿದ್ದರೇ ಎಂಬಿತ್ಯಾದಿ ಮಾಹಿತಿಯನ್ನು ಇಡಿ ಅಧಿಕಾರಿಗಳು ಕೋರಿದ್ದರು.

ಒಂದೊಂದೇ ವಿಕೆಟ್ ಉರುಳುತ್ತಿದೆ

ನನ್ನದೇ ಆದ ಅಭಿವೃದ್ಧಿ ಪರಿಕಲ್ಪನೆಗಳು ಇವೆ. ಜನರ ಸಮಸ್ಯೆ ಬಗೆಹರಿಸಲು ಕಾರ್ಯಕ್ರಮ ಹಾಕಿಕೊಂಡಿದ್ದೇನೆ ಎಂದು ಅವರು ಹೇಳಿದರು. ನಮ್ಮ ರಾಜ್ಯದಲ್ಲಿ ಹಣದ ಕೊರತೆ ಇಲ್ಲ. ಕರ್ನಾಟಕ ಸಂಪದ್ಭರಿತ ರಾಜ್ಯ. ಆದರೆ ಈ ಸರ್ಕಾರ ಜನರ ಹಣವನ್ನು ಪೋಲು ಮಾಡುತ್ತಿದೆ. ಇದಕ್ಕೆ ಕಡಿವಾಣ ಹಾಕಿ ಜನರ ನೆಮ್ಮದಿ ಬದುಕಿಗಾಗಿ ನನಗೆ ಅವಕಾಶ ನೀಡುತ್ತಾರೆ ಎನ್ನೋದು ತಪ್ಪಾ ನನ್ನ ಮಾತಿನಲ್ಲಿ ಯಾವುದೇ ಬದಲಾವಣೆ ಇಲ್ಲ. ನನ್ನ ತೀರ್ಮಾನದಲ್ಲೂ ಯಾವುದೇ ಬದಲಾವಣೆ ಇಲ್ಲ ಎಂದು ಕುಮಾರಸ್ವಾಮಿ ಸ್ಪಷ್ಟಪಡಿಸಿದರು. ಚನ್ನಪಟ್ಟಣವನ್ನು ಜೆಡಿಎಸ್ ಬಿಟ್ಟಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ನಾವೇನು ಸನ್ಯಾಸ ಸ್ವೀಕಾರ ಮಾಡಿದ್ದೇವೆಯೇ ನಾವು ಹೋರಾಟ ಮಾಡುತ್ತೇವೆ. ಅವರ ಹೇಳಿಕೆ ಇರಲಿ, ಅವರು ಹೇಳಿದಂತೆ ಆಗುತ್ತದೆಯೇ. ನಾವು ಚುನಾವಣೆ ಗೆಲ್ಲಲು ಏನು ನಿರ್ಧಾರ ಮಾಡಬೇಕು ಅದನ್ನು ಮಾಡುತ್ತೇವೆ ಎಂದು ಹೇಳಿದರು.

ಶೋಭಾ ಕರಂದ್ಲಾಜೆ ಪಾತ್ರದ ಬಗ್ಗೆ ಅನುಮಾನ

ಹೇಳಿದ್ದ ಮಾತಿಗೆ ವೈಯಕ್ತಿಕವಾಗಿಯೇ ತಿರುಗೇಟು ನೀಡಿದ್ದಾರೆ. ಮೈಸೂರಿನ ಶಾಸಕರೊಬ್ಬರು ಮಾತೆತ್ತಿದರೆ ಸುಳ್ಳು. ಒಳಗಡೆ ಪೂಜೆ ಮಾಡಿಕೊಂಡು ಬಂದು ಹೊರಗಡೆ ಸುಳ್ಳು ಹೇಳಬಾರದು. ಒಳಗಡೆ ಪೂಜೆ ಮಾಡಿ ಹಣೆಗೆ ನಾಮ ಇಟ್ಟುಕೊಂಡ ಮಾತ್ರಕ್ಕೆ ಒಳ್ಳೆಯವರಾಗಲ್ಲ. ಹೊರಗಡೆ ಸುಳ್ಳು ಹೇಳಿದರೆ ದೇವರು ಮೆಚ್ಚಲ್ಲ. ನಾನು ಈಗಲೂ ಸವಾಲು ಹಾಕುತ್ತೇನೆ. ಮುಡಾದಿಂದ ಒಂದೇ ಒಂದು ಫೈಲ್ ಮಿಸ್ ಆಗಿದ್ದರೆ ನಾನು ಚಾಮುಂಡಿ ಬೆಟ್ಟಕ್ಕೆ ಬಂದು ಪ್ರಮಾಣ ಮಾಡುತ್ತೇನೆ. ಅವರೂ ಬೇಕಾದರೆ ಚಾಮುಂಡಿ ಬೆಟ್ಟಕ್ಕೆ ಅಥವಾ ಧರ್ಮಸ್ಥಳ ಮಂಜುನಾಥೇಶ್ವರ ದೇವಸ್ಥಾನಕ್ಕೆ ಬಂದು ಪ್ರಮಾಣ ಮಾಡಲಿ ಎಂದು ಪುನರುಚ್ಚರಿಸಿದರು.

ನಾನು ಸವಾಲು ಹಾಕಿ ಎರಡು ದಿನಗಳಾದರೂ ಶಾಸಕ ಶ್ರೀವತ್ಸ ಆಗಲೀ ಬೇರೆಯವರಾಗಲಿ ಇದಕ್ಕೆ ಉತ್ತರ ಕೊಟ್ಟಿಲ್ಲ. ಪಾಪ ಶೋಭಾ ಕರಂದ್ಲಾಜೆಗೆ ಹೊಟ್ಟೆ ಉರಿ. ಇವರಿಗೆ ನನ್ನ ಕ್ಷೇತ್ರದಲ್ಲಿ ಲೀಡ್ ಬರಲಿಲ್ಲ ಎಂಬ ಹೊಟ್ಟೆ ಉರಿ. ಅದಕ್ಕಾಗಿ ಗಾಳಿಯಲ್ಲಿ ಗುಂಡು ಹೊಡೆಯುವುದನ್ನು ಬಿಡಬೇಕು ಎಂದು ಕಿಡಿಕಾರಿದರು.

ಗಣತಿ ಮಾಡುವ ಅಧಿಕಾರ ಇಲ್ಲ

ಸಮುದಾಯದವರು ವಿರೋಧಿಸಿದ್ದಾರೆ. ಸ್ವತ ಡಿಸಿಎಂ ಡಿ.ಕೆ. ಶಿವಕುಮಾರ್ ಸೇರಿ ಅನೇಕ ಕಾಂಗ್ರೆಸ್ ಮುಖಂಡರು ಇದನ್ನು ವಿರೋಧಿಸಿದ್ದಾರೆ. ಅಖಿಲ ಭಾರತ ವೀರಶೈವ ಮಹಾಸಭೆ ಕೂಡ ವಿರೋಧಿಸಿದೆ ಎಂದು ತಿಳಿಸಿದರು.

ಸಿಎಂ ಸಿದ್ದರಾಮಯ್ಯ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಚರ್ಚಿಸಲಿ. ಎಲ್ಲ ಸಮುದಾಯಗಳ ಅನುಮಾನ ದೂರ ಮಾಡುವ ಕೆಲಸ ಮಾಡಲಿ. ಇಷ್ಟೆಲ್ಲ ವಿರೋಧ ಇದ್ದರೂ ಜಾರಿ ಮಾಡುತ್ತೇವೆ ಅಂತಿದ್ದಾರೆ. ಮೊದಲು ವರದಿ ಬಹಿರಂಗಪಡಿಸಲಿ, ಸಾರ್ವಜನಿಕವಾಗಿ ಚರ್ಚೆ ಆಗಲಿ. ಸಿದ್ದರಾಮಯ್ಯನವರು ವರದಿಯಲ್ಲಿ ಏನಿದೆ ಅಂತ ನೋಡಿಲ್ಲ ಅಂತಿದ್ದಾರೆ, ಆದರೆ ವರದಿ ರೆಡಿ ಮಾಡಿಸಿದವರೇ ಸಿದ್ದರಾಮಯ್ಯ. ದಿವಂಗತ ವಿ.ಪಿ. ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಅಧಿಕಾರ ಹೋಗುವ ಸಂದರ್ಭದಲ್ಲಿ ಮಂಡಲ್ ವರದಿ ಜಾರಿ ಮಾಡಿದ್ದರು. ಅದೇ ರೀತಿ ಇವರು ಈಗ ಜಾತಿ ಗಣತಿ ಜಾರಿ ಮಾಡುವುದಾಗಿ ಹೇಳುತ್ತಿದ್ದಾರೆ ಎಂದು ಹೇಳಿದರು.

ಕ್ಷೇತ್ರದಲ್ಲೂ ಅಭ್ಯರ್ಥಿಗಳ ಗೆಲ್ಲಿಸಲೇಬೇಕು

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪ್ರತಿನಿಧಿಸಿದ್ದ ಚನ್ನಪಟ್ಟಣ ಕ್ಷೇತ್ರ ಪ್ರತಿಷ್ಠೆಯ ಕ್ಷೇತ್ರವಾಗಿದ್ದು, ಇಲ್ಲಿ ಗೆಲ್ಲಲೇಬೇಕಾದ ಅನಿವಾರ್ಯವಿದೆ. ಪಕ್ಷದ ಅಭ್ಯರ್ಥಿಯಾಗಿ ಮಾಜಿ ಸಂಸದ ಡಿ.ಕೆ.ಸುರೇಶ್ ಅವರನ್ನು ಕಣಕ್ಕಿಳಿಸುವ ಬಗ್ಗೆ ಕಾರ್ಯಕರ್ತರಿಂದ ಒತ್ತಡ ಬಂದಿದೆ. ಪಕ್ಷದ ವರಿಷ್ಠರೂ ಕೂಡ ಸುರೇಶ್ ಸ್ಪರ್ಧೆಗೆ ಒಲವು ತೋರಿದ್ದಾರೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಭೆಯಲ್ಲಿ ತಿಳಿಸಿದರು ಎನ್ನಲಾಗಿದ್ದು, ಚನ್ನಪಟ್ಟಣ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಡಲು ಬಿಜೆಪಿ ತೀರ್ಮಾನಿಸಿದ್ದು, ಸಿ.ಪಿ.ಯೋಗೇಶ್ವರ್ ಅವರನ್ನೇ ಜೆಡಿಎಸ್ ಚಿಹ್ನೆಯಲ್ಲಿ ಕಣಕ್ಕಿಳಿಸುವ ಬಗ್ಗೆಯೂ ಚರ್ಚೆಗಳು ನಡೆಯುತ್ತಿದೆ ಎಂಬ ಮಾಹಿತಿ ನನಗಿದೆ. ಅದೇ ವೇಳೆ ಜೆಡಿಎಸ್ ಚಿಹ್ನೆಯಲ್ಲಿ ಸ್ಪರ್ಧಿಸಲು ಯೋಗೇಶ್ವರ್ ಹಿಂದೇಟು ಹಾಕಿದ್ದು, ಅವರು ನಮ್ಮೊಂದಿಗೂ ಸಂಪರ್ಕದಲ್ಲಿದ್ದಾರೆ. ಯೋಗೇಶ್ವರ್ ಕಾಂಗ್ರೆಸ್‌ಗೆ ಬರುವುದಾದರೆ ಅವರಿಗೆ ಟಿಕೆಟ್ ನೀಡುವ ಬಗ್ಗೆಯೂ ಪರಿಗಣಿಸಬಹುದು. ಅಭ್ಯರ್ಥಿ ಸುರೇಶ್ ಆಗಲೀ ಅಥವಾ ಯೋಗೇಶ್ವರ್ ಆದರೂ ಕ್ಷೇತ್ರವನ್ನು ಗೆಲ್ಲಲೇಬೇಕು. ಅದಕ್ಕಾಗಿ ಎಲ್ಲರೂ ಶ್ರಮ ವಹಿಸಬೇಕು ಎಂದು ಡಿ.ಕೆ.ಶಿವಕುಮಾರ್ ಮನವಿ ಮಾಡಿದರು ಎನ್ನಲಾಗಿದೆ.

ಕಾಂಗ್ರೆಸ್ ಸಂಪರ್ಕ, ಡಿಕೆಶಿ ಭೇಟಿ

ಮಾಡಲು ಹೊರಟಿದ್ದಾರೆ. ಅವರ ಪ್ರಯತ್ನ ಫಲ ಕೊಡುವುದಿಲ್ಲ ಎಂದು ಕಿಡಿಕಾರಿದರು. ಹುಳಿ ಹಿಂಡುವವರು ನಮ್ಮ ಪಕ್ಷದಲ್ಲಿ ಇಲ್ಲ. ಆದರೆ ಅಲ್ಲಿನ ಹುಳಿ ಹಿಂಡುವವರು ಕಾಂಗ್ರೆಸ್ ನಾಯಕರ ಜತೆ ಸೇರಿಕೊಂಡಿದ್ದಾರೆ. ಅದು ನನಗೆ ಗೊತ್ತಿದೆ. ಪ್ರಧಾನ ಮಂತ್ರಿ ಅವರನ್ನು ಅಸ್ಥಿರಗೊಳಿಸಲು ಅವರು ಕಾಂಗ್ರೆಸ್ ನಾಯಕರ ಜತೆ ಸೇರಿಕೊಂಡು ಮಸಲತ್ತು ಮಾಡುತ್ತಿರಬಹುದು. ನರೇಂದ್ರ ಮೋದಿ ಅವರ ವರ್ಚಸ್ಸಿಗೆ ಧಕ್ಕೆ ಆಗಬಾರದು. ಇದೆಲ್ಲವನ್ನು ಗಮನಿಸುತ್ತಿದ್ದೇನೆ. ಇದಕ್ಕೆ ನಾನು ಅವಕಾಶ ಕೊಡಬೇಕಾ? ಎಂದು ಅವರು ಪ್ರಶ್ನಿಸಿದರು.

ಇಂತ ಕುತಂತ್ರಕ್ಕೆ ನಾನು ಯಾಕೆ ಬಲಿಯಾಗಬೇಕು ನೋಡೋಣ, ಮುಂದೆ ಅಭ್ಯರ್ಥಿ ತೀರ್ಮಾನ ಮಾಡುತ್ತೇವೆ. ನನಗೆ ಬೇಕಿರುವುದು ಪ್ರಧಾನಮಂತ್ರಿಯವರಿಗೆ ಶಕ್ತಿ ತುಂಬುವುದಷ್ಟೇ. ಆ ನಿಟ್ಟಿನಲ್ಲಿ ನಾನು ತೀರ್ಮಾನ ಮಾಡುತ್ತೇನೆ. ಈಗಾಗಲೇ ಬಿಜೆಪಿ ವರಿಷ್ಠ ನಾಯಕರೇ ನೀವು ಪ್ರತಿನಿಧಿಸುತ್ತಿರುವ ಕ್ಷೇತ್ರದ ಬಗ್ಗೆ ನೀವೇ ಅಂತಿಮ ನಿರ್ಧಾರ ತೆಗೆದುಕೊಳ್ಳಿ ಎಂದಿದ್ದಾರೆ. ಚನ್ನಪಟ್ಟಣ ಜೆಡಿಎಸ್ ಸ್ಪರ್ಧಿಸಿರುವ ಕ್ಷೇತ್ರ ಎನ್ನುವುದು ಅವರಿಗೆ ಗೊತ್ತಿದೆ. ಬಿಜೆಪಿ ಎರಡು ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಘೋಷಣೆ ಮಾಡಿದೆ. ಚನ್ನಪಟ್ಟಣದಲ್ಲಿ ನಾವು ಘೋಷಣೆ ಮಾಡುತ್ತೇವೆ. ಚನ್ನಪಟ್ಟಣ ವಿಚಾರದಲ್ಲಿ ಇನ್ನೂ ನಾವು ಯಾವುದೇ ನಿರ್ಧಾರ ಮಾಡಿಲ್ಲ ಎಂದು ಅವರು ಹೇಳಿದರು.

ಹಳ್ಳ ಹಿಡಿದ ಜಲ್ ಜೀವನ್ ಮಿಷನ್ ಯೋಜನೆ



ಮಣ್ಣು ಮಿಶ್ರಿತ ನೀರನ್ನು ಹಿಡಿಯುತ್ತಿರುವ ಎಲ್ಲಮ್ಮ.

ಹೆಚ್.ಡಿ.ಕೋಟೆ ಬಳಿ ಕಳಪೆ ಕಾಮಗಾರಿಯಿಂದ ಶುದ್ಧ ನೀರು ಸಿಗದೆ ಪರದಾಟ



ಕಳಪೆ ಗುಣಮಟ್ಟದ ಕಾಂಕ್ರೀಟ್ ಹಾಕಿ ಮುಚ್ಚುತ್ತಿರುವುದು.

ಸರ್ಕಾರ ಕುಡಿಯುವ ನೀರು ವ್ಯವಸ್ಥೆ ಮಾಡಿದ್ದು, ಇಲ್ಲಿ ಸರಿಯಾದ ಪೈಪ್‌ಲೈನ್ ಅಳವಡಿಸದ ಕಾರಣ ನಮಗೆ ಪ್ರತಿದಿನ ಶುದ್ಧವಾದ ನೀರು ಬರದೆ ಮಣ್ಣು ಮಿಶ್ರಿತ ನೀರು ಬರುತ್ತಿದೆ. ಇದನ್ನು ಕುಡಿಯಲು ಸಾಧ್ಯವಾಗುತ್ತಿಲ್ಲ. ಇದರಿಂದ ಸಾಂಕ್ರಾಮಿಕ ರೋಗ ಬರುವ ಆತಂಕದಲ್ಲಿದ್ದೇವೆ.

ಹೆಚ್.ಡಿ.ಕೋಟೆ, ಅ.20– ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು ಕೊಡುವ ಸಲುವಾಗಿ ಮಾಡಿದ ಜಲ್‌ಜೀವನ್ ಮಿಷನ್ ಯೋಜನೆಯ ಕಾಮಗಾರಿ ಕಳಪೆಯಿಂದ ಕೂಡಿದ್ದು, ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆ ಹಳ್ಳ ಹಿಡಿದಿದೆ.

ತಾಲೂಕಿನ ಕಸಬಾ ಹೋಬಳಿ, ಪಡುಕೋಟೆ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ಬೋವಿ ಕಾಲೋನಿಯಲ್ಲಿ ಜಲ ಜೀವನ್ ಮಿಷನ್ ಮನೆ ಮನೆಗೆ ಗಂಗೆ ಯೋಜನೆ ಅಡಿಯಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಸುಮಾರು 57ಲಕ್ಷ ವೆಚ್ಚದಲ್ಲಿ, ನೂತನ ಟ್ಯಾಂಕ್ ಹಾಗೂ ಗ್ರಾಮಗಳಿಗೆ ಕುಡಿಯುವ ನೀರು ಯೋಜನೆ, ಕಳಪೆಯಿಂದ ಕೂಡಿದ್ದು, ಗ್ರಾಮಸ್ಥರು ಪರಿತಪಿಸುವಂತಾಗಿದೆ.

ಭೋವಿ ಕಾಲೋನಿಯ ಗ್ರಾಮದ ಮುಖಂಡ ಅಶ್ವಥ್ ಮಾತನಾಡಿ ಮಾಜಿ ಶಾಸಕ ದಿ: ಎಂ.ಪಿ.ವೆಂಕಟೇಶ್ ಅವರು ಶಾಸಕರಾಗಿದ್ದ ಅವಧಿಯಲ್ಲಿ ನಮ್ಮ ಬೋವಿ ಕಾಲೋನಿಗೆ ಉತ್ತಮ ಕಾಂಕ್ರೀಟ್ ರಸ್ತೆ ಮಾಡಿಸಿಕೊಟ್ಟಿದ್ದರು. ಆ ಕಾಂಕ್ರೀಟ್ ರಸ್ತೆಯನ್ನು ಪೈಪ್‌ಲೈನ್ ಅಳವಡಿಸಲು ಅಗೆದು, ಮತ್ತೆ ಗುಣಮಟ್ಟದ ಕಾಂಕ್ರೀಟ್ ಹಾಕಿ ಮುಚ್ಚದೆ, ಕಳಪೆ ಮಟ್ಟದ ಕಾಂಕ್ರೀಟ್ ಹಾಕಿ ಮುಚ್ಚುತ್ತಿದ್ದಾರೆ. ಅದಲ್ಲದೆ ನೂತನವಾಗಿ ನಿರ್ಮಿಸಿರುವ ಟ್ಯಾಂಕ್ ಸಹ ಕಳಪೆಯಿಂದ ಕೂಡಿದ್ದು, ಅದಕ್ಕೆ ಅಳವಡಿಸಿರುವ ಕಬ್ಬಿಣದ ಏಣಿಗಳು ಸುದ್ಧಾ ಕಳಪೆ ಮಟ್ಟದಾಗಿದೆ ಎಂದಿದ್ದಾರೆ.

ಈ ಸಂಬಂಧ ಅಧಿಕಾರಿಗಳಿಗೆ ಸಾಕಷ್ಟು ಬಾರಿ ದೂರವಾಣಿ ಕರೆ ಮಾಡಿ ತಿಳಿಸಿದರು ಕೂಡ ಅಧಿಕಾರಿಗಳು ಗುಣಮಟ್ಟದ ಕಾಮಗಾರಿ ಬಗ್ಗೆ ಕಿವಿಗೊಡದೆ ಬೇಜವಾಬ್ದಾರಿತನ ತೋರುತ್ತಿದ್ದಾರೆ ಎಂದು ಆರೋಪಿಸಿದರು.

ಈ ಗ್ರಾಮದಲ್ಲಿ ಭೋವಿ ಸಮಾಜದವರೇ ಹೆಚ್ಚಾಗಿ ವಾಸ ಮಾಡುತ್ತಿದ್ದು, ಕುಡಿಯುವ ನೀರು ಸಮಸ್ಯೆ ಇದ್ದ ಕಾರಣ, ಜಲಜೀವನ್ ಮಿಷನ್ ಮನೆಮನೆಗೆ ಗಂಗೆ ಯೋಜನೆ ಅಡಿಯಲ್ಲಿ ಸುಮಾರು 57 ಲಕ್ಷ ವೆಚ್ಚದ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿತ್ತು. ಗುಣಮಟ್ಟದ ಟ್ಯಾಂಕ್ ನಿರ್ಮಾಣ ಮಾಡದೆ ಕಳಪೆ ಟ್ಯಾಂಕನ್ನ ನಿರ್ಮಾಣ ಮಾಡಿ ಗ್ರಾಮಕ್ಕೆ ಟ್ಯಾಂಕ್ ಮೂಲಕ ನೀರು ಸರಬರಾಜು ಮಾಡಲು ಕಳಪೆ ಮಟ್ಟದ ಪೈಪ್‌ಗಳನ್ನು ಅಳವಡಿಸಿ ಕಳಪೆ ಕಾಮಗಾರಿ ಮಾಡುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಅಧಿಕಾರಿಗಳು ಈ ಕಳಪೆ ಕಾಮಗಾರಿಯನ್ನು ನಿಲ್ಲಿಸಿ ಖುದ್ದು ನಿಂತು ಉತ್ತಮ ಗುಣಮಟ್ಟದ ಕಾಮಗಾರಿಯನ್ನು ಮಾಡಿಸಬೇಕು ಎಂದು ಮನವಿ ಮಾಡಿದ್ದಾರೆ.

ಭಾರಿ ಮಳೆಯಿಂದ ಹಾಳಾಗುತ್ತಿರುವ ಮೆಕ್ಕೆ ಜೋಳ



ಬೆಟ್ಟದಪುರ, ಅ.20– ಭಾರಿ ಮಳೆ ಸುರಿಯುತ್ತಿರುವುದರಿಂದ ಕಟಾವಿಗೆ ಬಂದಿರುವ ಮೆಕ್ಕೆಜೋಳವನ್ನು ಕಟಾವು ಮಾಡಲಾಗದೆ ರೈತರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಸಕಾಲದಲ್ಲಿ ಕಟಾವು ಮಾಡಲಾಗದ ಕಾರಣ ಜೋಳ ಹಾಳಾಗುವ ಭೀತಿ ಎದುರಾಗಿದೆ. ನವಿಲು ಮತ್ತು ಇತರ ಪಕ್ಷಿಗಳ ಕಾಟವು ಸಹ ರೈತರನ್ನು ಚಿಂತೆಗೀಡು ಮಾಡಿದೆ. ಪಿರಿಯಾಪಟ್ಟಣ ತಾಲೂಕಿನಲ್ಲಿ ಕಳೆದ ಒಂದು ವಾರದಿಂದ ಎಡೆಬಿಡದೆ ಸುರಿಯುತ್ತಿರುವ ಭಾರಿ ಮಳೆಗೆ ಮುಸುಕಿನ ಜೋಳ ಸೇರಿದಂತೆ ವಿವಿಧ ಬೆಳೆಗಳು ಮಳೆಗೆ ಆಹುತಿಯಾಗುತ್ತಿವೆ. ಅದರಲ್ಲೂ ಮುಖ್ಯವಾಗಿ ಕಟಾವಿಗೆ ಬಂದಿರುವ ಮೆಕ್ಕೆ ಜೋಳ ಹೊಲದಲ್ಲೇ ಕೊಳೆಯಲಾರಂಭಿಸಿದೆ. ಮೆಕ್ಕೆಜೋಳಕ್ಕೆ ಬೆಳೆ ವಿಮೆ ಮಾಡಿಸಿರುವ ರೈತರು ಸರ್ಕಾರ ನೆರವಿಗೆ ಬಂದು ಕೂಡಲೇ ಮೆಕ್ಕೆಜೋಳ ರೈತರಿಗೆ ಕೂಡಲೇ ಪರಿಹಾರ ನೀಡಬೇಕೆಂದು ಆಗ್ರಹಿಸಿದ್ದಾರೆ.

ಹೆಡತಲೆಯಲ್ಲಿ ಜೋಡಿ ಎತ್ತಿನಗಾಡಿ ಓಟದ ಸ್ಪರ್ಧೆಗೆ ಚಾಲನೆ

ಗ್ರಾಮೀಣ ಕ್ರೀಡೆಗಳಿಗೆ ಪ್ರೋತ್ಸಾಹ ಅಗತ್ಯ: ಶಾಸಕ ದರ್ಶನ್



ಹೆಡತಲೆಯಲ್ಲಿ ವಾಲ್ಮೀಕಿ ಜಯಂತಿ ಅಂಗವಾಗಿ ಕಿಚ್ಚ ಬಾಯ್ಸ್ ಆಯೋಜಿಸಿದ್ದ ತಾಲೂಕು ಮಟ್ಟದ ಜೋಡಿ ಎತ್ತಿನಗಾಡಿ ಓಟದ ಸ್ಪರ್ಧೆಗೆ ಶಾಸಕ ದರ್ಶನ್ ಚಾಲನೆ ನೀಡಿದರು.

ನಂಜನಗೂಡು, ಅ.20– ಗ್ರಾಮೀಣ ಭಾಗದ ಜನಪದ ಕಲೆ ಕ್ರೀಡೆಗಳಲ್ಲಿ ಇಂದಿನ ತಲೆಮಾರಿನ ಯುವಕರು ಪಾಲ್ಗೊಳ್ಳುವ ಮೂಲಕ ನಮ್ಮ ಸಂಸ್ಕೃತಿ, ಆಚರಣೆಗಳಿಗೆ ಪ್ರೋತ್ಸಾಹ ನೀಡಬೇಕು ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು.


ತಾಲೂಕಿನ ಹೆಡತಲೆ ಗ್ರಾಮದಲ್ಲಿ ವಾಲ್ಮೀಕಿ ಜಯಂತಿ ಅಂಗವಾಗಿ ಭಾನುವಾರ ಕಿಚ್ಚ ಬಾಯ್ಸ್ ಆಯೋಜಿಸಿದ್ದ ತಾಲೂಕು ಮಟ್ಟದ ಜೋಡಿ ಎತ್ತಿನ ಗಾಡಿ ಓಟದ ಸ್ಪರ್ಧೆಗೆ ಚಾಲನೆ ನೀಡಿ, ಮಾತನಾಡಿದರು.

ಗ್ರಾಮೀಣ ಸಂಸ್ಕೃತಿ ನಮ್ಮ ಜನಪದ,ಹಳ್ಳಿಗಾಡಿನ ಕ್ರೀಡೆಗಳನ್ನು ಇಂದಿನ ಯುವಕರಿಗೆ ಪರಿಚಯ ಮಾಡುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳ ಆಯೋಜನೆ ಸಹಕಾರಿಯಾಗಿದೆ. ನಮ್ಮ ಕುಸ್ತಿ, ಕಂಬಳ, ಮಲ್ಲಕಂಬ ಮುಂತಾದ ಕಲೆಗಳಿಗೆ ಪ್ರೋತ್ಸಾಹ ನೀಡಿ, ನಮ್ಮ ಕಲೆ, ಸಂಸ್ಕೃತಿ, ಆಚರಣೆಗಳನ್ನು ಉಳಿಸಿ, ಬೆಳೆಸಬೇಕಾದ ಜವಾಬ್ದಾರಿ ನಮ್ಮದಿದೆ, ಯುವಕರು ಚಟಗಳಿಗೆ ಬಲಿಯಾಗದೆ ಸದೃಢ ದೇಹ, ಆರೋಗ್ಯ ಕಾಪಾಡಿಕೊಳ್ಳಲು ಗ್ರಾಮೀಣ ಕ್ರೀಡೆಗಳಲ್ಲಿ ತೊಡಗಬೇಕು. ಗ್ರಾಮೀಣ ಕ್ರೀಡೆಗಳನ್ನು ಉಳಿಸುವ ಪ್ರಯತ್ನವನ್ನು ಯುವಕರು ಮಾಡುತ್ತಿರುವುದು ಶ್ಲಾಘನೀಯ ವಿಷಯ, ಇಂತಹ ಮತ್ತಷ್ಟು ಕಾರ್ಯಕ್ರಮಗಳು ನಮ್ಮ ಕ್ಷೇತ್ರದಲ್ಲಿ ನಡೆಯಬೇಕು ಎಂದು ಹೇಳಿದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿ, ಎತ್ತಿನ ಗಾಡಿ ಓಟದ ಸ್ಪರ್ಧೆಗಳು ಈ ಹಿಂದೆ ಸಂಕ್ರಾಂತಿ ಹಬ್ಬದ ಸಂದರ್ಭಗಳಲ್ಲಿ ಹೆಚ್ಚು ಹೆಚ್ಚು ನಡೆಯುತ್ತಿದ್ದವು. ಆ ನಂತರದಲ್ಲಿ ಟೈರ್ ಗಾಡಿಗಳು ಹೆಚ್ಚು ಮುಂಚೂಣಿಗೆ ಬಂದವು. ಮಂಡ್ಯ ಜಿಲ್ಲೆಯಲ್ಲಿ ಟೈಯರ್ ಗಾಡಿಗಳ ಓಟದ ಸ್ಪರ್ಧೆ ಚಾಲ್ತಿಯಲ್ಲಿದೆ. ದಕ್ಷಿಣ ಕನ್ನಡದಲ್ಲಿ ಕೋಣಗಳ ಓಟದ ಸ್ಪರ್ಧೆ ಪ್ರಚಲಿತವಾಗಿದೆ. ನಮ್ಮ ತಾಲೂಕಿನಲ್ಲಿಯೂ ಕೂಡ ಹಲವಾರು ಗ್ರಾಮಗಳಲ್ಲಿ ಗ್ರಾಮೀಣ ಕ್ರೀಡೆಗಳು ನಡೆಯುತ್ತಿರುವುದು ಉತ್ತಮ ಬೆಳವಣಿಗೆ ಎಂದು ಹೇಳಿದರು.

ಕ್ರೀಡೆ ಆಯೋಜಕರಾದ ಆನಂದ್ ಮಾತನಾಡಿ ಎತ್ತಿನ ಗಾಡಿ ಓಟದ ಸ್ಪರ್ಧೆಯಲ್ಲಿ 35 ಜೊತೆ ಎತ್ತುಗಳು ಸ್ಪರ್ಧೆಯಲ್ಲಿದ್ದು, ಪ್ರಥಮ ಬಹುಮಾನ 15 ಸಾವಿರ, ದ್ವಿತೀಯ ಬಹುಮಾನ 10 ಸಾವಿರ, ತೃತೀಯ ಬಹುಮಾನ 7 ಸಾವಿರ ನಿಗದಿಪಡಿಸಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ದೊರೆಸ್ವಾಮಿ ನಾಯಕ, ಮಾದನಾಯ್ಕ, ಮಹದೇವ ನಾಯಕ, ಪುಟ್ಟರಾಜು, ಶಿವಕುಮಾರ್, ರಾಜು, ಅನಿಲ್ ಉಪಸ್ಥಿತರಿದ್ದರು.

ಬಿಜೆಪಿ ಸದಸ್ಯತ್ವ ಅಭಿಯಾನ



ಬನ್ನೂರಿನಲ್ಲಿ ಭಾರತೀಯ ಜನತಾ ಪಕ್ಷದ ಮಹಾಶಕ್ತಿ ಕೇಂದ್ರದ ವ್ಯಾಪ್ತಿಯ 10 ಮತ್ತು 11ನೇ ವಾರ್ಡಿನಲ್ಲಿ ಭಾನುವಾರ ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಎನ್.ಎಂ. ರಾಮಚಂದ್ರ ನೇತೃತ್ವದಲ್ಲಿ ಸದಸ್ಯತ್ವ ಅಭಿಯಾನ ನಡೆಸಲಾಯಿತು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಿರಣ್, ಜಯರಾಮೇಗೌಡ, ಜಿಲ್ಲಾ ಕಾರ್ಯದರ್ಶಿ ಹಿನಕಲ್ ಪಾಪಣ್ಣ, ಕಾಳೇಗೌಡ, ಮಾಹಿಗೌಡ ಸೇರಿದಂತೆ ಹಲವು ಉಪಸ್ಥಿತರಿದ್ದರು.

ನಾಳೆ ನೂತನ ಪುರಸಭಾ ಕಚೇರಿ ಉದ್ಘಾಟನೆ

ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಿಎಂ ಸಿದ್ದರಾಮಯ್ಯ ಚಾಲನೆ





ವಸಂತ ಶ್ರೀಕಂಠ

ತಿ.ನರಸೀಪುರ, ಅ.20– 2014-15ನೇ ಸಾಲಿನ ಎಸ್‌ಎಫ್‌ಸಿ ಮುಕ್ತನಿಧಿ ವಿಶೇಷ ಅನುದಾನದಡಿ ಅಂದಾಜು 7 ಕೋಟಿ ರೂ. ವೆಚ್ಚದಲ್ಲಿ ಪಟ್ಟಣದ ಲಿಂಕ್ ರಸ್ತೆಯ ಬಳಿ ನಿರ್ಮಾಣವಾಗಿರುವ ನೂತನ ಪುರಸಭಾ ಕಚೇರಿಯನ್ನು ಅ.22 ರಂದು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದು ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ ತಿಳಿಸಿದ್ದಾರೆ.

ಬೆಳಗ್ಗೆ 11 ಗಂಟೆಗೆ ತಿ.ನರಸೀಪುರ-ನಂಜನಗೂಡು ರಸ್ತೆಯ ತಾಯೂರು ಗೇಟ್ ಬಳಿ ನಡೆಯುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು 2024-25ನೇ ಸಾಲಿನ 15ನೇ ಹಣಕಾಸು ಯೋಜನೆಯಡಿ 60 ಲಕ್ಷ ರೂ. ವೆಚ್ಚದ ರಸ್ತೆ ಡಾಂಬರೀಕರಣ, ಸಿಸಿ ಚರಂಡಿ, ಸಿಸಿ ರಸ್ತೆ, ಡೆಕ್‌ಗಳ ನಿರ್ಮಾಣ ಕಾಮಗಾರಿಗಳು ಸೇರಿದಂತೆ ವರುಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 376.64 ಕೋಟಿ ರೂ. ವೆಚ್ಚದ ವಿವಿಧ ಇಲಾಖೆಗಳ 163 ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದ್ದಾರೆ.

2013ರಲ್ಲಿ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯನವರು ಪಟ್ಟಣದ ಪುರಸಭಾ ಕಚೇರಿ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಿ ಕಾಮಗಾರಿಗೆ ಚಾಲನೆ ನೀಡಿದ್ದರು. ಈ ನಡುವೆ ಅಧಿಕಾರಕ್ಕೆ ಬಂದ ಸರ್ಕಾರಗಳು ನೂತನ ಪುರಸಭಾ ಕಚೇರಿಯನ್ನು ಲೋಕಾರ್ಪಣೆಗೊಳಿಸಿರಲಿಲ್ಲ. ಆದರೆ ನಿರ್ಮಾಣವಾಗಿ ಉಪಯೋಗಕ್ಕೆ ಬಾರದೆ ನನೆಗುದಿಗೆ ಬಿದ್ದಿದ್ದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗಿತ್ತು ಇದೀಗ ಮುಖ್ಯಮಂತ್ರಿಯವರು ತಾವೇ ನಿರ್ಮಾಣಕ್ಕೆ ಚಾಲನೆ ನೀಡಿದ್ದ ಪುರಸಭಾ ಕಚೇರಿಯನ್ನು ಉದ್ಘಾಟಿಸುತ್ತಿದ್ದಾರೆ. ಹೀಗಾಗಿ ಅಂದಿನ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಹಾಗೂ ಸಿದ್ದರಾಮಯ್ಯನವರ ಅಭಿಮಾನಿಗಳು ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್, ಉಸ್ತುವಾರಿ ಸಚಿವ ಹೆಚ್.ಸಿ. ಮಹದೇವಪ್ಪ, ಕೆ.ಜೆ.ಜಾರ್ಜ್, ಸತೀಶ್ ಜಾರಕಿಹೊಳಿ, ಜಮೀರ್ ಅಹಮ್ಮದ್ ಖಾನ್, ರಹೀಂಖಾನ್, ಲಕ್ಷ್ಮಿ ಆರ್. ಹೆಬ್ಬಾಳ್ಕರ್, ಬೋಸರಾಜು, ಮಧು ಬಂಗಾರಪ್ಪ, ಎನ್.ಚಲುವರಾಯಸ್ವಾಮಿ, ದಿನೇಶ್ ಗುಂಡೂರಾವ್, ಪ್ರಿಯಾಂಕ್ ಖರ್ಗೆ, ಕೆ.ವೆಂಕಟೇಶ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಸಂಸದರಾದ ಯದುವೀರ್, ಸುನೀಲ್ ಬೋಸ್, ಶಾಸಕರಾದ ಜಿ.ಟಿ.ದೇವೇಗೌಡ, ಅನಿಲ್, ರಮೇಶ್‌ಬಾಬು ಬಂಡಿಸಿದ್ದೇಗೌಡ, ಜಿ.ಡಿ.ಹರೀಶ್‌ಗೌಡ, ದರ್ಶನ್, ತನ್ವೀರ್ ಸೇಠ್, ಡಿ.ರವಿಶಂಕರ್, ಶ್ರೀವತ್ಸ, ಕೆ.ಹರೀಶ್‌ಗೌಡ, ಎಂಎಲ್‌ಸಿಗಳಾದ ಹೆಚ್.ವಿಶ್ವನಾಥ್, ಡಿ.ತಿಮ್ಮಯ್ಯ, ಡಾ. ಯತೀಂದ್ರ, ಕೆ.ವಿವೇಕಾನಂದ, ಮಂಜೇಗೌಡ, ಮಧು ಜಿ.ಮಾದೇಗೌಡ ಸೇರಿದಂತೆ ಅಧಿಕಾರಿಗಳು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಜನವರಿಯಲ್ಲಿ ಸರಗೂರು ತಾಲೂಕು ಸಾಹಿತ್ಯ ಸಮ್ಮೇಳನ



ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರ ಸಭೆಯಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿದರು.

ಸರಗೂರು, ಅ.20– ತಾಲೂಕು ಕೇಂದ್ರವಾದ ನಂತರ ಪ್ರಥಮ ಬಾರಿಗೆ ಸರಗೂರು ತಾಲೂಕು ಸಾಹಿತ್ಯ ಸಮ್ಮೇಳನವನ್ನು ಜನವರಿ ತಿಂಗಳಲ್ಲಿ ಶಾಸಕರ ಸಹಕಾರದಿಂದ ನಡೆಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ ಸದಸ್ಯರ ಸಭೆಯಲ್ಲಿ ಮಾತನಾಡಿದ ಅವರು, ಡಿಸೆಂಬರ್‌ನಲ್ಲಿ ಅಖಿಲ ಭಾರತ ಸಾಹಿತ್ಯ ಸಮ್ಮೇಳನವನ್ನು ಮಂಡ್ಯದಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಕನ್ನಡ ನಾಡಿನ ಲಕ್ಷಾಂತರ ಜನರು ಸೇರಲಿದ್ದು, ಪರಿಷತ್ತಿನ ಸದಸ್ಯರು ಸಕ್ರಿಯವಾಗಿ ಭಾಗವಹಿಸಲಿದ್ದಾರೆ ಎಂದರು. ಆ ಕಾರಣದಿಂದ ಸರಗೂರು ತಾಲೂಕು ಸಮ್ಮೇಳನವನ್ನು ಜನವರಿಯಲ್ಲಿ ನಡೆಸುವುದು ಯೋಗ್ಯ ನಿರ್ಧಾರವಾಗಿದೆ. ತಾಲೂಕಿನ ಸದಸ್ಯರು, ಸಾಹಿತಿಗಳು, ಕಲಾವಿದರು, ಜನಪದ ಗಾಯಕರು, ಸಂಘ-ಸಂಸ್ಥೆಗಳ ಪ್ರಮುಖರು, ಪಟ್ಟಣ ಪಂಚಾಯಿತಿಯ ಸದಸ್ಯರು, ಅಧಿಕಾರಿ ವರ್ಗ ಎಲ್ಲರ ಸಹಕಾರ ಅಗತ್ಯ. ಈ ನಿಟ್ಟಿನಲ್ಲಿ ತಾಲೂಕು ಅಧ್ಯಕ್ಷರು ಎಲ್ಲರ ಸಹಕಾರದಲ್ಲಿ ಸಮಿತಿಗಳನ್ನು ರಚಿಸಿ ಕಾರ್ಯೋನ್ಮುಖರಾಗಬೇಕೆಂದು ಅವರು ತಿಳಿಸಿದರು. ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಮಾತನಾಡಿ, ನೂತನ ತಾಲೂಕು ರಚನೆಯ ನಂತರ ನಡೆಯುತ್ತಿರುವ ಪ್ರಥಮ ಸಾಹಿತ್ಯ ಸಮ್ಮೇಳನ ಇದಾಗಿದೆ.

ಹೆಸರಾಂತ ಕಲಾವಿದರಿಂದ ಮನರಂಜನೆಯ ಕಾರ್ಯಕ್ರಮಗಳು. ಸ್ಥಳೀಯ ಶಾಲಾ ವಿದ್ಯಾರ್ಥಿಗಳು, ಹೀಗೆ ಪ್ರತಿಭಾ ಪುರಸ್ಕಾರ ಹಾಗೂ ಶಾಸಕರ ನೇತೃತ್ವದಲ್ಲಿ ಸಲಹೆ ಸಹಕಾರ ಪಡೆದು ಸಮ್ಮೇಳನ ಯಶಸ್ವಿಗೊಳಿಸಬೇಕೆಂದು ಅಭಿಪ್ರಾಯಪಟ್ಟರು.

ಸರಗೂರು ತಾಲೂಕು ಕಸಾಪ ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ, ಕೋಟೆ ತಾಲೂಕು ಕಸಾಪ ಅಧ್ಯಕ್ಷ ಕನ್ನಡ ಪ್ರಮೋದ್ ಸಭೆಯಲ್ಲಿ ಮಾತನಾಡಿದರು. ಕಸಾಪ ಪ್ರಧಾನ ಕಾರ್ಯದರ್ಶಿ ನಿಂಗರಾಜು, ಉಪಾಧ್ಯಕ್ಷ ಗದ್ದೆಹುಂಡಿ ಗುಣಪಾಲ್, ಖಜಾಂಚಿ ಬೀರ್ವಾಳ್ ಚಿಕ್ಕಣ್ಣ, ಪದಾಧಿಕಾರಿಗಳಾದ ಎಸ್.ಪಿ.ಪ್ರಸಾದ್, ಮಲ್ಲೇಶ್, ಶಿವಲಿಂಗಶೆಟ್ಟಿ, ಬಂಗಾರಯ್ಯ, ಗ್ರಾಮೀಣ ಮಹೇಶ್, ಶಿವು, ರವಿ, ಲಿಂಗಾಚಾರ್, ಪಟ್ಟಣ ಪಂಚಾಯಿತಿ ಸದಸ್ಯರಾದ ಶ್ರೀನಿವಾಸ್, ಚಲುವಕೃಷ್ಣ, ಮಾಜಿ ಸದಸ್ಯ ಎಸ್.ಎನ್.ನಾಗರಾಜು, ವರ್ತಕರ ಸಂಘದ ಅಧ್ಯಕ್ಷ ಶ್ರೀನಿವಾಸ್, ಕಾರ್ಯದರ್ಶಿ ವೆಂಕಟೇಶ್, ಗೋಪಾಲ್‌ಕೃಷ್ಣ, ಮುರುಳಿ, ಆಟೋ ಚಿಕ್ಕಸ್ವಾಮಿ, ವೆಂಕಟ ಸೇರಿದಂತೆ ಇನ್ನಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಕಾನೂನು ಸುವ್ಯವಸ್ಥೆ ಕಾಪಾಡಲು ಸಹಕರಿಸಿ

ಸಾರ್ವಜನಿಕರು, ಮಾಧ್ಯಮದವರಿಗೆ ಇನ್ಸ್‌ಪೆಕ್ಟರ್ ಎಸ್.ಶಿವಪ್ರಕಾಶ್ ಮನವಿ



ಕೆ.ಆರ್.ನಗರ, ಅ.20– ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರು ಮತ್ತು ಮಾಧ್ಯಮದವರು ಸಹಕರಿಸಬೇಕು ಎಂದು ಪಟ್ಟಣ ಠಾಣೆ ಇನ್ಸ್‌ಪೆಕ್ಟರ್ ಎಸ್.ಶಿವಪ್ರಕಾಶ್ ಮನವಿ ಮಾಡಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ನಡೆದ ಮಾಧ್ಯಮ ಸ್ನೇಹಿತರ ಪರಿಚಯ ಸಭೆಯಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ವಾಹನ ಸವಾರರು ಕಡ್ಡಾಯವಾಗಿ ಅಗತ್ಯ ದಾಖಲೆ ಹೊಂದುವ ಜೊತೆಗೆ ತಮಗೆ ಮತ್ತು ವಾಹನಗಳಿಗೆ ವಿಮೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ತಾಲೂಕಿನಾದ್ಯಂತ ಯಾವುದೇ ಸ್ಥಳದಲ್ಲಿ ಅಕ್ರಮ ಚಟುವಟಿಕೆಗಳು ಮತ್ತು ಕಾನೂನುಬಾಹಿರ ಕೆಲಸಗಳು ನಡೆದಾಗ ನಮಗೆ ನಾಗರಿಕರು ಮಾಹಿತಿ ನೀಡಿದರೆ ಅಂತಹವರ ಹೆಸರನ್ನು ಗೌಪ್ಯವಾಗಿಟ್ಟು ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ ಅವರು, ಈ ವಿಚಾರದಲ್ಲಿ ಯಾವುದೇ ಅಂಜಿಕೆ ಮತ್ತು ಭಯ ಬೇಡ ಎಂದರು.

ಸಾರಿಗೆ ನಿಯಮಗಳನ್ನು ಪಾಲಿಸಿ ಅಪರಾಧ ಮತ್ತು ಅಪಘಾತಮುಕ್ತ ಸಮಾಜ ನಿರ್ಮಾಣ ಮಾಡಲು ನಮ್ಮೊಂದಿಗೆ ಸಹಕಾರ ನೀಡಬೇಕೆಂದು ಕೋರಿದ ಅವರು, ಹಂತ ಹಂತವಾಗಿ ಪಟ್ಟಣದಲ್ಲಿ ಸಂಚಾರ ನಿಯಮ ಪಾಲನೆ ವಿಚಾರದಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ನುಡಿದರು.

ಈಗಾಗಲೇ ಇಲಾಖೆ ವತಿಯಿಂದ ಹಗಲು ಸೇರಿದಂತೆ ಪಟ್ಟಣದಾದ್ಯಂತ ರಾತ್ರಿ ಗಸ್ತನ್ನು ಬಿಗಿ ಮಾಡಿದ್ದು ಕಳ್ಳತನ ಸೇರಿದಂತೆ ಇತರ ನಿಯಮಬಾಹಿರ ಚಟುವಟಿಕೆಗಳ ಮೇಲೆ ಹದ್ದಿನಕಣ್ಣಿಟ್ಟಿದ್ದು ನಾಗರಿಕರ ಸುರಕ್ಷತೆಗೆ ಕ್ರಮ ಕೈಗೊಳ್ಳುತ್ತೇವೆ. ಪಟ್ಟಣದ ನಾಗರಿಕರು ಹೊರ ಊರುಗಳಿಗೆ ಹೋಗುವ ಸಮಯ ಎದುರಾದಾಗ ಠಾಣೆಗೆ ಕಡ್ಡಾಯವಾಗಿ ಮಾಹಿತಿ ನೀಡಬೇಕು ಎಂದರು.

ಕೃಷ್ಣರಾಜೇಂದ್ರ ಕ್ರೀಡಾಂಗಣ, ಪುರಸಭೆ ಬಯಲು ರಂಗಮಂದಿರ, ಮಹಾತ್ಮಗಾಂಧಿ ಉದ್ಯಾನವನ ಸೇರಿದಂತೆ ಇತರೆಡೆ ಹಗಲು ಹೊತ್ತಿನಲ್ಲಿ ಮದ್ಯಪಾನ ಮಾಡಿ ಪುಂಡರು ನಾಗರಿಕರಿಗೆ ತೊಂದರೆ ನೀಡುತ್ತಿರುವ ಬಗ್ಗೆ ವ್ಯಾಪಕ ದೂರುಗಳು ಕೇಳಿ ಬಂದಿದ್ದು ಇದನ್ನು ಹತ್ತಿಕ್ಕಲು ವಿಶೇಷ ಪೊಲೀಸ್ ತಂಡ ರಚನೆ ಮಾಡಿ ದಿಢೀರ್ ದಾಳಿ ನಡೆಸುವುದಾಗಿ ಮಾಹಿತಿ ನೀಡಿದರು. ಈ ವೇಳೆ ಮಾಧ್ಯಮದವರು ಪೊಲೀಸ್ ನಿರೀಕ್ಷಕರಿಗೆ ಹಲವು ಸಲಹೆ, ಸೂಚನೆ ಮತ್ತು ಮಾಹಿತಿಗಳನ್ನು ನೀಡಿ ಇಲಾಖೆ ವತಿಯಿಂದ ಕಾನೂನು ಪಾಲನೆ ವಿಚಾರದಲ್ಲಿ ಕಠಿಣ ಕ್ರಮ ಕೈಗೊಂಡು ನಾಗರಿಕರು ನೆಮ್ಮದಿಯಿಂದ ಜೀವಿಸುವ ವಾತಾವರಣ ಕಲ್ಪಿಸುವಂತೆ ಮಾಡಬೇಕೆಂದು ತಿಳಿಸಿದಾಗ ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಅವರು, ನಿಮ್ಮೆಲ್ಲರ ಆಶ ಯದಂತೆ ಇಲಾಖೆ ನಡೆದುಕೊಳ್ಳಲಿದ್ದು ನಮ್ಮೊಂದಿಗೆ ನೀವು ಸಹಕರಿಸಬೇಕು ಎಂದರು.

ಪಟ್ಟಣದ ಕೆಲವು ಮದ್ಯದಂಗಡಿ ಮುಂದೆ ಮುಂಜಾನೆ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿ ಬಂದಿದ್ದು ನಾಳೆಯಿಂದಲೇ ದಿಢೀರ್ ದಾಳಿ ನಡೆಸಿ ಅದಕ್ಕೆ ಕಡಿವಾಣ ಹಾಕುವುದಾಗಿ ತಿಳಿಸಿದ ಅವರು, ಯಾವುದೇ ಸಮಸ್ಯೆಗಳಿದ್ದರೂ ನಾಗರಿಕರು ನೇರವಾಗಿ ನನ್ನನ್ನು ಭೇಟಿ ಮಾಡಬೇಕೆಂದು ಕೋರಿದರು.

ಉಪ ನಿರೀಕ್ಷಕ ಸ್ವಾಮಿಗೌಡ, ಎಎಸ್‌ಐಗಳಾದ ಸುಬ್ರಹ್ಮಣ್ಯ, ದೇವರಾಜು, ಶ್ರೀನಿವಾಸ್, ಮುಖ್ಯ ಪೇದೆಗಳಾದ ಪರಶುರಾಂ, ನಂಜುಂಡಸ್ವಾಮಿ, ಅನಿಲ್, ಸಂಜಯ್, ಹರೀಶ್ ಮತ್ತು ಸಿಬ್ಬಂದಿ ಹಾಜರಿದ್ದರು.

— ರಾಜ್ಯ ಮಟ್ಟದ ಕೆಎಸ್‌ಐಸಿ ಕ್ರಿಕೆಟ್ ಟೂರ್ನಮೆಂಟ್ ಕಪ್ ಪಂದ್ಯಾವಳಿ —

ರೇಷ್ಮೆ ಉದ್ಯಮಗಳ ಬೆಳವಣಿಗೆಗೆ ಸಿಎಂ ಸಿದ್ದರಾಮಯ್ಯ ಕಾರಣ

ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಭಿಮತ



ಮೈಸೂರು, ಅ.20– ವಿಶ್ವವಿಖ್ಯಾತಿ ಪಡೆದಿರುವ ಕರ್ನಾಟಕ ರಾಜ್ಯ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ (ಮೈಸೂರು ಸಿಲ್ಕ್)ದ ನೌಕರರ ರಾಜ್ಯ ಮಟ್ಟದ ಕೆಎಸ್‌ಐಸಿ ಕ್ರಿಕೆಟ್ ಟೂರ್ನಮೆಂಟ್ ಕಪ್ ಪಂದ್ಯಾವಳಿ ಮೈಸೂರಿನ ಎನ್‌ಐಇ ಕಾಲೇಜಿನ ಪಕ್ಕದ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಡಾಂಗಣದಲ್ಲಿ ಜರುಗಿತು. ಮಾಜಿ ಶಾಸಕ ಹಾಗೂ ಕೆಎಸ್‌ಐಸಿ ಮಾಜಿ ಅಧ್ಯಕ್ಷರೂ ಆದ ಎಂ.ಕೆ.ಸೋಮಶೇಖರ್, ಬ್ಯಾಟ್ ಬೀಸುವ ಮೂಲಕ ಚಾಲನೆ ನೀಡಿದರು.

ಸಂಜೆ ಟೂರ್ನಮೆಂಟ್‌ನಲ್ಲಿ ಗೆದ್ದಂತಹ ಮೈಸೂರಿನ ಕೇಂದ್ರ ಕಾರ್ಖಾನೆ ಪ್ರತಿನಿಧಿಸುವ ರಾಯಲ್ ಫೈಟರ್ಸ್ ತಂಡಕ್ಕೆ ಪ್ರಥಮ ಬಹುಮಾನ 10 ಸಾವಿರ ರೂ. ನಗದು ಹಾಗೂ ಆಕರ್ಷಕ ಟ್ರೋಫಿ ಮತ್ತು ದ್ವಿತೀಯ ಬಹುಮಾನ ಪಡೆದ ಮೈಸೂರಿನ ಜೇಮ್ಸ್ ತಂಡಕ್ಕೆ 6 ಸಾವಿರ ನಗದು ಮತ್ತು ಪ್ರಶಸ್ತಿ ಫಲಕವನ್ನು ವಿತರಿಸಿದರು. ಟೂರ್ನಮೆಂಟ್‌ನಲ್ಲಿ ರಾಜ್ಯದೆಲ್ಲೆಡೆಯಿಂದ ಒಟ್ಟು 8 ತಂಡಗಳು ಆಗಮಿಸಿದ್ದವು. ಚನ್ನಪಟ್ಟಣ, ರಾಮನಗರ, ಬೆಂಗಳೂರು, ಟಿ.ನರಸೀಪುರ, ಮೈಸೂರು ಕೇಂದ್ರ ಘಟಕದ 5 ತಂಡಗಳು ಪಾಲ್ಗೊಂಡಿದ್ದವು.

ಬಹುಮಾನ ವಿತರಿಸಿ ಮಾತನಾಡಿದ ಎಂ.ಕೆ.ಸೋಮಶೇಖರ್, ನಾನು ಸಂಸ್ಥೆಯ ಅಧ್ಯಕ್ಷನಾಗಿ ಅಧಿಕಾರ ಸ್ವೀಕರಿಸಿದ ದಿನದಿಂದಲೇ ಕಾರ್ಯೋನ್ಮುಖನಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಹಕಾರದೊಂದಿಗೆ ಹಲವಾರು ವರ್ಷಗಳಿಂದ ಮುಚ್ಚಿದ್ದ ಚನ್ನಪಟ್ಟಣ ರೇಷ್ಮೆ ಉದ್ಯಮದ ಕೇಂದ್ರವನ್ನು ದುರಸ್ತಿ ಮಾಡಿ ಮೂಲ ಸೌಕರ್ಯಗಳನ್ನು ಒದಗಿಸಿ ಮತ್ತೆ ಕಾರ್ಖಾನೆ ಪುನರ್ ಪ್ರಾರಂಭಿಸಲಾಯಿತು. ಮೈಸೂರಿನಲ್ಲಿ ಪಾರಂಪರಿಕ ಕಟ್ಟಡ ಮಾದರಿಯಲ್ಲಿ ಕೋಟ್ಯಾಂತರ ರೂಪಾಯಿ ಹಣ ಖರ್ಚು ಮಾಡಿ ನೂತನ ಘಟಕ ಸ್ಥಾಪನೆ ಮಾಡಲಾಯಿತು. ಸಾವಿರಾರು ಸಂಖ್ಯೆಯ ಯುವಕ ಯುವತಿಯರಿಗೆ ಉದ್ಯೋಗ ನೀಡಲಾಯಿತು. ಸಂಸ್ಥೆಯನ್ನು ಸಹ ಲಾಭದಾಯಕ ಸ್ಥಿತಿಗೆ ಕೊಂಡೊಯ್ಯಲಾಯಿತು. ಹಿಂದೊಮ್ಮೆ ಆರ್ಥಿಕ ನಷ್ಟ ಉಂಟಾಗಿ ಸಿಲ್ಕ್ ಫ್ಯಾಕ್ಟರಿ ಮುಚ್ಚುವ ಹಂತಕ್ಕೆ ತಲುಪಿದ್ದಂತಹ ಸಂದರ್ಭದಲ್ಲಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿಗಳಾಗಿದ್ದ ವೇಳೆ ಅವರ ಗಮನಕ್ಕೆ ತಂದು ಸರ್ಕಾರದಿಂದ ನಿಗಮಕ್ಕೆ ಹಣ ತಂದು ಸಂಸ್ಥೆಯನ್ನು ಉಳಿಸಲಾಯಿತು. ಆದ್ದರಿಂದ ಕರ್ನಾಟಕದ ರಾಜ್ಯ ರೇಷ್ಮೆ ಉದ್ಯಮಗಳ ನಿಗಮ ಹೆಚ್ಚು ಲಾಭದಾಯಕ ಸ್ಥಿತಿಗೆ ಬರಲು, ಸಾವಿರಾರು ಜನರಿಗೆ ಉದ್ಯೋಗ ದೊರಕಲು ಸಿದ್ದರಾಮಯ್ಯನವರೇ ಕಾರಣ ಎಂದರು. ಈ ವೇಳೆ ಸೋಮು, ಕಿಶೋರ್, ಪ್ರಮೋದ್, ಶೈಲೇಶ್, ಕಿರಣ್, ಹರೀಶ್, ಸಚಿನ್, ರಾಘು, ವಿನೋದ್ ಮತ್ತಿತರರು ಉಪಸ್ಥಿತರಿದ್ದರು.

> ನಮ್ಮ ತಂಡ ಫೈನಲ್ ತಲುಪಿ ಜಯಭೇರಿ ಬಾರಿಸಿದ್ದು ಖುಷಿ ತಂದಿದೆ. ಪದವಿ ಮುಗಿಸಿ ಉದ್ಯೋಗಕ್ಕಾಗಿ ಹುಡುಕಾಟದಲ್ಲಿದ್ದಾಗ ಎಂ.ಕೆ.ಸೋಮಶೇಖರ್, ನನಗೆ ಕೆಎಸ್‌ಐಸಿ ಯಲ್ಲಿ ಉದ್ಯೋಗ ಕೊಡಿಸಿದರು. ಜೀವನದಲ್ಲಿ ನೊಂದಿದ್ದ ನನಗೆ ನೌಕರಿ ದೊರೆತಿದ್ದು ನನ್ನ ಸೌಭಾಗ್ಯ. ಕೆಲಸ ಸಿಕ್ಕ ಮೇಲೆ ಸಮಾಜದಲ್ಲಿ ಒಳ್ಳೆಯ ಗೌರವ ಸಿಕ್ಕಿದೆ. ವಿವಾಹ ಭಾಗ್ಯವೂ ದೊರೆಯಿತು. ನೆಮ್ಮದಿಯ ಜೀವನ ನಡೆಸುತ್ತಿದ್ದೇನೆ. ಇಂದು ನಮ್ಮ ಉದ್ಯೋಗದಾತರಾದ ಸೋಮಣ್ಣ ಅವರಿಂದ ಬಹುಮಾನ ಪಡೆದಿದ್ದು ಸಂತೋಷ ತಂದಿದೆ. ಮುಂದಿನ ದಿನಗಳಲ್ಲಿ ನಮ್ಮ ಪರ್ಮನೆಂಟ್ ಮಾಡಿಕೊಡಲು ಸರ್ಕಾರದಲ್ಲಿ ಒತ್ತಡ ತಂದು ಸಹಾಯ ಮಾಡಬೇಕೆಂದು ಅವರಲ್ಲಿ ಮನವಿ ಮಾಡಿದ್ದೇವೆ.
>
> - **ಸೋಮು ಸುಬ್ಬಯ್ಯ**, ಮೈಸೂರು.

> ಎಂ.ಕೆ.ಸೋಮಶೇಖರ್‌ರವರು ಅಧ್ಯಕ್ಷರಾಗಿದ್ದ ವೇಳೆ ಚನ್ನಪಟ್ಟಣ ಕಾರ್ಖಾನೆ ಪುನರ್ ಪ್ರಾರಂಭವಾದ ಹಿನ್ನೆಲೆ ನಮಗೆಲ್ಲ ಉದ್ಯೋಗ ದೊರಕಿತು.ಇಂದು ಅವರನ್ನು ಭೇಟಿ ಮಾಡುವ ಅವಕಾಶ ಸಿಕ್ಕಿತು. ಮೈಸೂರಿಗೆ ಬಂದು ಕೆಎಸ್‌ಐಸಿ ಟೂರ್ನಮೆಂಟ್‌ನಲ್ಲಿ ಭಾಗವಹಿಸಿದ್ದು ಖುಷಿ ತಂದಿದೆ. ನಮ್ಮ ತಂಡ ಒಳ್ಳೆಯ ಹೋರಾಟ ಮಾಡಿದರೂ ಸಹ ಫೈನಲ್‌ಗೆ ತಲುಪಲಾಗಲಿಲ್ಲ. ಆದರೆ ಇಷ್ಟು ಜನ ಸ್ನೇಹಿತರನ್ನು ಒಟ್ಟಿಗೆ ಭೇಟಿಯಾಗಿದ್ದು ತುಂಬಾ ಸಂತಸವನ್ನುಂಟು ಮಾಡಿದೆ.
>
> -**ಸಚಿನ್**, ಚನ್ನಪಟ್ಟಣ.

ದಾಪುಚಿ ಅವರ 'ತೇಜಸ್ಸಿನ ಅಲೆ' ಕೃತಿ ಬಿಡುಗಡೆ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಭಾನುವಾರ ದಾಪುಚಿ ಅವರ 'ತೇಜಸ್ಸಿನ ಅಲೆ' ಕೃತಿಯನ್ನು ಹಿರಿಯ ಸಾಹಿತಿ ಬನ್ನೂರು ಕೆ. ರಾಜು ಬಿಡುಗಡೆಗೊಳಿಸಿದರು.

ಮೈಸೂರು, ಅ.20(ಜಿಎ)–ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ದಾಪುಚಿ ಕಾವ್ಯನಾಮದ ದಾಸರಹಳ್ಳಿ ಪುಟ್ಟಸ್ವಾಮಿ ಚಿಕ್ಕಣ್ಣ ಅವರ 'ತೇಜಸ್ಸಿನ ಅಲೆ' ಕೃತಿಯನ್ನು ಹಿರಿಯ ಸಾಹಿತಿ ಬನ್ನೂರು ಕೆ ರಾಜು ಬಿಡುಗಡೆಗೊಳಿಸಿದರು.

ಬಳಿಕ ಮಾತನಾಡಿದ ಅವರು, ದಾಪುಚಿ ಅವರು ಓದುವ ಹುಚ್ಚನ್ನು ಕನ್ನಡಿಗರಿಗೆ ಹಿಡಿಸುವ ಜಾಯಮಾನದ ಕವಿ. ಓದುವ ದಿಸೆಯಲ್ಲಿ ಉತ್ತೇಜನ ನೀಡುತ್ತಾರೆ. ಈ ನಡುವೆಯೇ ಅವರು ನಾಲ್ಕು ಕಾದಂಬರಿ ರಚಿಸಿದ್ದು, ಸದ್ದಿಲ್ಲದೇ ಕನ್ನಡದ ಕಾಯಕ ಮಾಡುತ್ತಿದ್ದಾರೆ. ಹೀಗಾಗಿ ಅವರಿಂದ ಹೆಚ್ಚೆಚ್ಚು ಕಾವ್ಯ, ಕೃತಿಗಳು ಹೊರ ಬರಲಿ ಎಂದು ಆಶಿಸಿದರು.

ಕೃತಿ ಕುರಿತು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಎಂ. ಚಂದ್ರಶೇಖರ್ ಮಾತನಾಡಿ, ಈಗ ಬಿಡುಗಡೆಗೊಂಡಿರುವ ತೇಜಸ್ಸಿನ ಅಲೆ ಕೃತಿಯು ಗಾತ್ರದಲ್ಲಿ ಚಿಕ್ಕದಾಗಿದ್ದರೂ ಇಲ್ಲಿ ಒಳಗೊಂಡಿರುವ ಸುಮಾರು 52 ಕವಿತೆಗಳಲ್ಲಿ ದಾಪುಚಿ ಅವರು ತಮ್ಮ ಅನುಭವವನ್ನು ಅಕ್ಷರದಲ್ಲಿ ಮೂಡಿಸಿದ್ದಾರೆ ಎಂದರು.

ಲೇಖಕ ದಾಪುಚಿ, ಕಾರ್ಖಾನೆಗಳು, ಬಾಯ್ಲರ್, ಕೈಗಾರಿಕಾ ಸುರಕ್ಷತೆ ಹಾಗೂ ಸ್ವಾಸ್ಥ್ಯ ಇಲಾಖೆಯ ಜಂಟಿ ನಿರ್ದೇಶಕ ಡಾ.ಪಿ.ಮಾಲೇಗೌಡ, ಪ್ರಕಾಶಕ ಡಿ.ಎನ್. ಲೋಕಪ್ಪ, ಗಂಧನಹಳ್ಳಿ ಜಿ.ಎಸ್. ವೆಂಕಟೇಶ್, ಎಂ.ಜಿ.ಪರಮೇಶ್ ಮಡಬಲ್ಲು, ಬಿ.ಎ.ಕೇಶವಮೂರ್ತಿ, ಜಿ.ಕೆ. ರೂಪಶ್ರೀ ಚಿಕ್ಕಣ್ಣ ಮತ್ತಿತರರು ಉಪಸ್ಥಿತರಿದ್ದರು.

ಯುವ ಸಂಸತ್ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳ ವಾಕ್ಚಾತುರ್ಯ



ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜಿನ ಸಭಾಂಗಣದಲ್ಲಿ ನಡೆದ ಯುವ ಸಂಸತ್ ಸ್ಪರ್ಧೆಯನ್ನು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮರಿಸ್ವಾಮಿ ಉದ್ಘಾಟಿಸಿದರು.

ಮೈಸೂರು,ಅ.20(ಎಂಟಿವೈ)– ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ವಿವಿಧ ಕಾಲೇಜುಗಳಿಂದ ಆಯ್ಕೆಯಾಗಿರುವ ವಿದ್ಯಾರ್ಥಿಗಳು, ಜನಪ್ರತಿನಿಧಿಗಳು ಅಧಿವೇಶನದಲ್ಲಿ ನಡೆಸುವ ವಾಕ್ ಚಾತುರ್ಯವನ್ನು ಪ್ರದರ್ಶಿಸಿ ಗಮನ ಸೆಳೆದರು.

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ, ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿದ್ಯಾರ್ಥಿಗಳಲ್ಲಿ ರಾಜಕೀಯ ಪ್ರಜ್ಞೆ ಮೂಡಿಸುವ ನಿಟ್ಟಿನಲ್ಲಿ ಪ್ರತಿವರ್ಷ ಯುವ ಸಂಸತ್ ಸ್ಪರ್ಧೆಯನ್ನು ಆಯೋಜಿಸುತ್ತಾ ಬಂದಿದ್ದು, ಈ ಬಾರಿ ನಡೆದ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ವಿವಿಧ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳು ಆಡಳಿತ ಮತ್ತು ಪ್ರತಿಪಕ್ಷಗಳಲ್ಲಿನ ವಿವಿಧ ಜವಾಬ್ದಾರಿಗಳನ್ನು ಸ್ಪರ್ಧೆಯಲ್ಲಿ ಪ್ರದರ್ಶಿಸುವುದರೊಂದಿಗೆ ತಮ್ಮ ವಾಕ್ಚಾತುರ್ಯದ ಮೂಲಕ ಜನಪ್ರತಿನಿಧಿಗಳ ಕರ್ತವ್ಯವನ್ನು ತೋರ್ಪಡಿಸಿದರು. ಅಲ್ಲದೆ, ಸರ್ಕಾರದ ಮುಖ್ಯಸ್ಥರಾದ ಮುಖ್ಯಮಂತ್ರಿ, ಸಚಿವ ಸಂಪುಟದ ಸದಸ್ಯರ ಜವಾಬ್ದಾರಿ, ವಿರೋಧ ಪಕ್ಷದ ನಾಯಕರ ಮಹತ್ವ, ಅಧಿವೇಶನದಲ್ಲಿ ಸ್ಪೀಕರ್ ಪಾತ್ರದ ಬಗ್ಗೆ ಸ್ಪರ್ಧಿಗಳು ತಿಳಿಸಿದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಉಪನ್ಯಾಸಕರು ಹೌಹಾರುವಂತೆ ಮಾಡಿದರು.

ಯುವ ಸಂಸತ್ ಸ್ಪರ್ಧೆಯನ್ನು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪ ನಿರ್ದೇಶಕ ಮರಿಸ್ವಾಮಿ ಉದ್ಘಾಟಿಸಿ ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳಿಗೆ ರಾಜಕೀಯ ಪ್ರಜ್ಞೆಯೊಂದಿಗೆ ಪ್ರಜಾಪ್ರಭುತ್ವದ ಮಹತ್ವವನ್ನು ಮನವರಿಕೆ ಮಾಡಿಕೊಡುವ ಅಗತ್ಯವಿದೆ ಈ ಹಿನ್ನೆಲೆಯಲ್ಲಿ ಯುವ ಸಂಸತ್ ಸ್ಪರ್ಧೆ ಮಹತ್ವದ ಪಾತ್ರವಹಿಸುತ್ತದೆ ಇಂದಿನ ಯುವ ಪೀಳಿಗೆಗೆ ರಾಜಕೀಯ ಸದ್ಗುಣ ಬೆಳೆಸುವ ಅನಿವಾರ್ಯತೆ ಇದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾರಾಜ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಉದಯಶಂಕರ್ ವಹಿಸಿದ್ದರು. ಈ ಸಂದರ್ಭದಲ್ಲಿ ರಾಜ್ಯಶಾಸ್ತ್ರದ ಉಪನ್ಯಾಸಕರಾದ ಹೇಮಲತಾ, ರಮೇಶ್, ಕಾಳಿಪ್ರಸಾದ್, ಶಿವಕುಮಾರ್, ಸ್ವಾಮಿಗೌಡ ಹಾಗೂ ಇನ್ನಿತರು ಉಪಸ್ಥಿತರಿದ್ದರು. ಉಪನ್ಯಾಸಕರಾದ ಡಾ.ಬಿ.ಶಶಿಕಲಾ ಸ್ವಾಗತಿಸಿದರೆ, ಡಾ.ಮಂಗಳಮೂರ್ತಿ ಪ್ರಾಸ್ತಾವಿಕ ನುಡಿ ಆಡಿದರು.

ಡಾ|| ಅರಕಲಗೂಡು ನೀಲಕಂಠಮೂರ್ತಿಯವರ ವೈದ್ಯಕೀಯ ಕೃತಿಗಳ ಬಿಡುಗಡೆ



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅವರು ಡಾ.ಅರಕಲಗೂಡು ನೀಲಕಂಠಮೂರ್ತಿ ಅವರ ಮೂರು ಕೃತಿಗಳನ್ನು ಬಿಡುಗಡೆ ಮಾಡಿದರು.

ಮೈಸೂರು,ಅ.20(ಎಂಟಿವೈ)–ವೈದ್ಯಕೀಯ ಕ್ಷೇತ್ರದ ಕ್ಲಿಷ್ಟಕರವಾದ ವೈದ್ಯಕೀಯ ವಿಷಯಗಳನ್ನು ಡಾ.ಅರಕಲಗೂಡು ನೀಲಕಂಠಮೂರ್ತಿ ತಮ್ಮ ಕೃತಿಗಳಲ್ಲಿ ಜನಸಾಮಾನ್ಯರಿಗೂ ಸುಲಭವಾಗಿ ಅರ್ಥವಾಗುವಂತೆ ಸರಳ ಭಾಷೆಯಲ್ಲಿ ಬರೆದಿದ್ದಾರೆ ಎಂದು ಮೈಸೂರು ವೈದ್ಯಕೀಯ ಕಾಲೇಜಿನ ವಿಶ್ರಾಂತ ಪ್ರಾಧ್ಯಾಪಕ ಡಾ.ಜೆ. ಪ್ರಸನ್ನಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಭಾನುವಾರ ಅರಸು ಜಾಗೃತಿ ಅಕಾಡೆಮಿ ಚಾರಿಟಬಲ್ ಟ್ರಸ್ಟ್ ಹಾಗೂ ವೈದ್ಯವಾರ್ತಾ ಪ್ರಕಾಶನದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಾ.ಅರಕಲಗೂಡು ನೀಲಕಂಠಮೂರ್ತಿ ಅವರ ಬಿಡುಗಡೆಯಾದ 'ಸಮಯದ ನೀರು ಮತ್ತೆ ಹರಿಯುವ ಹೊತ್ತು', 'ಹೆಣ್ಣೊಬ್ಬಳು ಗರ್ಭಕೋಶಗಳೆರಡು', 'ಮುಖದಿಂದೆದ್ದು ಎತ್ತಲೋ ನಡೆದ ಕಣ್ಣು' ಕೃತಿಗಳನ್ನು ಕುರಿತು ಮಾತನಾಡಿದ ಅವರು, ದ್ವಿಗರ್ಭಾಶಯ ಕೇವಲ ಶೇ.0.3 ಪ್ರತಿಶತ ಮಹಿಳೆಯರಲ್ಲಿ ಕಂಡುಬರುವ ಜನ್ಮಜಾತ ವೈಕಲ್ಯ. ಇದರ ಲಕ್ಷಣ ಮತ್ತು ಕಾರಣ, ರೋಗ ಪರೀಕ್ಷೆ ಮತ್ತು ಚಿಕಿತ್ಸಾ ವಿಧಾನಗಳನ್ನು ಅತ್ಯಂತ ಕುತೂಹಲಕಾರಿಯಾಗಿಯೂ ಬರೆದಿದ್ದಾರೆ. ಈ ಕೃತಿಯು ವೈದ್ಯರಿಗೆ ಮಾತ್ರವಲ್ಲದೆ ಪುಸ್ತಕ ಓದಿದವರ ಜ್ಞಾನವನ್ನು ಹೆಚ್ಚಿಸುತ್ತದೆ ಎಂದರು.

ಕೊಬ್ಬಿನ ಕಥೆ, ಅತಿಕ್ರಿಯಾಶೀಲ ಮೂತ್ರಕೋಶ, ಬೆಲ್ಸ್ ಪಾಲ್ಸಿ, ಬೆವರು, ಗುದರೋಗಗಳು, ಮೂತ್ರಪಿಂಡದ ಕಲ್ಲುಗಳು, ಅತಿನಿದ್ರಾರೋಗ, ನಿದ್ರಾಭಂಗ ಶ್ವಾಸಸ್ತಂಭನ, ಸಿಕಲ್‌ಸೆಲ್ ಅನೀಮಿಯ ಕುರಿತು ಕೂಡ ಅರ್ಥಪೂರ್ಣವಾಗಿ ಬರೆದಿದ್ದಾರೆ. ಬಹುತೇಕ ರೋಗಗಳಿಗೆ ನಾವು ತಿನ್ನುವ ಆಹಾರ ಹಾಗೂ ಜಂಕ್‌ಫುಡ್ ಕಾರಣ. ಆದ್ದರಿಂದ ಈ ರೀತಿಯ ಆಹಾರ ಸೇವನೆ ಬಗ್ಗೆ ಎಚ್ಚರಿಕೆ ವಹಿಸಬೇಕು. 70ರ ದಶಕದಲ್ಲಿ ಸತತ 13 ವರ್ಷಗಳ ಕಾಲ ಸೋಮಾಲಿಯಾ ದೇಶದಲ್ಲಿ ಸೇವೆ ಸಲ್ಲಿಸಿದ್ದ ಡಾ.ನೀಲಕಂಠಮೂರ್ತಿ ಅವರು 'ಕಗ್ಗತ್ತಲ ಖಂಡದಲ್ಲಿ' ಎಂಬ ಕೃತಿಯಲ್ಲಿ ಅಲ್ಲಿನ ಪರಿಸ್ಥಿತಿಯನ್ನು ಚೆನ್ನಾಗಿ ಕಟ್ಟಿಕೊಟ್ಟಿದ್ದಾರೆ. ಇದಾದ ನಂತರ ಈಗ ಎರಡು ಕವನಗಳನ್ನು ರಚಿಸಿದ್ದು, ಅವುಗಳು ಕೂಡ ಉತ್ತಮ ವಸ್ತುಗಳನ್ನು ಹೊಂದಿವೆ ಎಂದರು.

ಇದಕ್ಕೂ ಮುನ್ನ ಕಾರ್ಯಕ್ರಮವನ್ನು ವಿಧಾನಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ ಉದ್ಘಾಟಿಸಿ ಮಾತನಾಡಿ, ಸಾಹಿತ್ಯ ಬರವಣಿಗೆ ಕಷ್ಟಕರ. ಪ್ರತಿವಾಕ್ಯ, ಪ್ರತಿ ಪದವನ್ನು ಯೋಚಿಸಿ, ಮರುಪರಿಶೀಲಿಸಿ, ತಿದ್ದಿ ಬರೆಯಬೇಕಾಗುತ್ತದೆ. ಮನುಷ್ಯನ ದೇಹರಚನೆ ನಿಗೂಢ ಪ್ರಕ್ರಿಯೆ. ಅದರಲ್ಲೂ ಮಹಿಳೆಯರ ದೇಹ ರಚನೆ ಸಂಕೀರ್ಣವಾಗಿರುತ್ತದೆ. ಮಹಿಳೆ ಮಗುವಿಗೆ ಜನ್ಮ ನೀಡಬೇಕಾಗುತ್ತದೆ. ಹೀಗಿರುವಾಗ ಅಪರೂಪದ ಎರಡು ಗರ್ಭಕೋಶಗಳಿರುವ ಪ್ರಕರಣದ ಬಗ್ಗೆ ಬರೆದಿದ್ದಾರೆ. ಈ ಬಗ್ಗೆ ಹೆಚ್ಚಿನ ಸಂಶೋಧನೆ ಆಗಬೇಕು ಎಂದು ಅಭಿಪ್ರಾಯಪಟ್ಟರು.

ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ವೃತ್ತಿ ವ್ಯಾಪಾರೀಕರಣವಾಗಿದೆ. ಹೀಗಿರುವಾಗ ಇನ್ನೂ ಕೂಡ ಅಲ್ಲಲ್ಲಿ ಮಾನವೀಯ ಮೌಲ್ಯಗಳನ್ನು ಉಳಿಸಿಕೊಂಡು ವೈದ್ಯರು ಸೇವೆ ಮಾಡುತ್ತಿದ್ದಾರೆ. ಮನುಷ್ಯನಿಗೆ ಗಾಳಿ ಮತ್ತು ನೀರು ತುಂಬಾ ಮುಖ್ಯ ಆದ್ದರಿಂದ ನೀರಿನ ಸಂರಕ್ಷಣೆಯ ಬಗ್ಗೆ ಪ್ರತಿಯೊಬ್ಬರೂ ಗಮನಹರಿಸಬೇಕು ಎಂದು ಅವರು ಹೇಳಿದರು.

ವೈದ್ಯವಾರ್ತಾ ಪ್ರಕಾಶನದ ನಿರ್ದೇಶಕ ಎಚ್‌ಎಂಟಿ ಲಿಂಗರಾಜೇ ಅರಸು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಟ್ರಸ್ಟ್ ಸಂಸ್ಥಾಪಕ ಡಾ.ಎಂಜಿಆರ್ ಅರಸು ಉಪಸ್ಥಿತರಿದ್ದರು. ಎಂ. ನಟರಾಜ್ ಪ್ರಾರ್ಥಿಸಿದರೆ, ಡಾ.ಕೆ.ಎಸ್. ಉಮಾಶಂಕರ್ ಸ್ವಾಗತಿಸಿದರು. ನಟರಾಜ್ ವಂದಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ವಿಶ್ವಂ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ವೆಟ್ಟೈಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಜಿಗ್ರಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಮಾರ್ಟಿನ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಮಾರ್ಟಿನ್ (ಕ)	4 ಪ್ರದರ್ಶನಗಳು
ರಾಜಕಮಲ್	
ಭೈರಾದೇವಿ (ಕ)	4 ಪ್ರದರ್ಶನಗಳು
ಸಂಗಂ	
ಮಾರ್ಟಿನ್ (ಕ)	4 ಪ್ರದರ್ಶನಗಳು
ಲಿಡೋ	
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸಿಂಹರೂಪಿಣಿ (ಕ)	4 ಪ್ರದರ್ಶನಗಳು
ಪ್ರಭಾ	
ಭೀಮ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	**ವೆಟ್ಟೈಯನ್ (ತ)**: ಬೆ.9.55ಕ್ಕೆ, ಸಂ.4ಕ್ಕೆ, ರಾ.10.05ಕ್ಕೆ, **ಮಾರ್ಟಿನ್ (ಕ)**: ಮ.1.05ಕ್ಕೆ, ರಾ.7.10ಕ್ಕೆ.
ಸ್ಕ್ರೀನ್ 2	**ಜಿಗ್ರಾ (ಹಿಂ)**: ಬೆ.10.15ಕ್ಕೆ, ರಾ.7ಕ್ಕೆ, ರಾ.10ಕ್ಕೆ, **ಮಾರ್ಟಿನ್ (ಕ)**: ಮ.1.15ಕ್ಕೆ, **ಬ್ಲ್ಯಾಕ್ (ತ)**: ಸಂ.4.30ಕ್ಕೆ
ಸ್ಕ್ರೀನ್ 3	**ಮಾರ್ಟಿನ್ (ಕ)**: ಬೆ.10.10ಕ್ಕೆ, ರಾ.7ಕ್ಕೆ, **ಇಬ್ಬನಿ ತಬ್ಬಿದ ಇಳೆಯಲಿ (ಕ)**: ಮ.1.15ಕ್ಕೆ, **ಅನ್ನ (ಕ)**: ಸಂ.4.30ಕ್ಕೆ, **ವಿಕ್ಕಿ ವಿದ್ಯಾ ಕಾ ಹೂ ವಾಲ ವೀಡಿಯೋ (ಹಿಂ)**: ರಾ.10ಕ್ಕೆ.
ಸ್ಕ್ರೀನ್ 4	**ಮಾರ್ಟಿನ್ (ಕ)**: ಬೆ.9ಕ್ಕೆ, ಸಂ.4ಕ್ಕೆ, ರಾ.10ಕ್ಕೆ, **ವೆಟ್ಟೈಯನ್ (ತ)**: ಮ.12.50ಕ್ಕೆ, ಸಂ.6.55ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	**ಬ್ಯಾಡ್ ನ್ಯೂಸ್ (ಹಿಂ)**: ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	**ಕಲ್ಕಿ 2898 ಎಡಿ (ಕ)**: ಬೆ.11.40ಕ್ಕೆ, ಸಂ.6.05ಕ್ಕೆ, **ಟ್ವಿಸ್ಟರ್ಸ್ (ಇಂ)**: ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	**ಇಂಡಿಯನ್ 2 (ತ)**: ಬೆ.9.40ಕ್ಕೆ, ಸಂ.4.05ಕ್ಕೆ, **ಟ್ವಿಸ್ಟರ್ಸ್ (ಇಂ)**: ಮ.1.20ಕ್ಕೆ, ರಾ.7.45ಕ್ಕೆ, **ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ)**: ರಾ.10.30ಕ್ಕೆ.
ಸ್ಕ್ರೀನ್ 4	**ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ)**: ಬೆ.11.30ಕ್ಕೆ, **ಕಲ್ಕಿ 2898 ಎಡಿ (3ಡಿ)(ತೆ)**: ಮ.2.50ಕ್ಕೆ, **ಹಿರಣ್ಯ (ಕ)**: ಸಂ.6.30ಕ್ಕೆ, **ಕಲ್ಕಿ 2898 ಎಡಿ (ಹಿಂ)**: ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	**ದೇವರ 1 (ತೆ)**: ಮ.12.20ಕ್ಕೆ, **ವೆಟ್ಟೈಯನ್ (ತ)**: ಮ.3.35ಕ್ಕೆ, ಸಂ.6.40ಕ್ಕೆ, **ಮಾರ್ಟಿನ್ (ಕ)**: ರಾ.9.45ಕ್ಕೆ.
ಸ್ಕ್ರೀನ್ 2	**ವೆಟ್ಟೈಯನ್ (ತ)**: ಬೆ.10ಕ್ಕೆ, **ಮಾರ್ಟಿನ್ (ಕ)**: ಮ.1ಕ್ಕೆ, ಮ.3.30ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	**ಮಾರ್ಟಿನ್ (ಕ)**: ಬೆ.9ಕ್ಕೆ, ಬೆ.11.50ಕ್ಕೆ, ಮ.2.40ಕ್ಕೆ, ಸಂ.5.30ಕ್ಕೆ, **ವೆಟ್ಟೈಯನ್ (ತ)**: ರಾ.8.20ಕ್ಕೆ.
ಸ್ಕ್ರೀನ್ 4	**ವೆಟ್ಟೈಯನ್ (ಕ)**: ಮ.12.25ಕ್ಕೆ, **ವೆಟ್ಟೈಯನ್ (ತ)**: ಮ.3.30ಕ್ಕೆ, ಸಂ.6.35ಕ್ಕೆ, ರಾ.9.40ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, **ಶ್ರೀಕಾಂತ್ (ಹಿಂ)**: ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, **ಸ್ಟಾರ್ (ತ)**: ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, **ಅರಮನೈ 4 (ತ)**: ಮ.12.30ಕ್ಕೆ, **ಪ್ರತಿನಿಧಿ 2 (ತೆ)**: ಮ.12.55ಕ್ಕೆ, ರಾ.9.15ಕ್ಕೆ, **ರಾಮನ ಅವತಾರ (ಕ)**: ಮ.3.40ಕ್ಕೆ, **ಅಂಜನೀಪುತ್ರ (ಕ)**: ಸಂ.4ಕ್ಕೆ, **ಗ್ರೇ ಗೇಮ್ಸ್ (ಕ)**: ಸಂ.6.35ಕ್ಕೆ, **ಕೃಷ್ಣಮ್ಮ (ತೆ)**: ರಾ.7.25ಕ್ಕೆ, **ಮಾರಿವಿಲ್ಲಿನ್ ಗೋಪುರಂಗಲ್ (ಮ)**: ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಜಿಲ್ಲಾ, ರಾಜ್ಯಮಟ್ಟದ ಪ್ರಬಂಧ ಸ್ಪರ್ಧೆ

ಮೈಸೂರು,ಅ.20– ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಚಾಲಿತ ವಿಶ್ವವಿದ್ಯಾಲಯದಲ್ಲಿ ಗಾಂಧಿ ತತ್ವ ಸಿದ್ಧಾಂತಗಳ ಮಹತ್ವದ ಬಗ್ಗೆ ವಿಶ್ಲೇಷಿಸಿ ಪ್ರಬಂಧ ಬರೆಯಲು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮತ್ತು ರಾಜ್ಯಮಟ್ಟದ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಆಸಕ್ತರು ಜಿಲ್ಲಾ ಮಟ್ಟದ ಸ್ಪರ್ಧೆಗೆ ಪ್ರಬಂಧವನ್ನು ಬರೆದು ಅ.30ರೊಳಗಾಗಿ kstaessay.kannada@gamil.com ಮತ್ತು kstaessay.english@ gmail.com Email ಮೂಲಕ ಕಳುಹಿಸಬಹುದು. ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ನ.12ರಂದು ಆಯೋಜಿಸಲಾಗುವ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಸ್ಥಳದಲ್ಲೇ ಪ್ರಬಂಧವನ್ನು ಕನ್ನಡ ಮತ್ತು ಇಂಗ್ಲೀಷ್ ಪ್ರತ್ಯೇಕ ಭಾಷೆಗಳಲ್ಲಿ ಬರೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಚಂದ್ರಶೇಖರ ಮೂರ್ತಿ ಎಸ್. ಅವರ ಮೊ.ಸಂ: 9686449019, 968691901 ದೂ.ಸಂ: 080–29721550 ಅಥವಾ www.ks tacademy.in ವೆಬ್‌ಸೈಟ್ ಮೂಲಕ ವೀಕ್ಷಿಸಬಹುದು ಎಂದು ಎ.ಎಂ.ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇಶ - ವಿದೇಶ


ದಾಳಿ ನಡೆಸಿ ಘೋರ ತಪ್ಪು ಮಾಡಿದ್ದೀರಿ, ಭಾರಿ ಬೆಲೆ ತೆರಬೇಕಾಗುತ್ತದೆ: ಹಿಜ್ಬುಲ್ಲಾಗೆ ಇಸ್ರೇಲ್ ಎಚ್ಚರಿಕೆ



ಜೆರುಸಲೇಂ: ನನ್ನನ್ನು ಹತ್ಯೆಗೈಯಲು ಯತ್ನಿಸಿ ಹಿಜ್ಬುಲ್ಲಾ ಸಂಘಟನೆ ಘೋರ ತಪ್ಪು ಮಾಡಿದೆ, ಇದಕ್ಕೆ ಭಾರೀ ಬೆಲೆ ತೆರಬೇಕಾಗುತ್ತದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

ಇಸ್ರೇಲ್‌ನ ಕೆಸರಿಯಾನಗರದಲ್ಲಿರುವ ತಮ್ಮ ಖಾಸಗಿ ನಿವಾಸದ ಮೇಲೆ ಹಿಜ್ಬುಲ್ಲಾ ನಡೆಸಿದ ಡ್ರೋನ್ ದಾಳಿ ಬಗ್ಗೆ ಕುರಿತು ನೆತನ್ಯಾಹು ಪ್ರತಿಕ್ರಿಯೆ ನೀಡಿದ್ದಾರೆ. ದಾಳಿ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಹಿಜ್ಬುಲ್ಲಾ ಸಂಘಟನೆಯನ್ನು 'ಇರಾನ್‌ನ ಪ್ರಾಕ್ಸಿ' ಎಂದು ಉಲ್ಲೇಖಿಸಿದ್ದು, ನನ್ನ ಮೇಲಿನ ಈ ಹತ್ಯೆ ಪ್ರಯತ್ನವು ನನ್ನನ್ನಾಗಲೀ ಅಥವಾ ಇಸ್ರೇಲ್ ಯುದ್ಧವನ್ನು ಮುಂದುವರೆಸುವುದನ್ನಾಗಲೀ ತಡೆಯಲು ಸಾಧ್ಯವಿಲ್ಲ. ನನ್ನನ್ನು ಮತ್ತು ನನ್ನ ಪತ್ನಿಯನ್ನ ಹತ್ಯೆ ಮಾಡಲು ಇರಾನ್‌ನ ಪ್ರಾಕ್ಸಿ ಹಿಜ್ಬುಲ್ಲಾ ನಡೆಸಿದ ಪ್ರಯತ್ನವು ಒಂದು ದೊಡ್ಡ ತಪ್ಪು. ಇದು ನಮ್ಮ ಭವಿಷ್ಯವನ್ನು ಭದ್ರಪಡಿಸುವ ಸಲುವಾಗಿ ನಮ್ಮ ಶತ್ರುಗಳ ವಿರುದ್ಧ ನಮ್ಮ ನ್ಯಾಯಯುತ ಯುದ್ಧವನ್ನು ಮುಂದುವರಿಸುವುದರಿಂದ ನನ್ನನ್ನಾಗಲೀ ಅಥವಾ ಇಸ್ರೇಲ್ ರಾಷ್ಟ್ರವನ್ನಾಗಲೀ ತಡೆಯಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

ಮೂರಕ್ಕಿಂತ ಹೆಚ್ಚು ಮಕ್ಕಳನ್ನು ಮಾಡಿಕೊಳ್ಳಿ, ವಿಶೇಷ ಯೋಜನೆ ಕೊಡುತ್ತೇವೆ



ಅಮರಾವತಿ: ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ರಾಜ್ಯದ ನಿವಾಸಿಗಳಿಗೆ ಹೆಚ್ಚಿನ ಮಕ್ಕಳನ್ನು ಹೊಂದುವಂತೆ ಸಲಹೆ ನೀಡಿದ್ದಾರೆ. ಆಂಧ್ರಪ್ರದೇಶದಲ್ಲಿ ವೃದ್ಧರ ಸಂಖ್ಯೆ ಹೆಚ್ಚುತ್ತಿರುವುದನ್ನು ಗಮನದಲ್ಲಿಟ್ಟುಕೊಂಡು ನಾಯ್ಡು ಈ ಸಲಹೆ ನೀಡಿದ್ದಾರೆ ಎನ್ನಲಾಗಿದೆ. ಇನ್ನು ರಾಜ್ಯ ಸರ್ಕಾರ ಜನಸಂಖ್ಯಾ ನಿರ್ವಹಣೆಗಾಗಿ ಹೊಸ ಯೋಜನೆ ರೂಪಿಸುತ್ತಿದೆ ಎಂದರು. ಈ ಯೋಜನೆ ಮೂಲಕ, ಹೆಚ್ಚಿನ ಮಕ್ಕಳನ್ನು ಹೊಂದಿರುವ ಕುಟುಂಬಗಳಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ ಯೋಜನೆ ನಡೆಯುತ್ತಿದೆ. ಅಷ್ಟೇ ಅಲ್ಲದೇ ಎರಡಕ್ಕಿಂತ ಹೆಚ್ಚು ಮಕ್ಕಳನ್ನು ಹೊಂದಿರುವವರು ಮಾತ್ರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸಲು ಸಾಧ್ಯವಾಗುವ ಕಾನೂನನ್ನು ಸಹ ಪರಿಗಣಿಸಲಾಗುತ್ತಿದೆ. ಈ ಹಿಂದೆ, ಹೆಚ್ಚು ಮಕ್ಕಳನ್ನು ಹೊಂದಿರುವ ಜನರು ಚುನಾವಣೆಯಲ್ಲಿ ಸ್ಪರ್ಧಿಸಬಾರದು ಎಂದು ನಾವು ಕಾನೂನು ಮಾಡಿದ್ದೆವು. ಆದರೆ ಈಗ ನಾವು ಆ ಕಾನೂನನ್ನು ರದ್ದುಗೊಳಿಸಿದ್ದೇವೆ ಮತ್ತು ಅದನ್ನು ಹಿಂಪಡೆಯುವ ಬಗ್ಗೆ ಯೋಚಿಸುತ್ತಿದ್ದೇವೆ. ಹೆಚ್ಚು ಮಕ್ಕಳನ್ನು ಹೊಂದಿರುವ ಕುಟುಂಬಗಳಿಗೆ ಹೆಚ್ಚಿನ ಸೌಲಭ್ಯಗಳನ್ನು ನೀಡುವ ಬಗ್ಗೆ ಸರ್ಕಾರ ಯೋಚಿಸುತ್ತಿದೆ.

ತೈವಾನ್ ಸುತ್ತುವರೆದ ಚೀನಾ ಗಸ್ತುಪಡೆ; ಯುದ್ಧಕ್ಕೆ ಸಿದ್ಧತೆ



ಚೀನಾ: ಚೀನಾ ಹಾಗೂ ತೈವಾನ್ ನಡುವಣ ಉದ್ವಿಗ್ನ ಸ್ಥಿತಿ ಇದೆ ಎನ್ನುವುದು ಎಲ್ಲರಿಗೂ ತಿಳಿದ ವಿಷಯವಾಗಿದೆ. ಇತ್ತೀಚೆಗೆ ಬೀಜಿಂಗ್ ತೈವಾನ್ ಅನ್ನು ಸುತ್ತುವರಿಯಲು ವಾಯುಪಡೆ, ಭೂ ಸೇನೆ, ನೌಕಾಪಡೆ ನಿಯೋಜಿಸಿದ್ದು, ತೈವಾನ್ ಸುತ್ತಲೂ ಸಮುದ್ರದಲ್ಲಿ ಸುತ್ತುವರೆದಿವೆ ಎಂದು ಅಲ್ಲಿನ ಮಾಧ್ಯಮಗಳು ವರದಿ ಮಾಡಿದೆ. ಚೀನಾದ ನೌಕಾಪಡೆ, ವಾಯುಪಡೆ, ಭೂಸೇನೆಗಳು ಸಮರ ತಾಲೀಮಿನ ಹೆಸರಲ್ಲಿ ದ್ವೀಪ ರಾಷ್ಟ್ರ ತೈವಾನ್ ದೇಶವನ್ನು ಸುತ್ತುವರಿದಿದ್ದು, ಯುದ್ಧಕ್ಕೆ ಸಿದ್ಧರಾಗಿ ಎಂದು ಚೀನಾ ಅಧ್ಯಕ್ಷರು ಕರೆ ನೀಡಿದ್ದಾರೆ. ಚೀನಾ ಸೇನೆಯಾದ ಪೀಪಲ್ ಲಿಬರೇಷನ್ ಆರ್ಮಿಯ ಕ್ಷಿಪಣಿ ಪಡೆಯ ಸಿದ್ಧತೆ ವೀಕ್ಷಿಸಲು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಕ್ಷಿಪಣಿ ಬ್ರಿಗೇಡ್ ಬಳಿ ತೆರಳಿ, ಯುದ್ಧಕ್ಕೆ ಸರಿಯಾದ ಸಿದ್ಧತೆ ನಡೆಸಿಕೊಳ್ಳಿ ಎಂದು ಸೂಚಿಸಿದ್ದಾರೆ. ನಮ್ಮ ಪಡೆಯ ಬಳಿ ಎಲ್ಲ ರೀತಿಯ ಯುದ್ಧ ಸನ್ನದ್ಧತೆ ಇರುವ ಕುರಿತಾಗಿ ಖಚಿತಪಡಿಸಿಕೊಳ್ಳಿ ಎಂದು ಹೇಳಿದ್ದಾರೆ. ಚೀನಾದ ಗಡಿಗೆ ತಾಗಿಕೊಂಡಿರುವ ತೈವಾನ್ ಒಂದು ಪುಟ್ಟ ದ್ವೀಪ ರಾಷ್ಟ್ರವಾಗಿದೆ. ಇನ್ನು ಈ ದ್ವೀಪವನ್ನು ಚೀನಾ ಮೊದಲಿನಿಂದಲೂ ಈ ದ್ವೀಪ ತನ್ನದೇ ಭಾಗ ಎಂದು ಹೇಳಿಕೊಂಡು ಬಂದಿದೆ.

ಬಸ್–ಟೆಂಪೋ ಮಧ್ಯೆ ಭೀಕರ ರಸ್ತೆ ಅಪಘಾತ, 8 ಮಕ್ಕಳು ಸೇರಿ 12 ಮಂದಿ ದಾರುಣ ಸಾವು



ಧೋಲ್‌ಪುರ: ಸ್ಲೀಪರ್ ಕೋಚ್ ಬಸ್ ಮತ್ತು ಟೆಂಪೋ ಮಧ್ಯೆ ಭೀಕರ ರಸ್ತೆ ಅಪಘಾತ ಸಂಭವಿಸಿದ ಪರಿಣಾಮ 8 ಮಕ್ಕಳು ಸೇರಿದಂತೆ ಒಟ್ಟು 12 ಮಂದಿ ದಾರುಣವಾಗಿ ಸಾವನ್ನಪ್ಪಿರುವ ಘಟನೆ ರಾಜಸ್ಥಾನದಲ್ಲಿ ನಡೆದಿದೆ. ರಾಜಸ್ಥಾನ ಧೋಲ್ ಪುರದ ಬರಿ ಸದರ್ ಪೊಲೀಸ್ ಠಾಣೆ ವ್ಯಾಪ್ತಿಯ ಸುನಿಪುರ್ ಬಳಿ ಸ್ಲೀಪರ್ ಕೋಚ್ ಬಸ್ ಟೆಂಪೋಗೆ ಡಿಕ್ಕಿ ಹೊಡೆದಿದೆ. ಈ ಭೀಕರ ಅಪಘಾತದಲ್ಲಿ 12 ಮಂದಿ ಸಾವನ್ನಪ್ಪಿದ್ದಾರೆ. ಮೃತರಲ್ಲಿ ಐವರು ಮಕ್ಕಳು, ಮೂವರು ಬಾಲಕಿಯರು, ಇಬ್ಬರು ಮಹಿಳೆಯರು ಹಾಗೂ ಓರ್ವ ಪುರುಷ ಎಂದು ತಿಳಿದುಬಂದಿದೆ.

ಪೊಲೀಸರ ಮಾಹಿತಿ ಪ್ರಕಾರ, ಅಪಘಾತದಲ್ಲಿ ಬಲಿಯಾದವರು ಸೇರಿದಂತೆ ಆ ಬಸ್‌ನಲ್ಲಿ ಇದ್ದವರೆಲ್ಲರೂ ಬರೌಲಿಯ ತಮ್ಮ ಸಂಬಂಧಿಕರ ಭಾತ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಹಿಂತಿರುಗುತ್ತಿದ್ದರು. ಅಪಘಾತದಲ್ಲಿ ಬಸ್‌ಗೂ ಹಾನಿಯಾಗಿದ್ದು, ಪೊಲೀಸರು ಬಸ್ ಜಪ್ತಿ ಮಾಡಿದ್ದಾರೆ. ಈ ಅವಘಡ ಸಂಭವಿಸಿದಾಗ ಟೆಂಪೋದಲ್ಲಿ ಹೆಚ್ಚಿನ ಪ್ರಯಾಣಿಕರು ಗಾಢ ನಿದ್ದೆಯಲ್ಲಿದ್ದರು ಎಂದು ತಿಳಿದುಬಂದಿದೆ. ಈ ಅವಘಡ ಸಂಭವಿಸಿದಾಗ ಬಸ್‌ನ ವೇಗ ತುಂಬಾ ಹೆಚ್ಚಿತ್ತು ಎಂದು ತಿಳಿದು ಬಂದಿದೆ.

ಕೆನಡಾದಲ್ಲಿ ಹಿಂದೂಗಳಿಗೆ ಭಯದ ವಾತಾವರಣ

ಕರ್ನಾಟಕ ಮೂಲದ ಸಂಸದ ಚಂದ್ರ ಆರ್ಯ ಕಳವಳ



ಟೊರಾಂಟೋ (ಕೆನಡಾ): ಖಲಿಸ್ತಾನ್ ಪ್ರತ್ಯೇಕತಾವಾದಿ ಉಗ್ರಗಾಮಿಗಳ ಆರ್ಭಟ ಕೆನಡಾ ದೇಶದಲ್ಲಿ ತೀವ್ರಗೊಳ್ಳುತ್ತಿದೆ ಎಂದು ಭಾರತೀಯ ಮೂಲದ ಕೆನಡಾ ಸಂಸದ ಚಂದ್ರ ಆರ್ಯ ಕಳವಳ ವ್ಯಕ್ತಪಡಿಸಿದ್ದಾರೆ. ಕೆನಡಾದಲ್ಲಿ ಹಿಂದೂಗಳ ಸುರಕ್ಷತೆ ಕುರಿತಾಗಿಯೂ ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಈ ರೀತಿಯ ಬೆದರಿಕೆಗಳನ್ನು ನಾನೂ ಎದುರಿಸಿದ್ದೇನೆ ಎಂದು ಕರ್ನಾಟಕ ಮೂಲದವರೂ ಆದ ಚಂದ್ರ ಆರ್ಯ ಹೇಳಿಕೊಂಡಿದ್ದಾರೆ.

ಮೂಲತಃ ತುಮಕೂರು ಜಿಲ್ಲೆಯ ಶಿರಾ ತಾಲೂಕಿನವರಾದ ಚಂದ್ರ ಆರ್ಯ, 2006ರಿಂದ ಕೆನಡಾದಲ್ಲಿದ್ದಾರೆ. ಹಂತಹಂತವಾಗಿ ತಮ್ಮ ಔದ್ಯೋಗಿಕ ಜೀವನದಲ್ಲಿ ಏಳಿಗೆ ಕಂಡು ಇದೀಗ ಕೆನಡಾ ಸಂಸದರಾಗಿರುವ ಅವರು, ಕೆನಡಾ ದೇಶದಲ್ಲಿ ಹೆಚ್ಚುತ್ತಿರುವ ಖಲಿಸ್ತಾನ್ ಪ್ರತ್ಯೇಕವಾದದ ಕುರಿತಾಗಿ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಅವರನ್ನು ಉದ್ದೇಶಿಸಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸುದೀರ್ಘವಾಗಿ ವಿವರಿಸಿದ್ದಾರೆ. ಹಿಂದೂ ಸಮುದಾಯಕ್ಕೆ ಬೆದರಿಕೆ ಒಡ್ಡುತ್ತಿರುವ ಖಲಿಸ್ತಾನಿ ಗುಂಪುಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಚಂದ್ರ ಆರ್ಯ ಆಗ್ರಹಿಸಿದ್ದಾರೆ. ಖಲಿಸ್ತಾನಿ ಪ್ರತ್ಯೇಕತಾವಾದಿಗಳಿಂದ ತಾವು ಎದುರಿಸಿದ ಬೆದರಿಕೆಯನ್ನೂ ಚಂದ್ರ ಆರ್ಯ ವಿವರಿಸಿದ್ದಾರೆ.

ಅಸ್ಪೃಶ್ಯತೆಯಿಂದ ನೊಂದ ದಲಿತರು, ಹಿಂದುಳಿದವರು ಇಸ್ಲಾಂ ಧರ್ಮಕ್ಕೆ ಸೇರ್ಪಡೆ

ಸಾರ್ವಜನಿಕ ಸೀರತ್ ಸಮಾವೇಶದಲ್ಲಿ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಬಂಜಗೆರೆ ಜಯಪ್ರಕಾಶ ಅಭಿಮತ

ಮೈಸೂರು,ಅ.20(ಜಿಎ)–ಜಾತಿ ವ್ಯವಸ್ಥೆ ಮತ್ತು ವರ್ಣ ವ್ಯವಸ್ಥೆಯಿಂದ ನೊಂದ ದಲಿತರು, ಹಿಂದುಳಿದ ವರ್ಗದ ಜನರು ಅಸ್ಪೃಶ್ಯತೆ ಹೋಗಲಾಡಿಸಲು ಹೆಚ್ಚಾಗಿ ಇಸ್ಲಾಂ ಧರ್ಮಕ್ಕೆ ಸೇರಿಕೊಂಡರೆ ಹೊರತು ಅದು ಅಕ್ರಮವಾಗಿ ಸೇರಿಕೊಂಡಿದ್ದಲ್ಲ ಎಂದು ಕರ್ನಾಟಕ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಬಂಜಗೆರೆ ಜಯಪ್ರಕಾಶ್ ಅಭಿಪ್ರಾಯಪಟ್ಟರು.


ಮೈಸೂರಿನ ಕಲಾಮಂದಿರದಲ್ಲಿ ಜಮಾಅತೆ ಇಸ್ಲಾಮಿ ಹಿಂದ್ ಮೈಸೂರು ಶಾಖೆ ವತಿಯಿಂದ ಪ್ರವಾದಿ ಮುಹಮ್ಮದ್ ಬದುಕಿನ ಚಿತ್ರಣವನ್ನು ಪ್ರಸ್ತುತಪಡಿಸುವ ಸಾರ್ವಜನಿಕ ಸೀರತ್ ಸಮಾವೇಶದಲ್ಲಿ 'ಪ್ರವಾದಿ ಮುಹಮ್ಮದ್(ಸ)' ಲೇಖನ ಸಂಕಲನವನ್ನು ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಬಂಜಗೆರೆ ಜಯಪ್ರಕಾಶ್ ಬಿಡುಗಡೆಗೊಳಿಸಿದರು. ಶಾಸಕರಾದ ತನ್ವೀರ್ ಸೇಠ್, ಕೆ.ಹರೀಶ್‌ಗೌಡ, ಅಯೂಬ್ ಖಾನ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರಿನ ಕಲಾಮಂದಿರದಲ್ಲಿ ಜಮಾಅತೆ ಇಸ್ಲಾಮಿ ಹಿಂದ್ ಮೈಸೂರು ಶಾಖೆ ವತಿಯಿಂದ ಪ್ರವಾದಿ ಮುಹಮ್ಮದ್ ಬದುಕಿನ ಚಿತ್ರಣವನ್ನು ಪ್ರಸ್ತುತ ಪಡಿಸುವ ಸಾರ್ವಜನಿಕ ಸೀರತ್ ಸಮಾವೇಶದಲ್ಲಿ 'ಪ್ರವಾದಿ ಮುಹಮ್ಮದ್(ಸ)' ಲೇಖನ ಸಂಕಲನ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಸನಾತನ ಧರ್ಮದಲ್ಲಿ ಕುಲಕಸುಬಿಗೆ ಅಂಟಿಕೊಳ್ಳಬೇಕಿತ್ತು. ಕುಲ ನಿಬಂಧನೆ ಹೇರಲಾಗಿತ್ತು. ಇಸ್ಲಾಂ ಅನ್ಯ ಮತ ದ್ವೇಷಿಯಲ್ಲ, ಮತ್ತು ಮತಾಂತರ ಮಾಡುವ ಉದ್ದೇಶ ಹೊಂದಿರಲಿಲ್ಲ. ಭಾರತದಲ್ಲಿ ಇಸ್ಲಾಂ ಬಂದ ನಂತರ ಬೇಕಾದಷ್ಟು ಭಕ್ತಿ ಪಂಥಗಳ ಸ್ಥಾಪನೆಗೆ ಕಾರಣವಾಯಿತು. ಭಾರತೀಯ ಸಂಸ್ಕೃತಿಯ ಮೇಲೆ ಬಹಳಷ್ಟು ಪರಿಣಾಮವನ್ನು ಬೀರುತ್ತದೆ ಎಂದು ತಿಳಿಸಿದರು.

ಪ್ರವಾದಿ ಮುಹಮ್ಮದ್ ಕುರಿತು ಅವರ ಜೀವನ ಸಂದೇಶಗಳನ್ನು ತಿಳಿಸುವ ಪುಸ್ತಕ ಬಿಡುಗಡೆ ಮಾಡಿದ್ದೇನೆ. ಇಲ್ಲಿ ಪ್ರವಾದಿ ಮುಹಮ್ಮದ್ ಬಗ್ಗೆ ಅರ್ಥಪೂರ್ಣವಾಗಿ ಲೇಖನ ಬರೆದಿದ್ದಾರೆ, ಅವರ ಜೀವನ ಕಾಲಘಟ್ಟದಲ್ಲಿ ಎದುರಿಸಿದ ಘಟನೆಗಳು ಸೇರಿದಂತೆ ಬಹುಮುಖ ಪ್ರತಿಭೆ ಆಗಿರುವ ಮುಹಮ್ಮದ್ ಪೈಗಂಬರ್ ಅವರು ಧಾರ್ಮಿಕ ಮುಖಂಡರಾಗಿ ಬೆಳೆದು ಬಂದ ಚಿತ್ರಣವನ್ನು ಕಟ್ಟಿಕೊಟ್ಟಿದ್ದಾರೆ ಎಂದು ಅವರು ಹೇಳಿದರು.

ಇಸ್ಲಾಂ ಧರ್ಮದ ಬಗ್ಗೆ ತಿಳಿಸಿಕೊಡುವ ಹಲವಾರು ಲೇಖನಗಳು ಬಂದಿವೆ. ಕುರಾನ್ ಸಹ ಕನ್ನಡದಲ್ಲಿ ಬಂದಿದೆ. ಭಾರತದಲ್ಲಿ ಸುಮಾರು 25 ಕೋಟಿ ಇಸ್ಲಾಂ ಧರ್ಮದ ಜನರಿದ್ದಾರೆ. ಭಾರತದಂತಹ ವೈವಿಧ್ಯಮಯ ಸಾಂಸ್ಕೃತಿಕ ಜೀವನದಲ್ಲಿ ಇಸ್ಲಾಂ ಧರ್ಮದ ಸಂದೇಶಗಳನ್ನು ಹೆಚ್ಚು ಪ್ರಚಾರ ಮಾಡಬೇಕಿತ್ತು. ಇಸ್ಲಾಂ ಧರ್ಮವು ಸಮಾಜದ ಬಗ್ಗೆ ಇರುವಂತಹ ಧೋರಣೆಯನ್ನು ಹೆಚ್ಚಿನ ರೀತಿಯಲ್ಲಿ ತಿಳಿಸುವ ಕೆಲಸವನ್ನು ಹೆಚ್ಚು ಹೆಚ್ಚು ಮಾಡಬೇಕಿತ್ತು ಎಂದು ಅವರು ತಿಳಿಸಿದರು.

ಸೇಂಟ್ ಫಿಲೋಮಿನಾ ಚರ್ಚ್‌ನ ಫಾದರ್ ಸ್ಟ್ಯಾನಿ ಡಿ ಅಲ್ಮೆಡಾ ಮಾತನಾಡಿ, ಶಾಂತಿಯನ್ನು ದೇಶದಲ್ಲಿ ಮಾತ್ರವಲ್ಲದೆ ಜಾಗತಿಕವಾಗಿ ಸಾರುವ ಪ್ರವಾದಿಗಳು, ಸಮಾಜದಲ್ಲಿ ತಪ್ಪು ಗ್ರಹಿಕೆಗಳನ್ನು ತಿಳಿಸುವ ಕೆಲಸವನ್ನು ಮಾಡುತ್ತಾ ಬಂದಿದ್ದಾರೆ. ಮೈಸೂರಿನಲ್ಲಿ ಹಿಂದೂ ಮತ್ತು ಮುಸ್ಲಿಂ ಸಮುದಾಯದ ರಾಜರು ಆಳ್ವಿಕೆ ನಡೆಸಿದ್ದಾರೆ. ಸಮಾಜದಲ್ಲಿ ಉತ್ತಮ ಬಾಂಧವ್ಯ ಹೊಂದಿದ್ದರು. ಜಗತ್ತಿನಲ್ಲಿ ಶಾಂತಿ ನೆಲೆಸಲು ಪ್ರವಾದಿ ಮಹಮ್ಮದ್ ನಿಜ ಚಿತ್ರಣ ಹೆಚ್ಚು ಪ್ರಚಾರವಾಗಲಿ. ಅವರು ಶತ್ರು ಕ್ಷಮೆಯನ್ನು ತೋರುವ ಮೂಲಕ ಪ್ರಸಿದ್ಧರಾಗಿದ್ದರು. ಸೀರತ್ ಸಮಾವೇಶ ಪ್ರವಾದಿ ಬಹುಮುಖ್ಯ ವ್ಯಕ್ತಿತ್ವವನ್ನು ಪ್ರಚಾರ ಮಾಡಲಿ ಎಂದರು.

ಶಾಂತಿ ಪ್ರಕಾಶನದ ವ್ಯವಸ್ಥಾಪಕ ಮಹಮ್ಮದ್ ಕುಂಞ ಮಾತನಾಡಿ, ನಾವು ಇಂದು ಧರ್ಮದ ಹೆಸರಲ್ಲಿ ದ್ವೇಷ, ವಿಭಜನೆಯನ್ನು ಸೃಷ್ಟಿಸುವ ಕಾಲಘಟ್ಟದಲ್ಲಿ ಇದ್ದೇವೆ. ಆದ್ದರಿಂದ ಜಮಾಅತೆ ಇಸ್ಲಾಂ ಪ್ರವಾದಿಗಳ ಬದುಕು ಸಂದೇಶಗಳನ್ನು ಪ್ರಚಾರ ಮಾಡುತ್ತಿದೆ. ಅವರ ಸಂದೇಶ ನಿಜವಾದ ಬೆಳಕನ್ನು ಸಾರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಸರ್‌ಖಾರಿಖು ಮೌಲಾನಾ ಮುಹಮ್ಮದ್ ಉಸ್ಮಾನ್ ಶರೀಫ್, ಶಾಸಕ ಕೆ.ಹರೀಶ್‌ಗೌಡ, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ನಿವೃತ್ತ ಐಎಎಸ್ ಅಧಿಕಾರಿ ಎ.ಬಿ. ಇಬ್ರಾಹಿಂ, ಜ.ಇ.ಹಿಂದ್ ಅಧ್ಯಕ್ಷ ಮೊಹಮ್ಮದ್ ಅಸ್ಲಾಂ, ಸ್ವಾಗತ ಸಮಿತಿ ಸಂಚಾಲಕ ಮುಹಮ್ಮದ್ ಫಾರೂಕ್ ನಪ್ಸರ್, ಸ್ವಾಗತ ಸಮಿತಿ ಸದಸ್ಯರಾದ ನೂರ್ ಮುಹಮ್ಮದ್ ಮರ್ಚೆಂಟ್, ಕಲೀಂ ಅಹ್ಮದ್, ಉಪ ಸಂಚಾಲಕ ಅಸದುಲ್ಲಾ, ಕರ್ನಾಟಕ ಹಿಂದುಳಿದ ವರ್ಗದ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಂ ಇನ್ನಿತರರಿದ್ದರು.

> “ಯಾವ ಧರ್ಮದಲ್ಲಿ ಹುಟ್ಟಬೇಕೆಂದು ಯಾರೂ ಅರ್ಜಿಗಳನ್ನು ಹಾಕಿಕೊಂಡು ಹುಟ್ಟಿಲ್ಲ. ನಮ್ಮ ಆಚರಣೆ ಯಾವ ರೀತಿ ಇರಬೇಕು ಎಂದು ಧರ್ಮ ತಿಳಿಸುತ್ತದೆ. ಪ್ರವಾದಿಗಳು ಒಂದು ಕೋಮಿಗಾಗಿ ಅಲ್ಲ, ಮಾನವ ಕುಲಕ್ಕೆ ಸಂಬಂಧಿಸಿದ್ದು, ಪ್ರವಾದಿಗಳ ಜೀವನ ಶೈಲಿ ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಾಗಿದಾಗ ಸಮಸ್ಯೆಗಳು ಉಂಟಾಗುವುದಿಲ್ಲ. ಪ್ರವಾದಿ ಮುಹಮ್ಮದ್ ಜೀವನ ಚರಿತ್ರೆಯನ್ನು ವಿವಿಧ ಭಾಷೆಯಲ್ಲಿ ತರುವಂತಹ ಕೆಲಸವನ್ನು ಮಾಡಬೇಕಿದೆ. ಇಸ್ಲಾಂ ಧರ್ಮದಲ್ಲಿ ಪ್ರವಾದಿ ಮುಹಮ್ಮದ್ ಅಂತಿಮ ಪ್ರವಾದಿಗಳು. ಇವರ ಆದರ್ಶಗಳನ್ನು ಅನುಸರಿಸುವ ಮೂಲಕ ನಿಜವಾದ ಮನುಷ್ಯರಾಗಲು ಸಾಧ್ಯ. ಮನುಷ್ಯ ಪರಿಪೂರ್ಣ ಆಗಲು ಸಾಧ್ಯವಿಲ್ಲ. ತಪ್ಪುಗಳು ಸಹಜವಾಗಿಯೇ ಇರುತ್ತದೆ. ಆದರೆ, ಸರಿಪಡಿಸಲು ಧಾರ್ಮಿಕ ಗ್ರಂಥಗಳು ಸಹಾಯ ಮಾಡುತ್ತವೆ.
>
> –ತನ್ವೀರ್ ಸೇಠ್, ಶಾಸಕ

ಕಾವ್ಯ ರಚಿಸುವಾಗ ಪದ ಬಳಕೆ ಬಗ್ಗೆ ಎಚ್ಚರ ವಹಿಸಬೇಕು

ಹಿರಿಯ ಲೇಖಕಿ ಪ್ರೊ. ಚ.ಸರ್ವಮಂಗಳಾ ಸಲಹೆ


ಮೈಸೂರಿನ ವಿಜಯನಗರದಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಭಾನುವಾರ ನಡೆದ ದಸರಾ ಕವಿಕಾವ್ಯ ಸಂಭ್ರಮ ರಾಜ್ಯಮಟ್ಟದ ಕಾವ್ಯೋತ್ಸವ ಕಾರ್ಯಕ್ರಮವನ್ನು ಹಿರಿಯ ಲೇಖಕಿ ಪ್ರೊ.ಚ.ಸರ್ವಮಂಗಳ ಅವರು ಉದ್ಘಾಟಿಸಿ, ಮಾತನಾಡಿದರು.

ಮೈಸೂರು, ಅ.20(ಎಂಟಿವೈ)– ಕಾವ್ಯ ರಚನೆ ವೇಳೆ ಕವಿಗಳು ಪದ ಬಳಕೆ ಮೇಲೆ ಎಚ್ಚರ ವಹಿಸುವ ಅಗತ್ಯವಿದ್ದು, ಭಾಷೆಯಲ್ಲಿ ಆಡಂಬರತೆ ಇಲ್ಲದಂತೆ ನೋಡಿಕೊಳ್ಳುವ ಅಗತ್ಯವಿದೆ ಎಂದು ನಿವೃತ್ತ ಪ್ರಾಂಶುಪಾಲರೂ ಹಾಗೂ ಹಿರಿಯ ಲೇಖಕರಾದ ಪ್ರೊ. ಚ.ಸರ್ವಮಂಗಳಾ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ವಿಜಯನಗರದಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಭಾನುವಾರ ಸ್ಪಂದನ ಸಾಂಸ್ಕೃತಿಕ ಪರಿಷತ್ತು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ದಸರಾ ಕವಿಕಾವ್ಯ ಸಂಭ್ರಮ ರಾಜ್ಯಮಟ್ಟದ ಕಾವ್ಯೋತ್ಸವ ಮತ್ತು ಡಾ.ಸಿಪಿಕೆ ಕಾವ್ಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಾವ್ಯ ರಚನೆಯಲ್ಲಿ ಭಾಷೆ ಹಾಗೂ ಪದ ಬಳಕೆ ಪ್ರಮುಖ ಪಾತ್ರ ವಹಿಸುತ್ತದೆ. ಕಾವ್ಯದ ಮೂಲ ಉಸಿರೇ ಭಾಷೆಯಾಗಿದೆ. ಈ ಹಿನ್ನೆಲೆಯಲ್ಲಿ ಕಾವ್ಯ, ಕೃತಿ ರಚನೆ ವೇಳೆ ಕವಿಗಳು ಪದ ಬಳಸುವಾಗ ಎಚ್ಚರ ವಹಿಸಬೇಕು. ಅಲ್ಲದೆ, ಯಾವುದೇ ಕಾರಣಕ್ಕೂ ಭಾಷೆಯಲ್ಲಿ ಆಡಂಬರ ಉಂಟಾಗದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ವಿಶ್ವದ ಹಲವೆಡೆ ಇಂದು ಯುದ್ಧದ ಕಾರ್ಮೋಡ ಕವಿದಿದೆ. ದೇಶ ದೇಶಗಳ ನಡುವೆ ಯುದ್ಧದ ಭೀತಿ ಉಂಟಾಗಿದೆ. ಯುದ್ಧವನ್ನು ತಡೆಯುವ ಶಕ್ತಿ ಕಾವ್ಯಕ್ಕೆ ಇದೆ. ಈ ನಿಟ್ಟಿನಲ್ಲಿ ಯುದ್ಧಕ್ಕೆ ವಿರೋಧ ವ್ಯಕ್ತಪಡಿಸಿರುವ ಕಾವ್ಯಗಳ ಸಂಖ್ಯೆ ಹೆಚ್ಚಾಗಬೇಕು. ಆ ಮೂಲಕ ಶಾಂತಿ ನೆಲೆಸುವ ಪ್ರಯತ್ನಕ್ಕೆ ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಸಿ.ಪಿ.ಕೃಷ್ಣಕುಮಾರ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಹೆಚ್.ಕೆ.ರಾಮು, ಮೈಸೂರು ವಿವಿಯ ಸಿಂಡಿಕೇಟ್ ಸದಸ್ಯ ಡಾ.ಈ.ಸಿ.ನಿಂಗರಾಜ್ ಗೌಡ, ಸ್ಪಂದನಾ ಸಾಂಸ್ಕೃತಿಕ ಪರಿಷತ್ ಅಧ್ಯಕ್ಷ ಟಿ.ಎಸ್.ಸತೀಶ್ ಜವರೇಗೌಡ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಸಂಘಟನಾ ಕಾರ್ಯದರ್ಶಿ ಬಿ.ಎಸ್.ಸತೀಶ್, ಮಡಿಲು ಸೇವಾ ಟ್ರಸ್ಟ್‌ನ ಸಂಸ್ಥಾಪಕ ಅರಸು ಮಡಿಲು, ನಿವೃತ್ತ ಮುಖ್ಯ ಶಿಕ್ಷಕ ಯೋಗೇಂದ್ರ ಮತ್ತಿತರರು ಉಪಸ್ಥಿತರಿದ್ದರು.

ಇಂದು ಮೈಸೂರಿಗೆ ಸಿಎಂ ಸಿದ್ದರಾಮಯ್ಯ

ಮೈಸೂರು, ಅ.20(ಬಿಎಲ್‌ಯು)– ವಿವಿಧ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು



ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ (ಅ.21) ಮೈಸೂರಿಗೆ ಆಗಮಿಸಲಿದ್ದಾರೆ. ನಾಳೆ ಬೆಳಿಗ್ಗೆಯಿಂದ ಮಧ್ಯಾಹ್ನದ ತನಕ ಚಿತ್ರದುರ್ಗ ಜಿಲ್ಲೆಯ ಹಲವು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಸಿದ್ದರಾಮಯ್ಯ ಸಂಜೆ 6 ಗಂಟೆಗೆ ರಸ್ತೆ ಮೂಲಕ ಮೈಸೂರಿಗೆ ಆಗಮಿಸಿ, ಇಲ್ಲೇ ವಾಸ್ತವ್ಯ ಹೂಡುವರು. ಅ.22ರಂದು ಬೆಳಗ್ಗೆ 11 ಗಂಟೆಗೆ ತಾವು ಪ್ರತಿನಿಧಿಸುತ್ತಿರುವ ವರುಣ ವಿಧಾನಸಭಾ ಕ್ಷೇತ್ರದ ತಾಯೂರು ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸುವರು. ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡ ನಂತರ ರಾಮಕೃಷ್ಣನಗರದ ತಮ್ಮ ನಿವಾಸದಲ್ಲಿ ವಿಶ್ರಾಂತಿ ಪಡೆಯುವ ಸಿದ್ದರಾಮಯ್ಯ ರಾತ್ರಿ 8 ಗಂಟೆಗೆ ಮೈಸೂರು ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದಲ್ಲಿ ಬೆಂಗಳೂರಿಗೆ ತೆರಳುವರು.

ಮಹಾರಾಷ್ಟ್ರ ಚುನಾವಣೆ: ಬಿಜೆಪಿ ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ; ಫಡ್ನವೀಸ್, ಅಶೋಕ್ ಚವ್ಹಾಣ್ ಪುತ್ರಿಗೆ ಟಿಕೆಟ್

ಮುಂಬೈ, ಅ.20– ಮಹಾರಾಷ್ಟ್ರ


ಫಡ್ನವಿಸ್

ವಿಧಾನಸಭಾ ಚುನಾವಣೆಗೆ ಉಪ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಸೇರಿದಂತೆ 99 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಭಾರತೀಯ ಜನತಾ ಪಕ್ಷ ಭಾನುವಾರ ಬಿಡುಗಡೆ ಮಾಡಿದೆ.

ಫಡ್ನವೀಸ್ ನಾಗ್ಪುರ ನೈರುತ್ಯ ಕ್ಷೇತ್ರದಿಂದ ಸ್ಪರ್ಧಿಸಲಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ಚಂದ್ರಶೇಖರ್ ಬಾವಂಕುಲೆ ಕಮ್ಟಿ ಕ್ಷೇತ್ರದಿಂದ ಕಣಕ್ಕಿಳಿದಿದ್ದಾರೆ. ರಾಜ್ಯ ಸಚಿವರಾದ ಗಿರೀಶ್ ಮಹಾಜನ್ ಜಮ್ನೇರ್‌ನಿಂದ,


ಶ್ರೀಜಯಾ

ಸುಧೀರ್ ಮುಂಗಂಟಿವಾರ್ ಬಲ್ಲಾರ್‌ಪುರದಿಂದ, ಅಶೋಕ್ ಚವ್ಹಾಣ್ ಪುತ್ರಿ ಶ್ರೀಜಯ ಅಶೋಕ್ ಚವಾಣ್ ಭೋಕರ್‌ನಿಂದ ಸ್ಪರ್ಧಿಸಲಿದ್ದಾರೆ.

ಆಶಿಶ್ ಶೇಲಾರ್ ವಂಡ್ರೆ ವೆಸ್ಟ್‌ನಿಂದ, ಮಂಗಲ್ ಪ್ರಭಾತ್ ಲೋಧಾ ಮಲಬಾರ್ ಹಿಲ್‌ನಿಂದ, ರಾಹುಲ್ ನಾರ್ವೇಕರ್ ಕೊಲಾಬಾದಿಂದ ಮತ್ತು ಛತ್ರಪತಿ ಶಿವೇಂದ್ರ ರಾಜೇ ಭೋಸಲೆ ಸತಾರಾದಿಂದ ಚುನಾವಣೆ ಎದುರಿಸಲಿದ್ದಾರೆ. ನ.20ರಂದು ಚುನಾವಣೆ ನಡೆಯಲಿದ್ದು, ನ.23ರಂದು ಫಲಿತಾಂಶ ಪ್ರಕಟವಾಗಲಿದೆ. ಹಾಲಿ ವಿಧಾನ ಸಭೆಯ ಅವಧಿ ನ.26ಕ್ಕೆ ಕೊನೆಗೊಳ್ಳಲಿದೆ.

ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಬಾಂಬ್ ಬೆದರಿಕೆ

ಬೆಳಗಾವಿ,ಅ.20–ಕಳೆದ ಕೆಲವು ದಿನಗಳಿಂದ ಹಲವು ವಿಮಾನಯಾನ ಸಂಸ್ಥೆ



ಗಳಿಗೆ ಬಾಂಬ್ ಬೆದರಿಕೆ ಸಂದೇಶ ಬರುತ್ತಿರುವಂತೆಯೇ ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಭಾನುವಾರ ಬಾಂಬ್ ಬೆದರಿಕೆ ಬಂದಿದೆ. ಬಾಂಬ್ ಇಟ್ಟು ವಿಮಾನ ನಿಲ್ದಾಣವನ್ನು ಸ್ಫೋಟಿಸುವುದಾಗಿ ವಿಮಾನ ನಿಲ್ದಾಣದ ನಿರ್ದೇಶಕ ತ್ಯಾಗರಾಜ್ ಅವರ ಇ–ಮೇಲ್‌ಗೆ ಚೆನ್ನೈಯಿಂದ ಅಪರಿಚಿತರಿಂದ ಬೆದರಿಕೆ ಮೇಲ್ ಬಂದಿದೆ. ಇದರಿಂದ ವಿಮಾನ ನಿಲ್ದಾಣದ ಪ್ರದೇಶದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಬಾಂಬ್ ಭೀತಿಯ ನಡುವೆ ವಿಮಾನ ನಿಲ್ದಾಣದಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ. ಶ್ವಾನದಳ, ಬಾಂಬ್ ನಿಷ್ಕ್ರಿಯ ದಳದಿಂದ ವಿಮಾನ ನಿಲ್ದಾಣದಲ್ಲಿ ಪರಿಶೀಲನೆ ನಡೆಸಲಾಗಿದೆ. ಈ ಕುರಿತು ಮಾರಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.